ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೪

# ಪಟ್ಟಿ – ೦೧

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ನಾಲ್ಕನೇ ಅಧಿವೇಶನ

ಸೋಮವಾರ, ದಿನಾಂಕ : ೦೯ನೇ ಡಿಸೆಂಬರ್, ೨೦೨೪

---

## ಸಮೂಹ – I

೧. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

೨. ಇಂಧನ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

೫. ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

೭. ಉನ್ನತ ಶಿಕ್ಷಣ ಸಚಿವರು

---

## ಅನಧಿಕೃತ ಶಾಲೆಗಳ ಬಗ್ಗೆ

**ಶ್ರೀ ಡಿ. ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೧ (೧೧೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹೊಸದಾಗಿ ಖಾಸಗಿ ಶಿಕ್ಷಣ ಸಂಸ್ಥೆ/ಶಾಲೆಗಳನ್ನು ಪ್ರಾರಂಭಿಸಲು ಇರುವ ಮಾನದಂಡಗಳೇನು ; (ವಿವರ ನೀಡುವುದು)

(ಆ) ೨೦೨೩-೨೪ನೇ ಸಾಲಿನಲ್ಲಿ ಎಷ್ಟು ನೂತನ ಖಾಸಗಿ ಶಾಲೆ ಪ್ರಾರಂಭಿಸಲು ಮನವಿಗಳು ಬಂದಿವೆ ; (ವಿವರ ನೀಡುವುದು)

(ಇ) ಕೆಲವು ಜಿಲ್ಲೆ/ತಾಲ್ಲೂಕುಗಳಲ್ಲಿ ಅನಧಿಕೃತವಾಗಿ ಶಾಲೆಗಳು ಪ್ರಾರಂಭವಾಗಿರುವುದು ನಿಜವೇ ; ಹಾಗಿದ್ದರೆ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮವೇನು ;

(ಈ) ಅನಧಿಕೃತ ಶಾಲೆಗಳು ಪ್ರಾರಂಭಿಸುತ್ತಿರುವುದನ್ನು ತಡೆಯಲು CRP/BRP ಮತ್ತು ಶಿಕ್ಷಣ ಸಂಯೋಜಕರುಗಳಿಗೆ ಅಧಿಕಾರ ನೀಡಲಾಗಿದ್ದರೂ ಅವರ ಕರ್ತವ್ಯ ನಿರ್ವಹಿಸಲು ವಿಫಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಮತ್ತು ಅನಧಿಕೃತ ಶಾಲೆ ನಿರ್ಮಾಣ ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಉ) ಸದರಿ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳಿಗೆ ತೊಂದರೆಯಾಗದಂತೆ ಯಾವ ರೀತಿ ಪರ್ಯಾಯ ವ್ಯವಸ್ಥೆಗಳನ್ನು ಸರ್ಕಾರದಿಂದ ಮಾಡಲಾಗುವುದು ? (ವಿವರ ನೀಡುವುದು)

## ಕುಸುಮ ಯೋಜನೆಯ ಅನುಷ್ಠಾನದ ಬಗ್ಗೆ

**ಶ್ರೀ ಡಿ. ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨ (೧೧೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಯಾವ ಯಾವ ಭಾಗಗಳಲ್ಲಿ ಕುಸುಮ ಯೋಜನೆಯಡಿ ಸೋಲಾರ್ ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸೋಲಾರ್ ವಿದ್ಯುತ್ ಘಟಕಗಳಿಂದ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಯೂನಿಟ್ ವಿದ್ಯುತ್ ಲಭ್ಯವಾಗಿದೆ ;

(ಇ) ಲಭ್ಯವಾದ ವಿದ್ಯುತ್‌ನ್ನು ಯಾವ ರೀತಿ ವಿತರಣೆ ಮಾಡಲಾಗಿದೆ ;

(ಈ) ಪ್ರಸ್ತುತ ನೂತನ ಸೋಲಾರ್ ವಿದ್ಯುತ್ ಉತ್ಪಾದನಾ ಘಟಕಗಳ ನಿರ್ಮಾಣ ಕಾರ್ಯಗಳನ್ನು ಎಲ್ಲೆಲ್ಲಿ ಕೈಗೊಳ್ಳಲಾಗಿದೆ ಹಾಗೂ ಎಷ್ಟು ವಿದ್ಯುತ್‌ನ್ನು ನಿರೀಕ್ಷಿಸಲಾಗಿದೆ ?

## ಗೃಹ ಆರೋಗ್ಯ ಯೋಜನೆ ಅನುಷ್ಠಾನದ ಬಗ್ಗೆ

**ಶ್ರೀ ಡಿ. ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩ (೧೨೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗೃಹ ಆರೋಗ್ಯ ಯೋಜನೆ ಯಾವಾಗ ಜಾರಿಗೆ ಬಂದಿದೆ;

ಪ್ರಸ್ತುತ ಈ ಯೋಜನೆ ಯಾವ ಯಾವ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಯ ಉದ್ದೇಶ ಮತ್ತು ಸ್ವರೂಪವೇನು ;

(ಇ) ಈ ಯೋಜನೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ವಿಸ್ತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬಿಸಿ ಊಟದ ಯೋಜನೆಯ ಬಗ್ಗೆ

**ಶ್ರೀ ಎಂ. ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪ (೩೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿ ಊಟದ ಯೋಜನೆಯ ಉದ್ದೇಶವೇನು ; ಈ ಯೋಜನೆ ಪ್ರಾರಂಭಗೊಂಡಿದ್ದು ಯಾವಾಗ ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಈ ಯೋಜನೆಯಡಿಯಲ್ಲಿ ಪೌಷ್ಠಿಕ ಆಹಾರ, ಮೊಟ್ಟೆ ಮತ್ತು ಇನ್ನಿತರ ಉತ್ಪನ್ನಗಳನ್ನು ಯಾವ ರೀತಿ ಖರೀದಿಸಲಾಗುವುದು ; ಪ್ರತಿ ಉತ್ಪನ್ನಗಳಿಗೆ ಸರ್ಕಾರದಿಂದ ನಿಗಧಿಪಡಿಸಿರುವ ಮೊತ್ತವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಡುಗೆ ತಯಾರಕರು, ನಿರ್ವಾಹಕರು ಎಷ್ಟು ಸದರಿಯವರಿಗೆ ಈ ಯೋಜನೆ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೂ ನೀಡಿರುವ ವೇತನ ಹಾಗೂ ಇನ್ನಿತರ ಸೌಲಭ್ಯಗಳ ಸಂಪೂರ್ಣವಾದ ಮಾಹಿತಿ ನೀಡುವುದು ;

(ಈ) ಸದರಿ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಬೇಸಿಗೆ ರಜಾ, ದಸರಾ ರಜಾ ಹಾಗೂ ಬರಗಾಲದ ರಜೆಗಳಲ್ಲಿ ವೇತನ ಹಾಗೂ ಇನ್ನಿತರ ಸೌಲಭ್ಯವನ್ನು ಕಲ್ಪಿಸಲಾಗುತ್ತಿದೆಯೇ ; ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಈ ಸೌಲಭ್ಯವನ್ನು ಕಲ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದು ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಅನುದಾನಿತ ಪದವಿ ಪೂರ್ವ ಕಾಲೇಜು ಉಪನ್ಯಾಸಕರುಗಳ ಸಮಸ್ಯೆ ಬಗ್ಗೆ

**ಶ್ರೀ ಎಸ್. ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೫ (೪೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಅನುದಾನಿತ ಪದವಿ ಪೂರ್ವ ಕಾಲೇಜುಗಳ ಒಟ್ಟು ಸಂಖ್ಯೆ ಎಷ್ಟು ಮತ್ತು ಈ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರು, ಉಪನ್ಯಾಸಕರು ಮತ್ತು ಇತರೆ ಸಿಬ್ಬಂದಿ ವರ್ಗಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಅನುದಾನಿತ ಪದವಿ ಪೂರ್ವ ಕಾಲೇಜುಗಳ ಪ್ರಮುಖ ಸಮಸ್ಯೆಗಳಾದ ಪ್ರತಿ ವರ್ಷದ ಕನಿಷ್ಠ ವಿದ್ಯಾರ್ಥಿಗಳ ದಾಖಲಾತಿಯನ್ನು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಮಾದರಿಯಲ್ಲಿ ವಿದ್ಯಾರ್ಥಿಗಳ ದಾಖಲಾತಿಯನ್ನು ಕಡಿಮೆ ಮಾಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ ;

(ಇ) ಈ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ವೃಂದದ ನೌಕರರುಗಳಲ್ಲಿ ಕಾರ್ಯಭಾರವಿಲ್ಲದ ಎಷ್ಟು ಸಿಬ್ಬಂದಿಗಳನ್ನು ಸರ್ಕಾರ ಕಡ್ಡಾಯ ಸ್ವಯಂ ನಿವೃತ್ತಿ ಹಾಗೂ ವಿಮುಕ್ತಿ ಮಾಡದೆ ಇರಲು ಕಾರಣಗಳೇನು ;

(ಈ) ಸದರಿ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರು ಹಾಗೂ ಇತರೆ ಸಿಬ್ಬಂದಿ ವರ್ಗದವರಿಗೆ ಕಾರ್ಯಭಾರದ ಕೊರತೆ ಇರುವ ಕಾಲೇಜುಗಳ ಎಲ್ಲಾ ವರ್ಗದ ಸಿಬ್ಬಂದಿಗಳನ್ನು ಆಯಾ ಜಿಲ್ಲೆಯ ಅನುದಾನಿತ ಕಾಲೇಜುಗಳು ಅಥವಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯಭಾರವಿರುವ ಕಾಲೇಜಿಗೆ ನಿಯೋಜನೆ ಮಾಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ ?

## ಪ್ರೌಢ ಶಾಲಾ ಶಿಕ್ಷಕರು ಮತ್ತು ಉಪನ್ಯಾಸಕರುಗಳಿಗೆ ಮುಂಬಡ್ತಿ ನೀಡುವ ಕುರಿತು

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೬ (೪೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪ್ರೌಢ ಶಾಲಾ ಶಿಕ್ಷಕರುಗಳಿಗೆ ಮತ್ತು ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ ಬಡ್ತಿಯನ್ನು ನೀಡಲು ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮುಂಬಡ್ತಿಯನ್ನು ನೀಡದೆ ಇರುವ ಶಿಕ್ಷಕರು ಹಾಗೂ ಉಪನ್ಯಾಸಕರುಗಳ ಒಟ್ಟು ಸಿಬ್ಬಂದಿ ವರ್ಗದವರ ಸಂಖ್ಯೆ ಎಷ್ಟು ;

(ಇ) ಸದರಿ ಪ್ರೌಢ ಶಾಲಾ ಶಿಕ್ಷಕರುಗಳಿಗೆ ಹಾಗೂ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ ಶೀಘ್ರದಲ್ಲಿ ಬಡ್ತಿಯನ್ನು ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ವೇತನ ಹೆಚ್ಚಳ ಕುರಿತು

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೭ (೪೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಳಿಗೆ ಕಡಿಮೆ ವೇತನ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಈ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕೆಲಸ ಮಾಡುತ್ತಿರುವ ಉಪನ್ಯಾಸಕರುಗಳಿಗೆ ಪ್ರಸ್ತುತ ನೀಡುತ್ತಿರುವ ವೇತನವು ಕಡಿಮೆ ಇರುವುದರಿಂದ ಸದರಿಯವರ ವೇತನವನ್ನು ಹೆಚ್ಚಳ ಮಾಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ ;

(ಇ) ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರುಗಳಿಗೆ ಪ್ರಸ್ತುತ ಇರುವ ಕಾರ್ಯಭಾರವು ಹೆಚ್ಚಳವಾಗಿರುವುದರಿಂದ ಸರ್ಕಾರ ಈ ಕಾರ್ಯಭಾರದ ಅವಧಿಯನ್ನು ಕಡಿಮೆ ಮಾಡಲು ಯಾವ ಕ್ರಮವನ್ನು ತೆಗೆದುಕೊಂಡಿದೆ ?

## ಕೆ.ಇ.ಎ ಪ್ರಾಧಿಕಾರದ ನೇಮಕಾತಿಯ ಬಗ್ಗೆ

**ಶ್ರೀ ಎಸ್.ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೮ (೮೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಪರೀಕ್ಷಾ ಪ್ರಾಧಿಕಾರವನ್ನು ಯಾವಾಗ ಸ್ಥಾಪನೆ ಮಾಡಲಾಯಿತು ; ಇದರ ಧ್ಯೇಯೋದ್ದೇಶಗಳೇನು ; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಪ್ರಾಧಿಕಾರವು ಸರ್ಕಾರಿ ಇಲಾಖೆ ಮತ್ತು ನಿಗಮ ಮಂಡಳಿಗಳಿಗೆ ಯಾವ ವರ್ಷದಿಂದ ಸಿಬ್ಬಂದಿಗಳನ್ನು ಆಯ್ಕೆ ಮಾಡಲು ಪ್ರಾರಂಭಿಸಿತ್ತು ;

(ಇ) ಸದರಿ ಪ್ರಾಧಿಕಾರವೂ ಯಾವ ಯಾವ ಇಲಾಖೆ ನಿಗಮ ಮತ್ತು ಮಂಡಳಿಗಳಿಗೆ ಯಾವ ಯಾವ ತರದ ಸಿಬ್ಬಂದಿಗಳನ್ನು ಆಯ್ಕೆ ಮಾಡಿ ಆಯ್ಕೆ ಪಟ್ಟಿಯನ್ನು ಕಳುಹಿಸಿಕೊಟ್ಟಿದೆ ; (ವಿವರವಾಗಿ ಇಲಾಖಾವಾರು ಹುದ್ದೆಯ ಪದನಾಮದೊಂದಿಗೆ ವರ್ಷವಾರು ಮಾಹಿತಿ ನೀಡುವುದು)

(ಈ) ೨೦೧೩-೧೪ನೇ ಸಾಲಿನಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವ ವಿದ್ಯಾಲಯ ಬೆಳಗಾವಿ ಇವರು ನೇಮಕ ಮಾಡಿಕೊಂಡ ಬೋಧಕ ಹುದ್ದೆಗಳ ಸಂಖ್ಯೆ ಎಷ್ಟು ? (ಸದರಿ ಹುದ್ದೆಗಳ ಆಯ್ಕೆ ಪಟ್ಟಿಯನ್ನು ನೀಡುವುದು)

## ಶಾಲಾ ಶಿಕ್ಷಣ ಇಲಾಖೆಯಲ್ಲಿ ಅನುದಾನಿತ ಹುದ್ದೆಗಳನ್ನು ತುಂಬುವ ಬಗ್ಗೆ

**ಶ್ರೀ ಎಸ್.ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೯ (೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಅನುದಾನಿತ ಪ್ರೌಢ ಶಾಲೆ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜಿನಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ೨೦೨೦ನೇ ಸಾಲಿನವರೆಗೆ ಖಾಲಿ ಇರುವ ಹುದ್ದೆಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಅನುಮತಿ ನೀಡಿದರೂ ಇದರ ಪ್ರಕ್ರಿಯೆಯು ಇಲಾಖೆ ಹಂತದಲ್ಲಿ ಕುಂಠಿತಗೊಂಡಿರುವುದು ನಿಜವೇ ;

(ಇ) ಹಾಗಿದ್ದರೆ, ಯಾವ ಕಾಲಮಿತಿಯಲ್ಲಿ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು ?

## ೨ ತಿಂಗಳಿಂದ ಅನುದಾನಿತ ಪ್ರೌಢ ಶಾಲಾ ಶಿಕ್ಷಕರಿಗೆ ವೇತನ ಪಾವತಿಸದಿರುವ ಬಗ್ಗೆ

**ಡಾ॥ ಚಂದ್ರಶೇಖರ್ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೦ (೯೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಎರಡು(೨) ತಿಂಗಳಿಂದ ಅನುದಾನಿತ ಪ್ರೌಢ ಶಾಲಾ ಶಿಕ್ಷಕರುಗಳಿಗೆ ವೇತನ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಯಾವ ಕಾಲಮಿತಿಯೊಳಗೆ ವೇತನವನ್ನು ಬಿಡುಗಡೆ ಮಾಡಲು ಆದೇಶ ಹೊರಡಿಸಲಾಗುವುದು ;

(ಇ) ಸದರಿ ವೇತನವನ್ನು ತಡೆಹಿಡಿದಿರುವ BEO ಹಾಗೂ DDPI ಗಳ ಮೇಲೆ ಏನು ಕ್ರಮ ಜರುಗಿಸಲಾಗುವುದು ?

## ಬಡ್ತಿ ನೀಡದೆ ಇರುವುದರ ಕುರಿತು

**ಡಾ॥ ಚಂದ್ರಶೇಖರ್ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೧ (೯೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೧೫ ವರ್ಷಗಳಿಂದ ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜಿಗೆ ಬಡ್ತಿ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಡ್ತಿ ನೀಡದೆ ಇರಲು ಕಾರಣಗಳೇನು ;

(ಆ) ಪ್ರೌಢ ಶಾಲಾ ಶಿಕ್ಷಕರಿಗೆ ಬಡ್ತಿಯನ್ನು ಯಾವ ಕಾಲಮಿತಿಯೊಳಗೆ ನೀಡಲಾಗುವುದು ?

## ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ನೀಡುವ ಪೌಷ್ಠಿಕ ಆಹಾರ ಕುರಿತು

**ಡಾ॥ ಚಂದ್ರಶೇಖರ್ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೨ (೯೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ಪೌಷ್ಠಿಕ ಆಹಾರವಾಗಿ ನೀಡಲಾಗುತ್ತಿರುವ ಮೊಟ್ಟೆ ತೂಕವು ೫೦ g.m ಗಿಂತ ಕಡಿಮೆ ಇದೆ ಎಂದು ಶಾಲಾ ಮುಖ್ಯ ಗುರುಗಳನ್ನು ಅಮಾನತ್ತು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಪೌಷ್ಠಿಕ ಆಹಾರ ಸರಬರಾಜು ಮಾಡುವವರ ಜೊತೆ ಸರ್ಕಾರವು ಮಾಡಿಕೊಂಡಿರುವ ಒಪ್ಪಂದವೇನು ?

## ದೇವದುರ್ಗ ತಾಲ್ಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕುರಿತು

**ಡಾ॥ ಚಂದ್ರಶೇಖರ್ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೩ (೯೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡವು ಕಳೆದ ೫ ವರ್ಷಗಳಿಂದ ಶಿಥಿಲಾವಸ್ಥೆಯಲ್ಲಿದ್ದು, ವಿದ್ಯಾರ್ಥಿಗಳು ಜೀವ ಭಯದಲ್ಲಿ ಅಭ್ಯಾಸ ಮಾಡುತ್ತಿರುವುದು ಮತ್ತು ಕಾಲೇಜು ಕಟ್ಟಡ ಪೂರ್ತಿ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಕಳೆದ ೫ ವರ್ಷಗಳಿಂದ ಕಾಲೇಜು ದುರಸ್ತಿ ಕಾಮಗಾರಿ ಕೈಗೊಳ್ಳದಿರಲು ಕಾರಣವೇನು ; (ವಿವರ ನೀಡುವುದು)

(ಇ) ಕಾಲೇಜು ದುರಸ್ತಿ ಕಾರ್ಯವನ್ನು ಯಾವಾಗ ಕೈಗೊಳ್ಳಲಾಗುವುದು ? (ಮಾಹಿತಿ ನೀಡುವುದು)

## ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಮತ್ತು ಇತರ ಸಿಬ್ಬಂದಿ ಹುದ್ದೆ ಖಾಲಿಯಿರುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೧೪ (೧೦೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ವಿವಿಧ ಸರ್ಕಾರಿ ಆಸ್ಪತ್ರೆಗಳಲ್ಲಿ ಮಂಜೂರಾದ ವಿವಿಧ ಹುದ್ದೆಗಳ ಸಂಖ್ಯೆ ಎಷ್ಟು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವರು ಹುದ್ದೆವಾರು ವಿವರ ನೀಡುವುದು)

(ಆ) ಕಳೆದ ಐದು ವರ್ಷಗಳಲ್ಲಿ ನೇಮಕವಾದ ಮತ್ತು ನಿವೃತ್ತರಾದ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವರ್ಷಾವಾರು ವಿವರ ನೀಡುವುದು)

(ಇ) ಬಹಳಷ್ಟು ಹುದ್ದೆಗಳು ಖಾಲಿಯಿರುವ ಕಾರಣ ರೋಗಿಗಳು ತುರ್ತು ಪರಿಸ್ಥಿತಿಯಲ್ಲಿ ಚಿಕಿತ್ಸೆ ಪಡೆಯಲು ಪರದಾಡುವ ಪರಿಸ್ಥಿತಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದರ ಪರಿಹಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಯಾವ ಕಾಲಮಿತಿಯಲ್ಲಿ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ?

## ಬಡ ಕುಟುಂಬಗಳ ಬಿ.ಪಿ.ಎಲ್. ಕಾರ್ಡ್ ರದ್ದಾಗಿರುವ ಕುರಿತು

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೧೫ (೧೦೬) ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆಯಲ್ಲಿ ಚಾಲ್ತಿಯಲ್ಲಿರುವ ಒಟ್ಟು ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಕಾರ್ಡ್‌ಗಳ ಸಂಖ್ಯೆ ಎಷ್ಟು;

(ಆ) ಈ ಜಿಲ್ಲೆಯಲ್ಲಿ ರದ್ದಾದ/ಪರಿವರ್ತನೆಯಾದ ಬಿ.ಪಿ.ಎಲ್. ಪಡಿತರ ಚೀಟಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಯಾವ ಮಾನದಂಡಗಳ ಆಧಾರದ ಮೇಲೆ ಪಡಿತರ ಚೀಟಿಗಳನ್ನು ರದ್ದುಮಾಡಲಾಗಿದೆ/ಪರಿವರ್ತನೆ ಮಾಡಲಾಗಿದೆ ;

(ಈ) ಹಲವು ಬಡ ಕುಟುಂಬಗಳು ಬಿ.ಪಿ.ಎಲ್. ಪಡಿತರ ಚೀಟಿಗೆ ಅರ್ಹರಿದ್ದರೂ ಸಹ ರದ್ದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವರಿಗೆ ಪುನಃ ಬಿ.ಪಿ.ಎಲ್. ಕಾರ್ಡ್‌ಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಕಾರ್ಡ್ ವಿತರಣೆ ಸಮಯದಲ್ಲಿ ಬಿ.ಪಿ.ಎಲ್. ಮಾನದಂಡದ ವ್ಯಾಪ್ತಿಗೆ ಇದ್ದು ನಂತರ ಬಿ.ಪಿ.ಎಲ್. ಮಾನದಂಡಕ್ಕೆ ಒಳಪಡದೆ ಇದ್ದಲ್ಲಿ ಸ್ವ-ಇಚ್ಛೆಯಿಂದ ಕಾರ್ಡ್ ಹಿಂತಿರುಗಿಸಲು ಇರುವ ಆಯ್ಕೆಗಳು ಯಾವುವು ; ಇದರ ಬಗ್ಗೆ ಸಾರ್ವಜನಿಕರಿಗೆ ತಿಳುವಳಿಕೆ ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

## ತುಮಕೂರು ಜಿಲ್ಲೆಯ ಅರಣ್ಯಗಳ ರಕ್ಷಣೆ ಅರಣ್ಯಕರಣದ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೧೬ (೧೦೭) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆಯಲ್ಲಿ ಇರುವ ಒಟ್ಟು ಅರಣ್ಯ ಭೂಮಿಯ ವಿಸ್ತೀರ್ಣವೆಷ್ಟು ; ಇದರಲ್ಲಿ ಸಾಮಾಜಿಕ ಅರಣ್ಯ, ಮೀಸಲು ಅರಣ್ಯ, ಡೀಮ್ಡ್ ಪರಿಭಾವಿತ ಅರಣ್ಯ ಪ್ರದೇಶ ಎಷ್ಟು ; (ತಾಲ್ಲೂಕುವಾರು ಅರಣ್ಯ ವಿಧದ ಪ್ರಕಾರ ವಿಸ್ತೀರ್ಣ ನೀಡುವುದು)

(ಆ) ಸದರಿ ಅರಣ್ಯಗಳನ್ನು ಭೂ ಮಾಪನ ಮಾಡಲಾಗಿದೆಯೇ ; ಮಾಡದಿದ್ದಲ್ಲಿ ಯಾವ ವರ್ಷ ಮಾಡಲಾಗಿದೆ ಮಾಡದೆ ಇದ್ದಲ್ಲಿ ಮಾಡದಿರಲು ಕಾರಣಗಳೇನು ; ಯಾವ ಕಾಲಮಿತಿಯಲ್ಲಿ ಭೂ ಮಾಪನ ಮಾಡಲಾಗುವುದು ;

(ಇ) ಸದರಿ ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ಜಿಲ್ಲೆಯಲ್ಲಿ ಒತ್ತುವರಿಯಾದ ಅರಣ್ಯ ಪ್ರದೇಶದ ಒತ್ತುವರಿದಾರರ ವಿವರ ನೀಡುವುದು ; (ತಾಲ್ಲೂಕುವಾರು, ಗ್ರಾಮವಾರು ಕೈಗೊಂಡ ಕ್ರಮಗಳೇನು)

(ಈ) ಸಾಮಾಜಿಕ ಅರಣ್ಯ ಮೀಸಲು ಅರಣ್ಯ ಮತ್ತು ಡೀಮ್ಡ್ ಆರಣ್ಯಗಳಲ್ಲಿ ಅರಣ್ಯೀಕರಣ ಮಾಡಲಾಗಿದೆಯೇ ; ಮಾಡಲಾಗಿದ್ದರೆ ಕಳೆದ ಹತ್ತು ವರ್ಷಗಳಲ್ಲಿ ಅರಣ್ಯೀಕರಣಕ್ಕೆ ಮಾಡಲಾದ ವೆಚ್ಚವೆಷ್ಟು ಯಾವ ಪ್ರಭೇದದ ಗಿಡಗಳನ್ನು ನೆಡಲಾಗಿದೆ ; ವರ್ಷವಾರು, ಅರಣ್ಯವಾರು ವಿವರ ನೀಡುವುದು ;

(ಉ) ಶಿರಾ ತಾಲ್ಲೂಕಿನ ಮುದಿಗೆರೆ ಕಾವಲ್‌ನಲ್ಲಿ ಇರುವ ಅರಣ್ಯವನ್ನು ಮೀಸಲು ಅರಣ್ಯ ಎಂದು ಯಾವಾಗ ಅಧಿಸೂಚನೆ ಹೊರಡಿಸಲಾಗಿದೆ ; ಸದರಿ ಅರಣ್ಯ ಪ್ರದೇಶದ ವಿಸ್ತೀರ್ಣವೆಷ್ಟು ಮತ್ತು ಸದರಿ ಅರಣ್ಯದಲ್ಲಿ ಯಾವ ಜಾತಿ ಕಾಡುಮರಗಳಿವೆ ;

(ಊ) ಶಿರಾ ತಾಲ್ಲೂಕು ಬುಕಾಪಟ್ಟಣ ತಾಲ್ಲೂಕಿನ ವನ್ಯಜೀವಿಧಾಮದಲ್ಲಿ ಅಳಿವಿನಂಚಿನಲ್ಲಿರುವ ಚಿಂಕಾರ (ಹುಲ್ಲೇಕರ) ಪ್ರಾಣಿಗಳ ರಕ್ಷಣೆಗೆ ಅರಣ್ಯ ಇಲಾಖೆ ಕೈಗೊಂಡಿರುವ ಕ್ರಮಗಳೇನು ;

(ಋ) ಬೇಸಿಗೆಯಲ್ಲಿ ಕಾಡಿಗೆ ಬೆಂಕಿ ಹಚ್ಚುವ ಮೂಲಕ ಗಿಡ-ಮರ ಗಿಡಮೂಲಿಕೆ ಔಷದ ಗುಣ ಹೊಂದಿರುವ ಬಳ್ಳಿ ನಾಶವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೆಂಗಳೂರು ನಗರ ಜಿಲ್ಲೆಯಲ್ಲಿ ಅರಣ್ಯ ಭೂಮಿಯ ಒತ್ತುವರಿ ಕುರಿತು

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೧೭ (೧೦೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಇರುವ ಒಟ್ಟು ಅರಣ್ಯ ಭೂಮಿಯ ವಿಸ್ತೀರ್ಣವೆಷ್ಟು; ಇದರಲ್ಲಿ ಒತ್ತುವರಿಯಾಗಿರುವ ಭೂಮಿಯ ವಿಸ್ತೀರ್ಣವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ಐದು ವರ್ಷಗಳಲ್ಲಿ ನಗರ ಜಿಲ್ಲೆಯಲ್ಲಿ ದಾಖಲಾದ ಅರಣ್ಯ ಒತ್ತುವರಿ ಪ್ರಕರಣಗಳೆಷ್ಟು ಮತ್ತು ತೆರವುಗೊಳಿಸಲಾದ ಪ್ರಕರಣಗಳೆಷ್ಟು;

(ಇ) ಒತ್ತುವರಿದಾರರು ಎಷ್ಟು ಪ್ರಕರಣಗಳಲ್ಲಿ ನ್ಯಾಯಾಲಯದಿಂದ ತಡೆಯಾಜ್ಞೆಯನ್ನು ತಂದಿದ್ದಾರೆ ಸದರಿ ತಡೆಯಾಜ್ಞೆಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಅರಣ್ಯ ಭೂಮಿಯ ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

## ಸರ್ಕಾರಿ ಶಾಲೆಗಳ ಶೌಚಾಲಯ ನಿರ್ವಹಣೆ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೧೮ (೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಎಷ್ಟು; ಎಷ್ಟು ಶಾಲೆಗಳಲ್ಲಿ ಶೌಚಾಲಯಗಳ ವ್ಯವಸ್ಥೆ ಕಲ್ಪಿಸಲಾಗಿದೆ;

(ಆ) ಶಾಲೆಗಳ ಶೌಚಾಲಯಗಳ ನಿರ್ವಹಣೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; ಒಂದು ಶೌಚಾಲಯ ನಿರ್ವಹಣೆಗೆ ಸರ್ಕಾರ ನೀಡುತ್ತಿರುವ ವಾರ್ಷಿಕ ಅನುದಾನ ಎಷ್ಟು;

(ಇ) ಶೌಚಾಲಯಗಳಲ್ಲಿ ಶುಚಿತ್ವ ಕಾಪಾಡದೆ ಮಕ್ಕಳಿಗೆ ಆರೋಗ್ಯ ಹಾಗೂ ಇನ್ನಿತರ ತೊಂದರೆಗಳು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಶೌಚಾಲಯಗಳಲ್ಲಿ ಶುಚಿತ್ವ ಕಾಪಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಖಾಸಗಿ ಕನ್ನಡ ಮಾಧ್ಯಮ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೧೯ (೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೧೯೯೫ರ ನಂತರ ಪ್ರಾರಂಭವಾದ ಕನ್ನಡ ಮಾಧ್ಯಮ ಖಾಸಗಿ ಶಾಲೆಗಳ ಸಿಬ್ಬಂದಿಗಳಿಗೆ ವೇತನಾನುದಾನ ಹಾಗೂ ಸೇವಾ ಭದ್ರತೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೧೯೯೫ ರಿಂದ ೨೦೨೪ ನೇ ಸಾಲಿನವರೆಗೆ ಎಷ್ಟು ಕನ್ನಡ ಮಾಧ್ಯಮದ ಖಾಸಗಿ ಶಾಲೆಗಳು ಪ್ರಾರಂಭವಾಗಿವೆ ;

(ಇ) ಸದರಿ ಸಿಬ್ಬಂದಿಗಳಿಗೆ ವೇತನಾನುದಾನಕ್ಕೆ ಒಳಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ವೇತನಾನುದಾನ ಹಾಗೂ ಸೇವಾ ಭದ್ರತೆ ಒದಗಿಸಲಾಗುವುದು ;

(ಈ) ಅನುದಾನ ರಹಿತ ಖಾಸಗಿ ಕನ್ನಡ ಮಾಧ್ಯಮ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳಿಗೆ ಸರ್ಕಾರದಿಂದ ಬಿಸಿಯೂಟ ಹಾಗೂ ಇನ್ನಿತರ ಸೌಲಭ್ಯಗಳನ್ನು ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಬಿಸಿಯೂಟ ಹಾಗೂ ಇನ್ನಿತರ ಸೌಲಭ್ಯಗಳನ್ನು ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಶಿಥಿಲಾವಸ್ಥೆಯಲ್ಲಿರುವ ಸರ್ಕಾರಿ ಶಾಲಾ ಕೊಠಡಿಗಳ ದುರಸ್ಥಿಗೊಳಿಸುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೨೦ (೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಇರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಸರ್ಕಾರಿ ಶಾಲೆಗಳಲ್ಲಿ ಕೊಠಡಿಗಳು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಶಿಥಿಲಾವಸ್ಥೆಯಲ್ಲಿರುವ ಶಾಲಾ ಕೊಠಡಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಶಾಲಾ ಕೊಠಡಿಗಳ ದುರಸ್ಥಿ ಕಾರ್ಯ ಕೈಗೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಕಳೆದ ೨ ವರ್ಷಗಳಿಂದ ಶಾಲಾ ಕೊಠಡಿಗಳ ದುರಸ್ಥಿಗೆ ಮತ್ತು ಹೊಸ ಕೊಠಡಿಗಳ ನಿರ್ಮಾಣಕ್ಕೆ ಮಂಜೂರು ಮಾಡಿರುವ, ಬಿಡುಗಡೆ ಮಾಡಿರುವ ಹಾಗೂ ವೆಚ್ಚ ಮಾಡಿರುವ ಹಣ ಎಷ್ಟು ? (ಜಿಲ್ಲಾವಾರು ವಿವರ ಒದಗಿಸುವುದು)

## ರಾಜ್ಯ ಕೌಶಲ್ಯ ಅಭಿವೃದ್ಧಿ ಕೇಂದ್ರಗಳ ಬಗ್ಗೆ

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧ (೪೮) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಕೌಶಲ್ಯ ಅಭಿವೃದ್ಧಿ ಉದ್ಯಮಶೀಲತೆ ಕೇಂದ್ರಗಳು ಜೀವನೋಪಾಯಕ್ಕಾಗಿ ಸ್ಥಾಪಿತವಾಗಿವೆ ; (ಅವುಗಳ ವಿವರ ನೀಡುವುದು)

(ಆ) ಸರ್ಕಾರಿ ನಿರುದ್ಯೋಗಿ ವಿಧ್ಯಾರ್ಥಿಗಳಿಗೆ ಅನುಕೂಲವಾಗಲೆಂದು ಕೌಶಲ್ಯ ಅಭಿವೃದ್ಧಿ ತರಬೇತಿ ಕೇಂದ್ರ ಸ್ಥಾಪನೆ ಮಾಡಲು ತೆಗೆದುಕೊಂಡ ಯೋಜನೆ ಸ್ವಾಗತಾರ್ಹವಾಗಿದ್ದು, ಈ ಕೇಂದ್ರಗಳು ಪ್ರಸ್ತುತ ಎಷ್ಟು ಪ್ರಾರಂಭದ ಸ್ಥಿತಿಯಲ್ಲಿವೆ ಮತ್ತು ಎಷ್ಟು ಕೌಶಲ್ಯ ಅಭಿವೃದ್ಧಿ ಕೇಂದ್ರಗಳನ್ನು ಪ್ರಾರಂಭ ಮಾಡುವ ಯೋಜನೆ ಸರ್ಕಾರದ ಮುಂದಿದೆ ;

(ಇ) ಈ ಕೇಂದ್ರಗಳನ್ನು ತಾಲ್ಲೂಕು ಕೇಂದ್ರಗಳಲ್ಲಿ ಪ್ರಾರಂಭಿಸಬೇಕೆನ್ನುವ ಯೋಜನೆ ಇರುವುದು ನಿಜವೇ ; ಹಾಗಿದ್ದಲ್ಲಿ ಇನ್ನುಳಿದ ತಾಲ್ಲೂಕುಗಳಲ್ಲಿ ಈ ಕೇಂದ್ರಗಳನ್ನು ಯಾವಾಗ ಪ್ರಾರಂಭಿಸುವುದು? (ವಿವರ ನೀಡುವುದು)

## ಬೆಂಗಳೂರು ಜಿಲ್ಲೆಯಲ್ಲಿರುವ ಡಯಾಲಿಸಿಸ್ ಕೇಂದ್ರಗಳ ಕುರಿತು

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೨ (೪೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಜಿಲ್ಲೆಯಲ್ಲಿರುವ ಸರ್ಕಾರಿ ಮತ್ತು ಖಾಸಗಿ ಪರವಾನಗಿ ಪಡೆದಿರುವ ಡಯಾಲಿಸಿಸ್ ಕೇಂದ್ರಗಳೆಷ್ಟು ; (ವಿವರ ನೀಡುವುದು)

(ಆ) ಇತ್ತೀಚೆಗೆ ಡಯಾಲಿಸಿಸ್‌ಗೆ ಒಳಗಾಗುತ್ತಿರುವವರ ಸಂಖ್ಯೆ ಹೆಚ್ಚಾಗುತ್ತಿದ್ದು ಹೊಸದಾಗಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯುವ ಉದ್ದೇಶ ಸರ್ಕಾರದ ಮುಂದಿದೆಯೇ ;

(ಇ) ಇದ್ದಲ್ಲಿ, ಎಲ್ಲೆಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯುವ ಉದ್ದೇಶ ಸರ್ಕಾರದ ಮುಂದಿದೆ ;

(ಈ) ಇದೇ ಮಾದರಿಯಲ್ಲಿ ಹೃದಯಕ್ಕೆ ಸಂಬಂಧಿಸಿದ ಕೇಂದ್ರಗಳನ್ನು ತೆರೆಯುವ ಆಲೋಚನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡು ಕ್ರಮಗಳೇನು ;

(ಉ) ಬೆಂಗಳೂರು ಜಿಲ್ಲೆಯಲ್ಲಿ ಎಷ್ಟು ಜನೌಷಧಿ ಕೇಂದ್ರಗಳನ್ನು ತೆರೆಯುವ ಉದ್ದೇಶ ಸರ್ಕಾರದ ಮುಂದಿದೆ ? (ವಿವರ ನೀಡುವುದು)

## ರಾಜ್ಯದ ಎಲ್ಲಾ ಮೂಲಗಳಿಂದ ಉತ್ಪಾದಿಸುವ ವಿದ್ಯುತ್ ಬಗ್ಗೆ

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೨೩ (೫೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಲ್ಲಾ ಮೂಲಗಳಿಂದ ಉತ್ಪಾದನೆಯಾಗುವ ವಿದ್ಯುತ್ ಪ್ರಮಾಣ ಎಷ್ಟು ಹಾಗೂ ಬೇಡಿಕೆ ಇರುವ ವಿದ್ಯುತ್ ಪ್ರಮಾಣ ಎಷ್ಟು; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಖಾಸಗಿ ಮೂಲಗಳಿಂದ ಉತ್ಪಾದಿಸುವ ವಿದ್ಯುತ್ ಎಷ್ಟು ಮತ್ತು ಯಾವ ದರದಲ್ಲಿ ವಿದ್ಯುತ್ತನ್ನು ಸರ್ಕಾರ ಖರೀದಿಸುತ್ತಿದೆ; ವಿದ್ಯುತ್ ಬಳಕೆಯನ್ನು ನಿಯಂತ್ರಿಸಲು ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದಲ್ಲಿ ೨೪ ಗಂಟೆ ವಿದ್ಯುತ್ ಒದಗಿಸಲು ಸರ್ಕಾರದ ಮುಂದಿರುವ ಸವಾಲುಗಳೇನು ; ಅದನ್ನು ಕಾರ್ಯಗತಗೊಳಿಸಲು ಕ್ರಮ ಕೈಗೊಳ್ಳಲಾಗುವುದೇ ರಾಜ್ಯ ಸರ್ಕಾರ ವಿದ್ಯುತ್ ಪೂರೈಕೆ ಮಾಡಲು ಕೈಗೊಂಡಿರುವ ಕ್ರಮಗಳೇನು ;

(ಈ) ರಾಜ್ಯದಲ್ಲಿ ವಿದ್ಯುತ್ ಪ್ರಸರಣವನ್ನು ಖಾಸಗಿಯವರಿಗೆ ನೀಡಲು ಚಿಂತನೆ ನಡೆದಿದೆಯೇ ; ಯಾವ ಯಾವ ಯೋಜನೆಗಳಿಗೆ ಉಚಿತ ವಿದ್ಯುತ್ ಪೂರೈಸಲಾಗಿದೆ ; ಇದಕ್ಕೆ ತಗುಲುವ ವೆಚ್ಚ ಎಷ್ಟು ? (ವಿವರ ನೀಡುವುದು)

# ಉನ್ನತ ಶಿಕ್ಷಣ ಇಲಾಖೆ ನಿರ್ವಹಿಸುತ್ತಿರುವ ಯುಯುಸಿಎಂಎಸ್ ತಂತ್ರಾಶದಲ್ಲಿ ಇರುವ ತಾಂತ್ರಿಕ ತೊಂದರೆ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೪ (೧೦೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉನ್ನತ ಶಿಕ್ಷಣ ಇಲಾಖೆ ನಿರ್ವಹಿಸುತ್ತಿರುವ ಯುಯುಸಿಎಂಎಸ್ ತಂತ್ರಾಂಶದಲ್ಲಿ ಇರುವ ತಾಂತ್ರಿಕ ತೊಂದರೆಯಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸದರಿ ತಂತ್ರಾಂಶ ನಿರ್ವಹಣೆ ಮಾಡುವವರು ಯಾರು ಸದರಿಯವರು ನಿರ್ವಹಣೆ ಮಾಡುವಲ್ಲಿ ವಿಫಲರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಕಳೆದ ಎರಡು ಮೂರು ವರ್ಷಗಳಿಂದ ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ಅಂಕ ಪಟ್ಟಿ ಸಿಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಿದ್ಯಾರ್ಥಿಗಳು ಅಂತಿಮ ವರ್ಷ ಮುಗಿಸಿದ್ದರೂ ಅಂಕ ಪಟ್ಟಿ ಸಿಗದಿರುವುದರಿಂದ ಮುಂದಿನ ಉನ್ನತ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರ ಗಮನಿಸಿದೆಯೇ ; ಹಾಗಿದ್ದಲ್ಲಿ, ಸದರಿ ತಂತ್ರಾಂಶ ಮುಂದುವರೆಸುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ಯುಯುಸಿಎಂಎಸ್ ತಂತ್ರಾಂಶದಿಂದಾಗಿ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ತಂತ್ರಾಂಶ ವಿದ್ಯಾರ್ಥಿಗಳ ಭವಿಷ್ಯದ ದೃಷ್ಟಿಯಿಂದ ರದ್ದುಪಡಿಸಲು ಸರ್ಕಾರಕ್ಕೆ ಇರುವ ತೊಂದರೆ ಏನು ; ಸರ್ಕಾರ ಯುಯುಸಿಎಂಎಸ್

ತಂತ್ರಾಂಶ ಬಳಕೆಯನ್ನು ರದ್ದುಪಡಿಸಿ ಈ ಹಿಂದಿನಂತೆ ವಿಶ್ವವಿದ್ಯಾಲಯಗಳ ವ್ಯಾಪ್ತಿಗೆ ತಂತ್ರಾಂಶ ಹೊಂದಲು ಅವಕಾಶ ನೀಡುತ್ತದೆಯೇ ; ಇದರ ಕುರಿತು ಸರ್ಕಾರದ ನಿಲುವೇನು ?

## ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿರುವ ಮಹಾವಿದ್ಯಾಲಯಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೫ (೧೧೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಮಂಜೂರಾಗಿರುವ ವಸತಿಯುಕ್ತ ಪದವಿ ಮಹಾವಿದ್ಯಾಲಯಗಳು ಎಷ್ಟು ; (ವಿವರ ನೀಡುವುದು)

(ಆ) ಸದರಿ ಮಹಾವಿದ್ಯಾಲಯಗಳು ಪ್ರಾರಂಭವಾಗದಿರಲು ಕಾರಣವೇನು ; ಅಲ್ಲಿ ಲಭ್ಯವಿರುವ ಸೌಲಭ್ಯಗಳೇನು ; (ವಿವರ ನೀಡುವುದು)

(ಇ) ಸದರಿ ಮಹಾವಿದ್ಯಾಲಯಗಳಲ್ಲಿ ವಸತಿ ನಿಲಯಗಳನ್ನು ಪ್ರಾರಂಭಿಸಲಾಗಿದೆಯೇ; ಇಲ್ಲದ್ದಲ್ಲಿ, ಯಾವ ಕಾರಣಕ್ಕೆ ವಸತಿ ನಿಲಯ ಪ್ರಾರಂಭಿಸಿರುವುದಿಲ್ಲ ; ಇದರಿಂದ ಸರ್ಕಾರದ ಉದ್ದೇಶಕ್ಕೆ ಧಕ್ಕೆಯಾಗುವುದಿಲ್ಲವೇ ; (ವಿವರ ನೀಡುವುದು)

(ಈ) ವಸತಿ ನಿಲಯಗಳನ್ನು ಯಾವ ಇಲಾಖೆ ನಿರ್ವಹಣೆ ಮಾಡುತ್ತಿದೆ ; ಈ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಯಾವ ಆಧಾರದಲ್ಲಿ ಪ್ರವೇಶ ನೀಡಲಾಗುತ್ತಿದೆ; ರೋಸ್ಟರ್ ಅನ್ವಯ ಪ್ರವೇಶ ನೀಡಲಾಗುತ್ತದೆಯೇ ; (ವಿವರ ನೀಡುವುದು)

(ಉ) ಸದರಿ ಮಹಾವಿದ್ಯಾಲಯಗಳು ಯಾವ ವರ್ಷದಿಂದ ಪ್ರಾರಂಭಿಸಲಾಗಿದೆ ; ಅವುಗಳಲ್ಲಿ ಲಭ್ಯವಿರುವ ಕೋರ್ಸ್‌ಗಳೆಷ್ಟು ; ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಕೋರ್ಸ್‌ವಾರು ವಿವರ ನೀಡುವುದು)

(ಊ) ಸದರಿ ಮಹಾವಿದ್ಯಾಲಯಗಳಲ್ಲಿ ಮಂಜೂರಾಗಿರುವ ಹುದ್ದೆಗಳೆಷ್ಟು ; ಭರ್ತಿಯಾಗಿರುವ ಹುದ್ದೆಗಳೇಷ್ಟು ? (ವಿವರ ನೀಡುವುದು)

## ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿ ಉನ್ನತ ಶಿಕ್ಷಣ ಪ್ರವೇಶ ಪಡೆಯುವ (ಜಿಇಆರ್) ವಿದ್ಯಾರ್ಥಿಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬ (೧೧೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಪ್ರದೇಶದ ಜಿಲ್ಲೆಗಳಲ್ಲಿ ಉನ್ನತ ಶಿಕ್ಷಣ ಪ್ರವೇಶ ಪಡೆಯುವ (ಜಿಇಆರ್) ವಿದ್ಯಾರ್ಥಿಗಳ ಪ್ರಮಾಣವೇನು ; ರಾಜ್ಯದ ಸರಾಸರಿಗಿಂತ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಜಿಲ್ಲೆಗಳ ಜಿಇಆರ್ ಪ್ರಮಾಣ ಹೆಚ್ಚಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಇ) ಕಲ್ಯಾಣ ಕರ್ನಾಟಕ ಪ್ರದೇಶದ ಜಿಲ್ಲೆಗಳ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆಯುವಂತೆ ಪ್ರೇರಣೆ ನೀಡಲು ಆರ್ಥಿಕ ಉತ್ತೇಜನದಂತಹ ಕ್ರಮ ಜರುಗಿಸಲು ಸರ್ಕಾರ ಮುಂದಾಗುವುದೇ ; (ವಿವರ ನೀಡುವುದು)

(ಈ) ಕಲ್ಯಾಣ ಕರ್ನಾಟಕ ಪ್ರದೇಶದ ಜಿಲ್ಲೆಗಳ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆಯುವಂತೆ ಉತ್ತೇಜಿಸಲು ಆ ಪ್ರದೇಶದ ವಿಶ್ವವಿದ್ಯಾಲಗಳು ಶುಲ್ಕ ರಹಿತ ಶಿಕ್ಷಣ ನೀಡುವಂತೆ ಕ್ರಮ ವಹಿಸಲು ಸರ್ಕಾರಕ್ಕೆ ತಗಲುವ ಆರ್ಥಿಕ ವೆಚ್ಚ ಎಷ್ಟು; ಸರ್ಕಾರ ಸದರಿ ಆರ್ಥಿಕ ವೆಚ್ಚ ಭರಿಸಲು ಸಾಧ್ಯವಿಲ್ಲವೇ ; ಹಾಗಿದ್ದಲ್ಲಿ, ಯಾವಾಗ ಕ್ರಮ ವಹಿಸಲಾಗುವುದು ;

(ಉ) ಕೊಪ್ಪಳ ಮತ್ತು ಯಾದಗಿರಿ ಜಿಲ್ಲೆಯ ಉನ್ನತ ಶಿಕ್ಷಣ ಜಿಇಆರ್ ಪ್ರಮಾಣ ಅತ್ಯಂತ ಕಡಿಮೆ ಇರುವುದು ಸರ್ಕಾರ ಗಮನಿಸಿದೆಯೆ ; ಹಾಗಿದ್ದಲ್ಲಿ, ಸದರಿ ಜಿಲ್ಲೆಯ ಉನ್ನತ ಶಿಕ್ಷಣ ಜಿಇಆರ್ ಹೆಚ್ಚಿಸಲು ರಾಯಚೂರು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರ ಒಂದನ್ನು ಯಾದಗಿರಿ ಜಿಲ್ಲೆಯಲ್ಲಿ ಸ್ಥಾಪಿಸಲು ಸರ್ಕಾರಕ್ಕೆ ಇರುವ ತೊಂದರೆ ಏನು; ಇಲ್ಲದಿದ್ದಲ್ಲಿ, ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳಲು ಬಯಸುತ್ತದೆ ? (ವಿವರ ನೀಡುವುದು)

## ರಾಜ್ಯದಲ್ಲಿ ವಾಸಿಸುತ್ತಿರುವ ಎಲ್ಲಾ ಕುಟುಂಬಗಳಿಗೆ ವಿದ್ಯುತ್ ಸಂಪರ್ಕ ಒದಗಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೭ (೧೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಾಸಿಸುತ್ತಿರುವ ಎಲ್ಲಾ ಕುಟುಂಬಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮವೇನು ; ಯಾವ ಕಾರಣಕ್ಕಾಗಿ ವಿದ್ಯುತ್ ಸಂಪರ್ಕ ಒದಗಿಸಲು ಸಾಧ್ಯವಾಗಿಲ್ಲ ;

(ಆ) ಗೃಹ ಜ್ಯೋತಿ ಯೋಜನೆ ಅನ್ವಯ ರಾಜ್ಯದಲ್ಲಿ ಎಷ್ಟು ಕುಟುಂಬಗಳಿಗೆ ಉಚಿತ ವಿದ್ಯುತ್ ಸೌಲಭ್ಯ ನೀಡಲಾಗಿದೆ ; ಇದಕ್ಕೆ ತಗಲುವ ವೆಚ್ಚ ಎಷ್ಟು; ಈ ವೆಚ್ಚವನ್ನು ಸರ್ಕಾರದಿಂದ ಸಂಬಂಧಪಟ್ಟ ವಿದ್ಯುತ್ ಕಂಪನಿಗಳಿಗೆ ನೀಡಲಾಗಿದೆಯೇ ; (ವಿವರ ನೀಡುವುದು)

(ಇ) ಉಚಿತ ವಿದ್ಯುತ್ ಒದಗಿಸಲಾಗುತ್ತಿರುವ ಕುಟುಂಬಗಳಿಗೆ ತಗಲುವ ವೆಚ್ಚ ಎಷ್ಟು ಮತ್ತು ನೀಡಲು ಬಾಕಿ ಇರುವ ಕುಟುಂಬಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ವಿದ್ಯುತ್‌ನ್ನು ಯಾವ ಯಾವ ಮೂಲಗಳಿಂದ ಉತ್ಪಾದಿಸಲಾಗುತ್ತಿದೆ ; ಹೆಚ್ಚುವರಿ ವಿದ್ಯುತ್ ಉತ್ಪಾದನೆಗೆ ಇಲಾಖೆ ಮುಂದೆ ಪ್ರಸ್ತಾವನೆಗಳಿವೆಯೇ ; (ವಿವರ ನೀಡುವುದು)

(ಉ) ಹೊರ ರಾಜ್ಯಗಳಿಂದ ವಿದ್ಯುತ್ ಖರೀದಿಸಲಾಗುತ್ತಿದೆಯೇ ; ಯೂನಿಟ್ ಒಂದಕ್ಕೆ ತಗಲುವ ವೆಚ್ಚ ಎಷ್ಟು ; ಮಾರಾಟ ಮಾಡುವ ವೆಚ್ಚ ಎಷ್ಟು ; ಇಲಾಖೆಗೆ ಇರುವ ಬೇಡಿಕೆ ಎಷ್ಟು? (ವಿವರ ನೀಡುವುದು)

## ರಾಜ್ಯದಲ್ಲಿ ಯಾವ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೮ (೧೮) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ ;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಎಲ್ಲಾ ಮೂಲಭೂತ ಸೌಕರ್ಯಗಳಿದ್ದರೂ ಸಹ ಹೊಸ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳದೇ ಇರಲು ಕಾರಣಗಳೇನು ; (ವಿವರ ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹೊಸ ವೈದ್ಯಕೀಯ ಕಾಲೇಜು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು ?

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಅಗ್ನಿಶಾಮಕ ಸಲಕರಣೆಗಳನ್ನು ಅಳವಡಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯ (೧೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಶಾಲಾ ಕಟ್ಟಡಗಳಲ್ಲಿ ಕಡ್ಡಾಯವಾಗಿ ಅಗ್ನಿಶಾಮಕ ಸಲಕರಣೆಗಳನ್ನು ಅಳವಡಿಸಬೇಕೆಂದು ಇಲಾಖೆ ಸೂಚನೆ ನೀಡಿ, ಪುರಾತನ ಶಾಲೆಗಳಿಗೆ ಮಾನ್ಯತೆಯಿದ್ದು, ರದ್ದು ಮಾಡುತ್ತಿರುವುದು ಇಲಾಖೆ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಎಷ್ಟು ಶಾಲೆಗಳನ್ನು ಅಗ್ನಿಶಾಮಕ ಸಲಕರಣೆ ಒದಗಿಸದೇ ಇರುವುದರಿಂದ ಮಾನ್ಯತೆ ರದ್ದುಗೊಳಿಸಲಾಗಿದೆ ; (ವಿವರ ನೀಡುವುದು)

(ಇ) ಗ್ರಾಮೀಣ ಭಾಗದಲ್ಲಿ ಕಟ್ಟಡಗಳಿಗೆ ಅಗ್ನಿಶಾಮಕ ಪೈಪ್‌ಗಳನ್ನು ಅಳವಡಿಸಲು ಮತ್ತು ಅದಕ್ಕೆ ತಗಲುವ ವೆಚ್ಚ ಭರಿಸಲು ಸರ್ಕಾರದಿಂದ ಸಹಾಯಧನ ನೀಡಲಾಗುತ್ತಿದೆಯೇ ; ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ; ಈ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; (ವಿವರ ನೀಡುವುದು)

(ಈ) ಸರ್ಕಾರಿ ಶಾಲೆಗಳಿಗೂ ಅಗ್ನಿಶಾಮಕ ಸಲಕರಣೆ ಅಳವಡಿಸಲು ಇಲಾಖೆ ಕ್ರಮ ಕೈಗೊಂಡಿದೆಯೇ ; ಈ ಬಗ್ಗೆ ಎಷ್ಟು ಹಣ ಮೀಸಲಿಡಲಾಗಿದೆ? (ವಿವರ ನೀಡುವುದು)

## ಕೋವಿಡ್ ಸಮಯದಲ್ಲಿ ನಿಗದಿತ ಬೆಲೆಗಿಂತ ಹೆಚ್ಚು ಬೆಲೆಗೆ ಸಾಮಗ್ರಿಗಳನ್ನು ಖರೀದಿಸಿರುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೦ (೨೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋವಿಡ್-೧೯ ಸಂದರ್ಭದಲ್ಲಿ ಅನಾವಶ್ಯಕವಾಗಿ ನಿಗದಿತ ಬೆಲೆಗಿಂತ ಹೆಚ್ಚಿನ ಬೆಲೆಯಲ್ಲಿ ವೈದ್ಯಕೀಯ ಸಾಮಾಗ್ರಿಗಳನ್ನು ಖರೀದಿಸಿ, ಸರ್ಕಾರಕ್ಕೆ ಉಂಟಾದ ನಷ್ಟವನ್ನು ಭರಿಸಲು ಸರ್ಕಾರವು ಕೈಗೊಂಡಿರುವ ಕ್ರಮವೇನು ; ಸರ್ಕಾರಕ್ಕೆ ಉಂಟಾದ ಅಂದಾಜು ನಷ್ಟ ಎಷ್ಟು ;

(ಆ) ಕೋವಿಡ್-೧೯ ವೈದ್ಯಕೀಯ ಸಾಮಾಗ್ರಿಗಳ ಖರೀದಿಯಲ್ಲಿ ಉಂಟಾದ ಅವ್ಯವಹಾರವನ್ನು ಪತ್ತೆ ಹಚ್ಚಲು ಸರ್ಕಾರ ನೇಮಕ ಮಾಡಿರುವ ಆಯೋಗದ ವರದಿಯುನ್ನು ಸರ್ಕಾರವು ಪರಿಶೀಲಿಸಿದೆಯೇ ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಕೋವಿಡ್-೧೯ ಅಕ್ರಮ ವ್ಯವಹಾರದ ತನಿಖೆಯು ಯಾವ ಹಂತದಲ್ಲಿದೆ ; ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಕೋವಿಡ್-೧೯ರ ಸಂದರ್ಭದಲ್ಲಿ ಒಟ್ಟು ಎಷ್ಟು ಜನ ಮೃತಪಟ್ಟಿದ್ದಾರೆ ; ಇದುವರೆಗೂ ಒಟ್ಟು ಎಷ್ಟು ಜನ ಮೃತರ ಕುಟುಂಬಗಳಿಗೆ ಪರಿಹಾರವನ್ನು ಒದಗಿಸಲಾಗಿದೆ ; ಯಾವ ಯಾವ ಮಾನದಂಡದಡಿಯಲ್ಲಿ ಕೋವಿಡ್ ಪರಿಹಾರವನ್ನು ನೀಡಲಾಗಿದೆ ? (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

## ಸರ್ಕಾರಿ ಶಾಲೆಗಳಲ್ಲಿ ಮೂಲಭೂತ ಕೊರತೆಯ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೩೧ (೮೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಶಾಲೆಗಳಲ್ಲಿ ಅಗತ್ಯವಾಗಿ ಬೇಕಾಗಿರುವ ಕೊಠಡಿ, ಪೀಠೋಪಕರಣಗಳು ಹಾಗೂ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು ;

(ಆ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಶಾಲೆಗಳ ಸಂಖ್ಯೆಯೆಷ್ಟು ; ಇದರಲ್ಲಿ ೧೦ಕ್ಕಿಂತ ಕಡಿಮೆ ಮಕ್ಕಳಿರುವ ಸರಾಸರಿ ಶಾಲೆಗಳ ಸಂಖ್ಯೆಯಷ್ಟು ; ಏಕೋಪಾಧ್ಯಾಯ ಸರ್ಕಾರಿ ಶಾಲೆಗಳ ಸಂಖ್ಯೆಯೆಷ್ಟು ;

(ಇ) ಪ್ರತಿ ವರ್ಷವೂ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕ್ಷೀಣಿಸುತ್ತಿರುವುದರಿಂದ ಸರ್ಕಾರಿ ಶಾಲೆಗಳನ್ನು ಮುಚ್ಚುವ ಪರಿಸ್ಥಿತಿ ಎದುರಾಗಿದೆಯೇ ; ಹಾಗಿದ್ದಲ್ಲಿ, ಕಳೆದ ಐದು ವರ್ಷಗಳಿಂದ ಎಷ್ಟು ಸರ್ಕಾರಿ ಶಾಲೆಗಳನ್ನು ಮುಚ್ಚಲಾಗಿದೆ ;

(ಈ) ಕಳೆದ ಐದು ವರ್ಷಗಳಲ್ಲಿ ಎಷ್ಟು ಖಾಸಗಿ ಶಾಲೆಗಳ ಪ್ರಾರಂಭಕ್ಕೆ ಅನುಮತಿ ನೀಡಲಾಗಿದೆ ಮತ್ತು ಎಷ್ಟು ಖಾಸಗಿ ಶಾಲೆಗಳನ್ನು ಮುಚ್ಚಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಕಡಿಮೆ ಆಗಲು ಕಾರಣ ತಿಳಿದುಕೊಳ್ಳಲು ಯಾವುದಾದರೂ ಸಮಿತಿಯನ್ನು ರಚಿಸಲಾಗಿದೆಯೇ ? (ವಿವರಗಳನ್ನು ಒದಗಿಸುವುದು)

**ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿರುವ ಡಯಾಲಿಸಿಸ್ ಕೇಂದ್ರಗಳ ಬಗ್ಗೆ**

**ಶ್ರೀ ಟಿ.ಎನ್.ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೨ (೧ಳ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗ್ರಾಮೀಣ ಪ್ರದೇಶದಲ್ಲಿ ಹಾಗೂ ಜಿಲ್ಲಾ/ತಾಲ್ಲೂಕು ಕೇಂದ್ರಗಳಲ್ಲಿ ಎಷ್ಟು ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ರೈತರ, ಬಡವರ ಮತ್ತು ಕೂಲಿ ಕಾರ್ಮಿಕರ ಹಿತದೃಷ್ಟಿಯಿಂದ ಹೋಬಳಿ ಕೇಂದ್ರಗಳಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಯಶಸ್ವಿನಿ ಯೋಜನೆಯಡಿ ಸದಸ್ಯತ್ವ ಹೊಂದಿರುವ ರೈತರ/ ಸಹಕಾರ ಸಂಘಗಳ ಸದಸ್ಯರ ಕುಟುಂಬಗಳಿಗೆ ಮರಣಾಂತಿಕ ಖಾಯಿಲೆಗಳ ಚಿಕಿತ್ಸೆಗಾಗಿ ಬೆಂಗಳೂರು ನಗರ ಸೇರಿದಂತೆ ರಾಜ್ಯದ ಇತರೆ ನಗರಗಳ ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದಯೇ ; ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಯಶಸ್ವಿನಿ/ಬಿ.ಪಿ.ಎಲ್/ಎ.ಪಿ.ಎಲ್ ಹಾಗೂ ಇನ್ನಿತರೆ ಯೋಜನೆಗಳಡಿಯಲ್ಲಿ ನೋಂದಣಿಯಾಗಿರುವ ಸರ್ಕಾರಿ/ಖಾಸಗಿ ಆಸ್ಪತ್ರೆಗಳ ಸಂಖ್ಯೆ ಎಷ್ಟು? (ಸರ್ಕಾರದ ಅಧಿಸೂಚನೆ/ಆದೇಶಗಳ ಪಟ್ಟಿ ಒದಗಿಸುವುದು, ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಕುರಿತು

**ಶ್ರೀ ಟಿ.ಎನ್.ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೩ (೧೫) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಪ್ರತಿ ಜಿಲ್ಲೆಗೊಂದು ಸರ್ಕಾರಿ ವೈದ್ಯಕೀಯ ಕಾಲೇಜನ್ನು ತೆರೆಯಲು ಕೇಂದ್ರ ಸರ್ಕಾರವು ಅನುಮತಿ ನೀಡಿದೆಯೇ;

(ಇ) ಹಾಗಿದ್ದಲ್ಲಿ, ಸರ್ಕಾರಿ ವೈದ್ಯಕೀಯ ಕಾಲೇಜು ಇರುವ ಜಿಲ್ಲಾ ಕೇಂದ್ರಗಳಲ್ಲಿ ಖಾಸಗಿ ವೈದ್ಯಕೀಯ ಕಾಲೇಜುಗಳನ್ನು ತೆರೆಯಲು ಅವಕಾಶವಿದೆಯೇ; (ವಿವರ ನೀಡುವುದು)

(ಈ) ಖಾಸಗಿ ವೈದ್ಯಕೀಯ ಕಾಲೇಜುಗಳನ್ನು ತೆರೆಯಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಯಾವ ಯಾವ ಮಾನದಂಡಗಳನ್ನು ವಿಧಿಸಲಾಗುತ್ತಿದೆ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಉ) ೨೦೨೩-೨೪ನೇ ಸಾಲಿನಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳ ಮೂಲಭೂತ ಸೌಕರ್ಯಗಳಿಗಾಗಿ ಒದಗಿಸಿರುವ ಅನುದಾನವೆಷ್ಟು? (ಯಾವ ಯಾವ ಕಾಲೇಜುಗಳಿಗೆ ನೀಡಲಾಗಿದೆ ತಿಳಿಸುವುದು)

## ಕೊಡಗು ಜಿಲ್ಲೆಯಲ್ಲಿರುವ ಆರೋಗ್ಯ ಕೇಂದ್ರಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ ಸುಜಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೪ (೫೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು; ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು ; ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರು ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಜಿಲ್ಲೆಯಲ್ಲಿರುವ ತಾಲ್ಲೂಕು ಆಸ್ಪತ್ರೆಗಳು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವಿವಿಧ ದರ್ಜೆಯ ಹುದ್ದೆಗಳನ್ನು ತ್ವರಿತಗತಿಯಲ್ಲಿ ನೇಮಕಾತಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ;

(ಇ) ಸರ್ಕಾರಿ ವ್ಯಾಪ್ತಿಯ ಆರೋಗ್ಯ ಸೇವೆಯನ್ನು ಗ್ರಾಮೀಣ ಭಾಗದ ಜನರು ಹೆಚ್ಚಿನ ಪ್ರಮಾಣದಲ್ಲಿ ಅವಲಂಬಿಸಿರುವುದರಿಂದ ಆಧ್ಯತೆಯ ಮೇರೆಗೆ ಸಿಬ್ಬಂದಿ ಮತ್ತು ಮೂಲಸೌಕರ್ಯ ಸೌಲಭ್ಯಗಳನ್ನು ಒದಗಿಸಿಕೊಟ್ಟು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಸರ್ಕಾರವು ಯಾವ ಕ್ರಮ ಕೈಗೊಳ್ಳಲಿದೆ ;

(ಈ) ತಾಲ್ಲೂಕು ಮಟ್ಟದ ಆಸ್ಪತ್ರೆಗಳಲ್ಲಿ ಮಹಿಳೆಯರು ಮತ್ತು ಮಕ್ಕಳು ಹೆಚ್ಚಿನ ಪ್ರಮಾಣದಲ್ಲಿ ಭೇಟಿ ನೀಡುವುದರಿಂದ ಆಸ್ಪತ್ರೆಗಳಲ್ಲಿ ಸಾರ್ವಜನಿಕರಿಗೆ ಗುಣಮಟ್ಟದ ಮತ್ತು ಸುವ್ಯವಸ್ಥಿತ ಆರೋಗ್ಯ ಸೇವಾ ಸೌಲಭ್ಯಗಳನ್ನು ಒದಗಿಸಿಕೊಡುವಲ್ಲಿ ಸರ್ಕಾರದ ಮುಂದಿರುವ ಪ್ರಸ್ತಾವನೆಗಳು ಮತ್ತು ಕ್ರಮಗಳು ಯಾವುವು ?

## ಎ.ಪಿ.ಎಲ್. ಮತ್ತು ಬಿ.ಪಿ.ಎಲ್ ಕಾರ್ಡ್‌ಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. ಸುಜಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫ (೫೯) ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ ಒಟ್ಟು ಎಷ್ಟು ಎ.ಪಿ.ಎಲ್. ಮತ್ತು ಬಿ.ಪಿ.ಎಲ್ ಕಾರ್ಡುಗಳು ಚಾಲ್ತಿಯಲ್ಲಿವೆ ; (ವಿವರ ನೀಡುವುದು)

(ಆ) ಸದರಿ ಜಿಲ್ಲೆಯಲ್ಲಿ ಹೊಸದಾಗಿ ಎಷ್ಟು ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಕಾರ್ಡುಗಳನ್ನು ನೀಡುವ ಗುರಿ ಸರ್ಕಾರದ ಮುಂದಿದೆ ;

(ಇ) ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಕಾರ್ಡ್‌ಗಳನ್ನು ವಿತರಿಸಬೇಕಾದರೆ ಅನುಸರಿಸುವ ಮಾನದಂಡಗಳೇನು ;

(ಈ) ಈ ಜಿಲ್ಲೆಯಲ್ಲಿ ಎಷ್ಟು ಎ.ಪಿ.ಎಲ್. ಮತ್ತು ಬಿ.ಪಿ.ಎಲ್ ಕಾರ್ಡ್‌ಗಳಿಗೆ ಮಾನದಂಡಗಳನ್ನು ಅನುಸರಿಸಿ ವರ್ಗಾಯಿಸಲ್ಪಟ್ಟಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಬಿ.ಪಿ.ಎಲ್ ಕಾರ್ಡ್‌ಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೩೬ (೯೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳ ಎಷ್ಟು ಬಿ.ಪಿ.ಎಲ್ ಕಾರ್ಡ್‌ಗಳನ್ನು ಹಾಗೂ ಅಂತ್ಯೋದಯ ಕಾರ್ಡ್‌ಗಳನ್ನು ರದ್ದುಪಡಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಕಾರ್ಡ್‌ಗಳನ್ನು ರದ್ದುಪಡಿಸುವಾಗ ಅನುಸರಿಸಿರುವ ಮಾನದಂಡಗಳೇನು ; ಅರ್ಹರ ಕಾರ್ಡ್‌ಗಳನ್ನು ರದ್ದುಪಡಿಸಿರುವುದರಿಂದ ಬಡವರಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಾರ್ಡ್‌ಗಳನ್ನು ರದ್ದುಪಡಿಸಿರುವ ನಿರ್ಧಾರಗಳನ್ನು ಪುನರ್ ಪರಿಶೀಲನೆ ನಡೆಸಿ ಯಥಾ ಸ್ಥಿತಿ ಮುಂದುವರೆಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ವನ್ಯ ಜೀವಿಗಳ ಸಂರಕ್ಷಕರ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೩೭ (೯೪) ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಮಹಾನಗರ ಪಾಲಿಕೆ, ನಗರ ಸಭೆ, ಪುರಸಭೆ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಖಾಯಂ ಮತ್ತು ಗುತ್ತಿಗೆ ಆಧಾರದ ಮೇಲೆ ಎಷ್ಟು ಜನ ವನ್ಯಜೀವಿ ಸಂರಕ್ಷಕರು (ಹಾವು, ಮಂಗ, ಮೊಸಳೆ, ರಣಹದ್ದು, ಬಾವಲಿ ಪಕ್ಷಿ) ಕರ್ತವ್ಯ ನಿರ್ವಹಿಸುತಿದ್ದಾರೆ ; ಇವರಿಗೆ ನೀಡುತ್ತಿರುವ ಗೌರವ ಧನ ಹಾಗೂ ಇನ್ನಿತರ ಸೌಲಭ್ಯಗಳೇನು ? (ವಿವರ ನೀಡುವುದು)

(ಆ) ವನ್ಯ ಜೀವಿ ಸಂರಕ್ಷಕರು ಈ ವನ್ಯ ಜೀವಿಗಳ ಸಂರಕ್ಷಣೆಯ ಸಂದರ್ಭದಲ್ಲಿ ಹಾವು ಕಡಿತ, ಪ್ರಾಣಿ ದಾಳಿಯಿಂದ ಮೃತಪಟ್ಟರೆ ಖಾಯಂ ಆಗಿ ಅಂಗವಿಕಲ ಹೊಂದಿದ್ದರೆ ಸರ್ಕಾರದಿಂದ ಸಿಗುವ ಸೌಲಭ್ಯಗಳೇನು ; (ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಲ್ಲಿ ರಾಜ್ಯಾದ್ಯಂತ ವನ್ಯ ಜೀವಿಗಳಿಂದ (ಹಾವು, ಮಂಗ, ಮೊಸಳೆ, ರಣಹದ್ದು, ಬಾವಲಿ ಪಕ್ಷಿ) ಎಷ್ಟು ಸಾರ್ವಜನಿಕರ ಮೇಲೆ ದಾಳಿಯಾಗಿದೆ ; ಎಷ್ಟು ಜನರು ಮೃತಪಟ್ಟಿದ್ದಾರೆ ; ದಾಖಲಾಗಿರುವ ಪ್ರಕರಣಗಳೆಷ್ಟು ;

(ಈ) ಕಳೆದ ಎರಡು ವರ್ಷಗಳಿಂದ ಎಷ್ಟು ವನ್ಯ ಜೀವಿಗಳನ್ನು (ಹಾವು, ಮಂಗ, ಮೊಸಳೆ, ರಣಹದ್ದು, ಬಾವಲಿ ಪಕ್ಷಿ) ಸಂರಕ್ಷಿಸಿ ಅರಣ್ಯಕ್ಕೆ ಬಿಡಲಾಗಿದೆ ? (ಸಮಗ್ರ ವಿವರ ನೀಡುವುದು)

## ವಿದ್ಯುತ್ ಯೋಜನೆಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮ (೯೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಒಟ್ಟು ಸೌರ ವಿದ್ಯುತ್ ಯೋಜನೆಗಳು ಯಾವುವು ; ಈ ಯೋಜನೆಗಳು ಎಲ್ಲಿ ಕಾರ್ಯ ನಿರ್ವಹಿಸುತ್ತಿವೆ ; (ಸಂಪೂರ್ಣ ವಿವರ ಒದಗಿಸುವುದು)

(ಆ) ರಾಜ್ಯಕ್ಕೆ ಒಟ್ಟು ಅಗತ್ಯವಿರುವ ವಿದ್ಯುತ್ ಎಷ್ಟು ; (ಗೃಹ ಉಪಯೋಗ ಹಾಗೂ ವಾಣಿಜ್ಯ ಉಪಯೋಗದ ಪ್ರತ್ಯೇಕ ಮಾಹಿತಿ ನೀಡುವುದು)

(ಇ) ರಾಜ್ಯವನ್ನು ವಿದ್ಯುತ್ ಸ್ವಾವಲಂಬಿ ಮಾಡಲು ಕೈಗೊಂಡಿರುವ ಕ್ರಮಗಳೇನು ; ಸದ್ಯ ಯಾವ ಯಾವ ಮೂಲಗಳಿಂದ ವಿದ್ಯುತ್ ಕ್ರೋಡೀಕರಣವಾಗುತ್ತಿದೆ ; (ಸಂಪೂರ್ಣ ವಿವರ ಒದಗಿಸುವುದು)

(ಈ) ವಿಜಯಪುರ ಜಿಲ್ಲೆಯಲ್ಲಿ ಪ್ರಾರಂಭವಾಗಿರುವ ಹಾಗೂ ಪ್ರಾರಂಭವಾಗುತ್ತಿರುವ ವಿದ್ಯುತ್ ಯೋಜನೆಗಳು ಯಾವುವು ; ಅದರಿಂದ ಒಟ್ಟು ಉತ್ಪಾದನೆಯಾಗುವ ವಿದ್ಯುತ್ ಎಷ್ಟು ? (ಯೋಜನೆವಾರು ಸಂಪೂರ್ಣ ಮಾಹಿತಿ ಒದಗಿಸುವುದು)

## ಪಡಿತರ ಕಾರ್ಡ್‌ಗಳನ್ನು ರದ್ದು ಪಡಿಸಿರುವ ಕುರಿತು

**ಶ್ರೀ ಮಧು.ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೩೯ (೫೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಅಂತ್ಯೋದಯ, ಎಪಿಎಲ್ ಮತ್ತು ಬಿಪಿಎಲ್ ಪಡಿತರ ಚೀಟಿಗಳ ಸಂಖ್ಯೆ ಎಷ್ಟು ; ಈ ಪಡಿತರ ಚೀಟಿಗಳಲ್ಲಿ ನಮೂದಿಸಲಾಗಿರುವ ಸದಸ್ಯರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಪಡಿತರ ಚೀಟಿವಾರು ಮಾಹಿತಿ ನೀಡುವುದು)

(ಆ) ಈ ಪೈಕಿ ಆದಾಯ ತೆರಿಗೆ ಪಾವತಿದಾರರು, ಹೆಚ್.ಆರ್. ಎಂ.ಎಸ್. ಕುಟುಂಬದ ವಾರ್ಷಿಕ ಆದಾಯ ರೂ. ೧.೨೦ ಲಕ್ಷಕ್ಕೂ ಹೆಚ್ಚಿರುವ ಹಾಗೂ ಪಡಿತರ ಆಹಾರ ಪದಾರ್ಥಗಳನ್ನು ತೆಗೆದುಕೊಳ್ಳದ ಎಷ್ಟು ಪಡಿತರ ಚೀಟಿಗಳನ್ನು ಅನರ್ಹ ಎಂದು ಗುರುತಿಸಲಾಗಿದೆ ; (ಜಿಲ್ಲಾವಾರು, ಪಡಿತರ ಚೀಟಿವಾರು ಮಾಹಿತಿ ನೀಡುವುದು)

(ಇ) ಇದರಲ್ಲಿ ಅಮಾನತುಗೊಳಿಸಲಾದ, ರದ್ದುಪಡಿಸಲಾದ, ಅಳಿಸಲಾದ ಹಾಗೂ NPHH ಪರಿವರ್ತಿಸಲಾದ ಕಾರ್ಡ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಪಡಿತರ ಚೀಟಿವಾರು ಮಾಹಿತಿ ನೀಡುವುದು)

(ಈ) ಪ್ಯಾನ್‌ಕಾರ್ಡ್ – ಆಧಾರ್ ಸಂಖ್ಯೆ ಜೋಡಣೆಯನ್ನು ದಂಡ ಸಹಿತವಾಗಿ ಮಾಡಿದ್ದ ಅರ್ಹ ಬಿಪಿಎಲ್ ಪಡಿತರ ಚೀಟಿದಾರರನ್ನು ಆದಾಯ ತೆರಿಗೆ ಪಾವತಿದಾರರು ಎಂಬ ಪಟ್ಟಿಗೆ ಸೇರಿಸಿ ಅನರ್ಹ ಎಂದು ರದ್ದುಪಡಿಸಲಾಗದ ಬಿಪಿಎಲ್ ಕಾರ್ಡ್‌ಗಳ ಸಂಖ್ಯೆ ಹಾಗೂ

ಸರಿಪಡಿಸಿಕೊಡಲು ಕೋರಿ ಈ ಬಗ್ಗೆ ಇಲಾಖೆಗೆ ಸ್ವೀಕೃತವಾಗಿರುವ ಸಾರ್ವಜನಿಕ ದೂರುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಅನರ್ಹ ಎಂದು ರದ್ದುಪಡಿಸಲಾದ ಬಿಪಿಎಲ್ ಕಾರ್ಡ್‌ಗಳನ್ನು ವಾಪಸ್ಸು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಈವರೆವಿಗೂ ಎಷ್ಟು ಮಂದಿ ಅರ್ಹರಿಗೆ ಬಿಪಿಎಲ್ ಕಾರ್ಡ್‌ಗಳನ್ನು ವಾಪಸ್ಸು ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ಅನರ್ಹರಿಗೆ ಬಿಪಿಎಲ್ ಕಾರ್ಡ್‌ಗಳನ್ನು ವಿತರಿಸಿರುವ ಇಲಾಖಾ ಅಧಿಕಾರಿ/ ನೌಕರ ಎಷ್ಟು ಮಂದಿ ವಿರುದ್ಧ ಸರ್ಕಾರ ಕ್ರಮ ಕೈಗೊಂಡಿದೆ ಅಥವಾ ಕ್ರಮ ಜರುಗಿಸಲು ನಿರ್ಧರಿಸಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಅತಿಥಿ ಉಪನ್ಯಾಸಕರಿಗೆ ಆರೋಗ್ಯ ವಿಮೆ ಮತ್ತು ಇಡಗಂಟು ನೀಡುವ ಆದೇಶ ಜಾರಿ ಆಗದಿರುವ ಬಗ್ಗೆ

**ಶ್ರೀ ಮಧು.ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೪೦ (೫೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರಿಗೆ ಆರೋಗ್ಯ ವಿಮೆ ಹಾಗೂ ಸೇವಾವಧಿ ಆಧರಿಸಿ ಇಡಗಂಟು ನೀಡುವ ಸರ್ಕಾರದ ಆದೇಶ ಅನುಷ್ಠಾನ ಆಗಿದೆಯೇ ;

(ಆ) ಇಲ್ಲದಿದ್ದಲ್ಲಿ, ಜಾರಿ ಆಗದಿರುವುದಕ್ಕೆ ಕಾರಣಗಳೇನು ; ಎಂದಿನಿಂದ ಅನುಷ್ಠಾನಕ್ಕೆ ಬರಲಿದೆ ; (ವಿವರ ನೀಡುವುದು)

(ಇ) ಅತಿಥಿ ಉಪನ್ಯಾಸಕರಿಗೆ ಸೇವಾವಧಿ ಆಧರಿಸಿ ಇಡಗಂಟು ನೀಡಲು ರೂಪಿಸಿರುವ ಮಾನದಂಡಗಳೇನು ; (ವಿವರ ನೀಡುವುದು)

(ಈ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೇವೆ ಸಲ್ಲಿಸಿ ೬೦ ವರ್ಷ ಪೂರ್ಣಗೊಳಿಸಿ ಅತಿಥಿ ಉಪನ್ಯಾಸಕ ವೃತ್ತಿಯಿಂದ ಈಗಾಗಲೇ ನಿವೃತ್ತಿ ಹೊಂದಿರುವ ಉಪನ್ಯಾಸಕರಿಗೆ ಸರ್ಕಾರ ಇಡಗಂಟು ನೀಡುವುದೇ ; (ವಿವರ ನೀಡುವುದು)

(ಉ) ಅತಿಥಿ ಉಪನ್ಯಾಸಕರು ಕರ್ತವ್ಯ ಅವಧಿಯಲ್ಲಿ ಮೃತಪಟ್ಟರೆ, ಅವರ ಅವಲಂಬಿತರಿಗೆ ಯಾವ ರೀತಿಯ ಸೌಲಭ್ಯಗಳನ್ನು ಸರ್ಕಾರ ಒದಗಿಸಲಿದೆ ? (ವಿವರ ನೀಡುವುದು)

## ವೈದ್ಯಕೀಯ ಶಿಕ್ಷಣ ಮತ್ತು ಸಂಶೋಧನೆಯಲ್ಲಿ ಮೃತ ಮಾನವ ದೇಹಗಳ ಕೊರತೆ ಬಗ್ಗೆ

**ಶ್ರೀ ಮಧು.ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೪೧ (೫೪) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಎಂಬಿಬಿಎಸ್, ಆಯುರ್ವೇದ, ಹೋಮಿಯೋಪತಿ ಕಾಲೇಜುಗಳ ಸಂಖ್ಯೆ ಎಷ್ಟು ; ಮೊದಲ ವರ್ಷದ ಅಧ್ಯಯನಕ್ಕೆ ಈ ವಿಭಾಗಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ವೈದ್ಯಕೀಯ ಶಿಕ್ಷಣ ಅಧ್ಯಯನ ಮತ್ತು ಸಂಶೋಧನೆಗೆ ವಾರ್ಷಿಕ ಎಷ್ಟು ಮೃತ ಮಾನವ ದೇಹಗಳ ಅವಶ್ಯಕತೆ ಇದೆ ; ಮೆಡಿಕಲ್

ಕೌನ್ಸಿಲ್ ಆಫ್ ಇಂಡಿಯಾ (ಎಂಸಿಐ) ನಿಯಮಗಳು ಈ ಬಗ್ಗೆ ಏನನ್ನು ಹೇಳುತ್ತದೆ ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿ ವೈದ್ಯಕೀಯ ಶಿಕ್ಷಣ ಅಧ್ಯಯನ ಮತ್ತು ಸಂಶೋಧನೆಗೆ ಮಾನವ ಮೃತದೇಹಗಳ ಕೊರತೆ ಇದೆಯೇ ; ಇದ್ದಲ್ಲಿ, ಎಷ್ಟು ಕೊರತೆ ಇದೆ ; (ಸಂಪೂರ್ಣ ವಿವರ ನೀಡುವುದು)

(ಈ) ವೈದ್ಯಕೀಯ ಶಿಕ್ಷಣ ಅಧ್ಯಯನ ಮತ್ತು ಸಂಶೋಧನೆಗೆ ಮಾನವ ಮೃತದೇಹಗಳನ್ನು ಬಳಸುವ ಬದಲಾಗಿ ತಂತ್ರಜ್ಞಾನ ಆಧಾರಿತ ಪರ್ಯಾಯ ಕ್ರಮಗಳನ್ನು ಅನುಸರಿಸಬಹುದಲ್ಲವೇ ; ಈ ನಿಟ್ಟಿನಲ್ಲಿ ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ ಅಥವಾ ಕೈಗೊಳ್ಳಲಿದೆ ; (ವಿವರ ನೀಡುವುದು)

(ಉ) ಕಳೆದ ೦೩ ವರ್ಷಗಳಲ್ಲಿ ಅಥವಾ ಇನ್ನಿತರೆ ರೂಪದಲ್ಲಿ ಸ್ವೀಕೃತವಾಗಿರುವ ಮೃತ ಮಾನವ ದೇಹಗಳ ಸಂಖ್ಯೆ ಎಷ್ಟು ? (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

## ಅತಿಥಿ ಉಪನ್ಯಾಸಕರ ಅರ್ಹತೆ ವಿಷಯದಲ್ಲಿ UGC ಮಾನದಂಡಗಳನ್ನು ಅನುಸರಿಸುವ ಬಗ್ಗೆ

**ಶ್ರೀ ಮಧು.ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೪೨ (೫೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು ; ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ; ಇದರಲ್ಲಿ ಯುಜಿಸಿ ನಿಗದಿಪಡಿಸಿರುವ ಅರ್ಹತೆ ಇರುವ ಹಾಗೂ ಇಲ್ಲದವರ ಸಂಖ್ಯೆ ಎಷ್ಟು ; ( ವಿವರ ನೀಡುವುದು)

(ಆ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಅರ್ಹತೆ ವಿಷಯದಲ್ಲಿ ಯುಜಿಸಿ ನಿಗದಿಪಡಿಸಿರುವ ಮಾನದಂಡಗಳನ್ನು ಅನುಸರಿಸಿರುವ ಕುರಿತು ಸರ್ಕಾರದ ನಿಲುವೇನು ;

(ಇ) ಒಂದು ವೇಳೆ ಯುಜಿಸಿ ಮಾನದಂಡಗಳನ್ನು ಪಾಲಿಸಬೇಕಿದ್ದಲ್ಲಿ ಬಾದಿತರಾಗಿರುವ ಹಿರಿಯ ಅತಿಥಿ ಉಪನ್ಯಾಸಕರ ಹಿತಕಾಯಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಿದೆ ; (ವಿವರ ನೀಡುವುದು)

(ಈ) ಅತಿಥಿ ಉಪನ್ಯಾಸಕರನ್ನು ಯುಜಿಸಿ ಮಾನದಂಡಗಳ ಪ್ರಕಾರ ನೇಮಿಸಿಕೊಳ್ಳುವಾಗ ಕೆಲವು ವಿಷಯಗಳಲ್ಲಿ ಬೋಧಕರ ಕೊರತೆಯುಂಟಾದಲ್ಲಿ ಕೊರತೆಯಾಗುವ ಬೋಧಕರನ್ನು ಯಾವ ರೀತಿ ಸರಿದೂಗಿಸಿಕೊಳ್ಳಲಾಗುವುದು ? (ವಿವರ ನೀಡುವುದು)

## ರಾಜ್ಯದಲ್ಲಿ ನವಜಾತ ಶಿಶುಗಳ ಮರಣ ಮತ್ತು ತಾಯಿ ಮರಣ ಹೆಚ್ಚುತ್ತಿರುವ ಬಗ್ಗೆ

**ಶ್ರೀ ಮಧು. ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೪೩ (೫೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ನವಜಾತ ಶಿಶುಗಳ ಮರಣ ಮತ್ತು ತಾಯಿ ಮರಣದ ಅನುಪಾತ (ದರ) ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇದು ರಾಷ್ಟ್ರೀಯ ಸರಾಸರಿಗಿಂತ ಎಷ್ಟಿದೆ ; ಇತರೆ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕವು ಶ್ರೇಯಾಂಕದಲ್ಲಿ ಎಷ್ಟನೇ ಸ್ಥಾನದಲ್ಲಿದೆ ;

(ಇ) ರಾಜ್ಯದಲ್ಲಿರುವ ತಾಯಿ ಮತ್ತು ಆಸ್ಪತ್ರೆಗಳ ಸಂಖ್ಯೆ ಎಷ್ಟು ; ರಾಜ್ಯದಲ್ಲಿ ಹೊಸದಾಗಿ ಎಂ.ಸಿ.ಹೆಚ್ ಆಸ್ಪತ್ರೆಗಳನ್ನು ತೆರೆಯುವ ಸರ್ಕಾರ ಉದ್ದೇಶಿಸಿದೆಯೇ ; ಇದ್ದಲ್ಲಿ, (ವಿವರ ನೀಡುವುದು)

(ಈ) ನವಜಾತ ಶಿಶುಗಳ ಮತ್ತು ತಾಯಿ ಮರಣ ದರವನ್ನು ಕಡಿಮೆಗೊಳಿಸಲು ತೆಗೆದುಕೊಂಡಿರುವ ಕ್ರಮಗಳೇನು ; ಹಾಗೂ ನವಜಾತ ಶಿಶುಗಳ ಮರಣ ಮತ್ತು ತಾಯಿ ಮರಣವನ್ನು ಹೇಗೆ ವ್ಯಾಖ್ಯಾನಿಸಲಾಗುತ್ತದೆ ; (ವಿವರ ನೀಡುವುದು)

(ಉ) ಮಂಡ್ಯ ತಾಲ್ಲೂಕು ಬಿ. ಹೊಸೂರು ಕಾಲೋನಿಯಲ್ಲಿ ತಾಯಿ ಮಕ್ಕಳ ಆಸ್ಪತ್ರೆಯನ್ನು ಯಾವ ಯೋಜನೆಯಡಿ ನಿರ್ಮಿಸಲಾಗುತ್ತಿದೆ ; ಇದರ ಯೋಜನಾ ವೆಚ್ಚ ಮತ್ತು ಹಾಸಿಗೆ ಸಾಮರ್ಥ್ಯ ಎಷ್ಟು; ನಿರ್ಮಾಣ ಕಾಮಗಾರಿ ಪ್ರಸ್ತುತ ಯಾವ ಹಂತದಲ್ಲಿದೆ ;

(ಊ) ಸದರಿ ಆಸ್ಪತ್ರೆಯ ನಿರ್ವಾಣದಲ್ಲಿ ಬಾಕಿ ಉಳಿದಿರುವ ಕಾಮಗಾರಿಗಳಾವುವು ; ಉಪರಣಗಳನ್ನು ಅಳವಡಿಸುವ ಕಾರ್ಯ ನಡೆದಿದೆಯೇ ; ಆಸ್ಪತೆಯು ಎಂದಿನಿಂದ ಕಾರ್ಯಾರಂಭ ಮಾಡಲಿದೆ ; (ಸಂಪೂರ್ಣ ವಿವರ ನೀಡುವುದು)

(ಋ) ಯಾವಾಗ ಸದರಿ ಆಸ್ಪತ್ರೆಯಲ್ಲಿ ಹೆರಿಗೆ ವೈದ್ಯಕೀಯ ತುರ್ತು ಸ್ಥಿತಿಗಳನ್ನು ನಿಭಾಯಿಸುವ ದೃಷ್ಠಿಯಿಂದ ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ? (ಸಂಪೂರ್ಣ ವಿವರ ನೀಡುವುದು)

## ಕರ್ನಾಟಕ ರಾಜ್ಯದಲ್ಲಿ ಪಡಿತರ ಚೀಟಿ ವಿತರಣೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೪ (೧೦೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪಡಿತರ ಚೀಟಿ ಅರ್ಜಿಗಳನ್ನು ಕಾಲಕಾಲಕ್ಕೆ ಪ್ರಮಾಣೀಕೃತ ಮಾನದಂಡಗಳ ಆಧಾರದಲ್ಲಿ ಪರಿಶೀಲನೆ ಮತ್ತು ಪರಿಷ್ಕರಣೆ ಮಾಡದೆ ಸಾವಿರಗಟ್ಟಲೆ ಅರ್ಜಿಗಳು ಬಾಕಿಯಿದ್ದು ನೈಜ ಪಡಿತರ ಚೀಟಿ ಪಡೆಯಬೇಕಾದವರು ಪಡಿತರದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದ ಹಿನ್ನಲೆಯಲ್ಲಿ ಅರ್ಜಿ ವಿಲೇವಾರಿಗೆ ಏನು ಕ್ರಮವಹಿಸಲಾಗಿದೆ ; (ವಿವರ ನೀಡುವುದು)

(ಆ) ಖಚಿತ ಆದಾಯ ಮೂಲ ಹೊಂದಿ ಅದಕ್ಕೆ ಪೂರಕವಾಗಿ ಆರ್ಥಿಕ ವ್ಯವಹಾರ, ತೆರಿಗೆ ಪಾವತಿ, ಸ್ವಂತ ವಾಹನ, ಕೃಷಿ ಮತ್ತು ಇವುಗಳನ್ನು ಸ್ಪಷ್ಟವಾಗಿ ಗುರುತಿಸುವ ಆಧಾರ್, ಪಾನ್, ಪಹಣಿ, ತೆರಿಗೆ ಪಾವತಿ ದಾಖಲೆಗಳು ಬ್ಯಾಂಕ್ ವಹಿವಾಟು ಇತ್ಯಾದಿಗಳ ಲಿಂಕ್ ಮೂಲಕ ಪ್ರಾರಂಭದಲ್ಲೇ ಬಿಪಿಎಲ್ ಪಡಿತರ ಚೀಟಿಯ ವ್ಯಾಪ್ತಿಯಿಂದ ಹೊರಗಿಡಲು ಸರ್ಕಾರ ಪ್ರಸ್ತುತ ಕೈಗೊಳ್ಳಲುದ್ದೇಶಿಸಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಹಲವಾರು ನೈಜ ಬಿಪಿಎಲ್ ಪಡಿತರ ಚೀಟಿಯನ್ನು ಪಡೆಯಬೇಕಾದವರು ಮನೆ ಸಂಖ್ಯೆ, ಆದಾಯ ಮತ್ತು ಜಾತಿ ಪ್ರಮಾಣ ಪತ್ರ ಇತರ ಪೂರಕ ದಾಖಲೆಗಳ ಅಲಭ್ಯತೆಯ

ಹಿನ್ನೆಲೆಯಲ್ಲಿ ಪಡಿತರ ಚೀಟಿಯಿಂದ ವಂಚಿತರಾಗಿರುವ ಒಟ್ಟು ಕುಟುಂಬಗಳೆಷ್ಟು ; ಈ ಕುರಿತು ಸರ್ಕಾರದ ಗಮನಕ್ಕೆ ಬಂದ ನಂತರ ಏನು ಕ್ರಮ ವಹಿಸಲಾಗಿದೆ ;

(ಈ) ಏಕ ಬಾರಿಗೆ ಆಹಾರ ಇಲಾಖೆಯ ಅರ್ಜಿದಾರರ ಆದಾಯ/ ವ್ಯವಹಾರಕ್ಕೆ ಲಿಂಕ್ ಆಗಿರುವ ವೈಯಕ್ತಿಕ ದಾಖಲೆಗಳನ್ನು ಹೊಂದಿರುವ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಈಗ ಬಾಕಿಯಾಗಿರುವ ಎಲ್ಲಾ ಪಡಿತರ ಚೀಟಿ ಅರ್ಜಿಗಳನ್ನು ಕ್ಷಿಪ್ರವಾಗಿ ವಿಲೇವಾರಿ ಮಾಡುವ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಪ್ರಾಣಿ ಸಂಗ್ರಹಾಲಯ ಮತ್ತು ಸಸ್ಯಶಾಸ್ತ್ರೀಯ ಉದ್ಯಾನಗಳನ್ನು ಉನ್ನತೀಕರಣ ಮಾಡುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫ (೧೦೦) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿರುವ ಯಾವ ಯಾವ ಪ್ರಾಣಿ ಸಂಗ್ರಹಾಲಯಗಳನ್ನು Zoo Authority of Karnataka ಯೊಂದಿಗೆ ವಿಲೀನಗೊಳಿಸಲಾಗಿದೆ ;

(ಆ) ಮಂಗಳೂರಿನ ವಾಮಂಜೂರಿನಲ್ಲಿ ಡಾ॥ ಶಿವರಾಮ ಕಾರಂತ ಪಿಲಿಕುಳ ನಿಸರ್ಗಧಾಮದಲ್ಲಿ ಪ್ರಾಣಿ ಸಂಗ್ರಹಾಲಯ, ಸಸ್ಯಶಾಸ್ತ್ರೀಯ ಉದ್ಯಾನವನವನ್ನು ಇಲ್ಲಿಯವರೆಗೆ ಯಾಕೆ ಉನ್ನತೀಕರಣ ಮಾಡಲಾಗಿರುವುದಿಲ್ಲ, ಇದನ್ನು ನಿರ್ವಹಣೆ ಮಾಡಲು ಪೂರ್ಣಕಾಲಿಕ ಅಧಿಕಾರಿಗಳು ಸಿಬ್ಬಂದಿಗಳು ಇದ್ದಾರೆಯೇ ; ಈಗ ಇರುವ ಅಧಿಕಾರಿ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಅವರಿಗೆ ಯಾವ ರೀತಿಯ ವೇತನ ಶ್ರೇಣಿಯನ್ನು ನಿಗದಿಪಡಿಸಲಾಗಿದೆ ;

(ಇ) ಪ್ರಾಣಿ ಸಂಗ್ರಹಾಲಯವನ್ನು ಉನ್ನತೀಕರಣ ಮಾಡುವ ಹಾಗೂ ಪ್ರಾಣಿಗಳನ್ನು ವಿನಿಮಯ ಮಾಡಿಕೊಳ್ಳುವ ಉದ್ದೇಶದಿಂದ Zoo Authority of Karnataka ದೊಂದಿಗೆ ವಿಲೀನಗೊಳಿಸಿ ಅಂತರಾಷ್ಟ್ರೀಯ ಮಟ್ಟದ ನಿಸರ್ಗಧಾಮವನ್ನಾಗಿ ಉನ್ನತೀಕರಣ ಮಾಡುವ ಬಗ್ಗೆ ಯಾವಾಗ ಕ್ರಮ ವಹಿಸಲಾಗುತ್ತಿದೆ ; (ವಿವರ ನೀಡುವುದು)

(ಈ) ಪಿಲಿಕುಳ ನಿಸರ್ಗಧಾಮದ ಮೃಗಾಲಯ ಮತ್ತು ಸಸ್ಯೋಧ್ಯಾನವನ್ನು ಆರ್ಥಿಕವಾಗಿ ಸ್ವಾವಲಂಬಿಯಾಗಿ ಸದೃಢವಾಗುವ ನಿಟ್ಟಿನಲ್ಲಿ ಪ್ರವಾಸಿಗರ ಸಂಖ್ಯೆ ಹೆಚ್ಚಿಸುವ ಸಹಿತ ಯಾವ ರೀತಿಯ ಕಾರ್ಯತಂತ್ರ ರೂಪಿಸಲಾಗುತ್ತಿದೆ ?

## ಕರ್ನಾಟಕ ರಾಜ್ಯದಲ್ಲಿ ಪ್ರಸ್ತುತ ಆರೋಗ್ಯ ಇಲಾಖೆಯಲ್ಲಿ ಜಾರಿಯಲ್ಲಿರುವ ಒಟ್ಟು ಸರ್ಕಾರಿ ಸಹಕಾರಿ ಪ್ರಾಯೋಜಿತ ಆರೋಗ್ಯ ಕಾರ್ಡುಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೬ (೧೦೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಈಗ ಇರುವ ಆರೋಗ್ಯ ಇಲಾಖೆಯಲ್ಲಿ ಜಾರಿಯಲ್ಲಿರುವ ಒಟ್ಟು ಸರ್ಕಾರಿ, ಸಹಕಾರಿ ಪ್ರಾಯೋಜಿತ ಆರೋಗ್ಯ ಕಾರ್ಡುಗಳ ಸಂಖ್ಯೆ ಎಷ್ಟು ; ಈ ಆರೋಗ್ಯ ಕಾರ್ಡುಗಳ ಮೂಲಕ ಕಳೆದ ಒಂದು ವರ್ಷದ ಅವಧಿಯಲ್ಲಿ ಎಷ್ಟು ಮೊತ್ತದ ಚಿಕಿತ್ಸೆ ನೀಡಲಾಗಿದೆ ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಆಯಾಯ ಆರೋಗ್ಯ ಕಾರ್ಡುಗಳಿಗೆ ಎಂಫೆನಲ್ ಆದ ಖಾಸಗಿ ಆಸ್ಪತ್ರೆಗಳು ಯಾವುವು ; ಮತ್ತು ಎಷ್ಟು ಜನ ವಿಶೇಷ ವೈದ್ಯರುಗಳು (ಸ್ಪೆಶಲಿಸ್ಟ್) ಎಂಪಿನಲ್

ಆಗಿರುತ್ತಾರೆ ; ಈ ಕಾರ್ಡುಗಳ ಬಳಕೆಗೆ ಇರುವ ನಿಯಮಗಳು ಯಾವುವು ;

(ಇ) ಆರೋಗ್ಯ ಕಾರ್ಡುದಾರರು ಪ್ರತಿ ಬಾರಿ ಚಿಕಿತ್ಸೆಗಾಗಿ ಎಂಪೆನಲ್ ಆದ ಖಾಸಗಿ ಆಸ್ಪತ್ರೆಗಳಿಗೆ ದಾಖಲಾದಾಗ ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿಗಳಿಂದ ರೆಫರಲ್ ಪ್ರಮಾಣ ಪತ್ರವನ್ನು ಪಡೆಯಬೇಕಾಗಿದ್ದು, ರೆಫರಲ್ ಪ್ರಮಾಣ ಪತ್ರಗಳನ್ನು ನೀಡಲು ಯಾವ ಹಂತದ ವೈದ್ಯರುಗಳಿಗೆ ಅವಕಾಶ ನೀಡಲಾಗಿದೆ ; ರೆಫರಲ್ ನಿಯಮಗಳನ್ನು ಸಡಿಲಗೊಳಿಸುವ ಬಗ್ಗೆ ಏನು ಕ್ರಮವಹಿಸಲಾಗಿದೆ ;

(ಈ) ಕೆಲವು ಆಸ್ಪತ್ರೆಗಳು ಆರೋಗ್ಯ ಕಾರ್ಡ್‌ಗಳ ರೆಫರಲ್ ಆಸ್ಪತ್ರೆಗಳಾಗಿದ್ದರೂ ಸಹ ಅದರಲ್ಲಿ ಭರಿಸುತ್ತಿರುವ ಚಿಕಿತ್ಸಾ ವೆಚ್ಚ ಕಡಿಮೆ ಎಂದು ಚಿಕಿತ್ಸೆ ನಿರಾಕರಿಸುತ್ತಿರುವುದು ಮತ್ತು ಕೆಲವು ಸಂದರ್ಭದಲ್ಲಿ ಆರೋಗ್ಯ ಕಾರ್ಡ್ ಇದೆ ಎನ್ನುವ ಕಾರಣಕ್ಕಾಗಿ ಅನಗತ್ಯವಾಗಿ ಹೆಚ್ಚು ವೆಚ್ಚದ ಚಿಕಿತ್ಸೆಯನ್ನು ನೀಡುವುದರ ಬಗ್ಗೆ ಇಲಾಖೆಯಿಂದ ಯಾವ ಪರಿಹಾರ ಕ್ರಮಗಳನ್ನು ಕೈಗೊಳ್ಳಲಾಗುವುದು ? (ವಿವರ ನೀಡುವುದು)

## ಕರ್ನಾಟಕ ರಾಜ್ಯದ ಸರಕಾರಿ ಶಾಲೆಗಳ ಮೂಲಭೂತ ಸೌಕರ್ಯಗಳ ಸುಧಾರಣೆ, ಉನ್ನತೀಕರಣ ಹಾಗೂ ಪಠ್ಯೇತರ ಚಟುವಟಿಕೆಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೭ (೧೦೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರಕಾರಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಸುಧಾರಣೆ ಮತ್ತು ಅನುದಾನ ಬಿಡುಗಡೆಗೆ ಸರಕಾರ ಅನುಸರಿಸುತ್ತಿರುವ

ಆದ್ಯತಾ ಮಾನದಂಡಗಳೇನು ; ಈ ಆದ್ಯತೆಗಳನ್ನು ನಿರ್ಧರಿಸುತ್ತಿರುವವರಾರು ; (ವಿವರ ನೀಡುವುದು)

(ಆ) ಸರಕಾರಿ, ಅರೆ ಸರಕಾರಿ ಸಂಸ್ಥೆಗಳ ಔದ್ಯಮಿಕ ಸಾಮಾಜಿಕ ಬದ್ಧತಾ ನಿಧಿಯನ್ನು (ಸಿಎಸ್ ಆರ್) ಮತ್ತು ಸ್ಥಳೀಯ ಹಣಕಾಸು ಮತ್ತು ಉದ್ಯಮಿಗಳ ದೇಣಿಗೆಯನ್ನು ಕ್ರೋಢೀಕರಿಸಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳ ಸುಧಾರಣೆ / ಉನ್ನತೀಕರಣ ಮಾಡಲು ಸರಕಾರ ಯಾವ ಕಾರ್ಯ ತಂತ್ರ ರೂಪಿಸಿದೆ ; (ವಿವರ ನೀಡುವುದು)

(ಇ) ಸರಕಾರಿ ಶಾಲೆಗಳಲ್ಲಿ ಈಗ ಒದಗಿಸುತ್ತಿರುವ ಪಠ್ಯ ಪುಸ್ತಕ, ಲೇಖನ ಸಾಮಗ್ರಿ, ಹಾಲು, ಮೊಟ್ಟೆ, ಚಿಕ್ಕಿ, ಬಿಸಿಯೂಟ ಇತ್ಯಾದಿಗಳ ವಿತರಣೆ ಮತ್ತು ನಿರ್ವಹಣೆಯ ಗುಣಮಟ್ಟವನ್ನು ಹೇಗೆ ಖಾತರಿಪಡಿಸಿಕೊಳ್ಳಲಾಗುತ್ತಿದೆ ; ಮೂರನೇ ಪಕ್ಷಗಾರ ಸಂಸ್ಥೆಯಿಂದ ಅಚ್ಚರಿ ತಪಾಸಣೆ (ಸರ್ಪ್ರೈಸ್ ವಿಸಿಟ್) ಮೂಲಕ ಹಿಮ್ಮಾಹಿತಿ ಸಂಗ್ರಹಿಸಿ ವ್ಯವಸ್ಥೆ ಸುಧಾರಣೆಗೆ ಯಾವಾಗ ಕ್ರಮ ವಹಿಸಲಾಗುವುದು ;

(ಈ) ಶಾಲೆಗಳಲ್ಲಿ ಪಠ್ಯ ಚಟುವಟಿಕೆ ಜೊತೆಗೆ ಕೃಷಿ, ಕೈಗಾರಿಕೆ, ಬ್ಯಾಂಕ್ ಹಾಗೂ ಆಡಳಿತ ಕುರಿತಂತೆ ಮತ್ತು ಇತರ ಲಲಿತ ಕಲೆಗಳಾದ ಭರತನಾಟ್ಯ, ಸಂಗೀತ, ವಾದ್ಯ ಪರಿಕರಗಳು ಹಾಗೂ ಜೀವನಾವಶ್ಯಕ ಆರೋಗ್ಯ ಮತ್ತು ಆಹಾರ ಸುರಕ್ಷತೆ, ಜೀವ ಸುರಕ್ಷತೆ, ಇತ್ಯಾದಿಗಳನ್ನು ಸರಳವಾಗಿ ಪರಿಚಯಿಸಿ ಖಾಸಗಿ ಶಾಲೆಗಳ ವಿದ್ಯಾರ್ಥಿಗಳೊಂದಿಗೆ ಸಮ ಸ್ಪರ್ಧಿಯಾಗಿಸುವ ಬಗ್ಗೆ ಸರಕಾರ ಏನೇನು ಕ್ರಮ ವಹಿಸುತ್ತಿದೆ ? (ವಿವರ ನೀಡುವುದು)

## ಕರ್ನಾಟಕ ರಾಜ್ಯದ ವಿದ್ಯುತ್ ಶಕ್ತಿ ಪ್ರಸರಣ ನಿಗಮಗಳ ವಿದ್ಯುತ್ ಸ್ಥಾವರ ಮತ್ತು ವಿತರಣ ಜಾಲಗಳ ಸುರಕ್ಷತೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೮ (೧೦೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿದ್ಯುತ್ ಸಂಬಂಧಿ ದುರ್ಘಟನೆಗಳಲ್ಲಿ ಮರಣ ಹೊಂದಿದ ಹಾಗೂ ಗಾಯಗೊಂಡಿರುವ ಪ್ರಕರಣಗಳೆಷ್ಟು ; ಇದಕ್ಕೆ ಕಾರಣಗಳೇನು ; ಈ ಕುರಿತು ಎಷ್ಟು ಪ್ರಕರಣಗಳಲ್ಲಿ ಇಲಾಖೆಯಿಂದ ಪರಿಹಾರ ಧನವನ್ನು ವಿತರಿಸಲಾಗಿದೆ ;

(ಆ) ಯಾವುದೇ ವಿದ್ಯುತ್ ವಿತರಣ ಜಾಲಗಳ ತಂತಿಗಳು ಸಾರ್ವಜನಿಕ ರಸ್ತೆ, ಶಾಲೆ, ಅಂಗನವಾಡಿ ಹಾಗೂ ಇತರ ಕಛೇರಿಗಳ ಮೇಲೆ ಹಾದು ಹೋಗುವ ಸಂದರ್ಭದಲ್ಲಿ ತಂತಿಗಳ ಅಡಿಯಲ್ಲಿ ಸುರಕ್ಷಿತ ಗಾರ್ಡ್‌ಗಳನ್ನು ಅಳವಡಿಸಲಾಗಿದೆಯೇ ; ಅಳವಡಿಸದಿದ್ದರೆ ಕಾರಣಗಳೇನು ; ಯಾವಾಗ ಅಳವಡಿಸಲು ಕ್ರಮ ವಹಿಸಲಾಗುವುದು ; (ವಿವರ ನೀಡುವುದು)

(ಇ) ಸಂಭಾವ್ಯ ವಿದ್ಯುತ್ ಸಂಬಂಧಿ ದುರ್ಘಟನೆಗಳ ಬಗ್ಗೆ ಲಭ್ಯವಿರುವ ಮಾಹಿತಿಯನ್ನು ಇಲಾಖೆಗೆ ನೀಡಿದ್ದಲ್ಲಿ, ಇಲಾಖೆ ಯಾವ ಕ್ರಮ ವಹಿಸುತ್ತಿದೆ ; (ವಿವರ ನೀಡುವುದು)

(ಈ) ಕರ್ನಾಟಕ ರಾಜ್ಯದ ವಿದ್ಯುತ್ ಶಕ್ತಿ ಪ್ರಕರಣ ನಿಗಮಗಳು ತಮ್ಮ ನಿಗಮಗಳ ವ್ಯಾಪ್ತಿಯಲ್ಲಿ ವಿದ್ಯುತ್ ಸ್ಥಾವರ ಮತ್ತು ವಿತರಣಾ ಜಾಲಗಳ ಸುರಕ್ಷತೆ ಕುರಿತು ಸಮಗ್ರವಾಗಿ ಏನೇನು ಸುಧಾರಣಾ ಕ್ರಮಗಳನ್ನು ವಹಿಸುತ್ತಿವೆ ? (ವಿವರ ನೀಡುವುದು)

## ಅರ್ಹ ಮತ್ತು ಅನರ್ಹ ಪಡಿತರದಾರರ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೪೯ (೧೩೨) ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಪಡಿತರದಾರರ ಸಂಖ್ಯೆ ಎಷ್ಟು ; ಈ ಪೈಕಿ ಬಡತನ ರೇಖೆಗಿಂತ ಕೆಳಗಿರುವ ಹಾಗೂ ಬಡತನ ರೇಖೆಗಿಂತ ಮೇಲಿರುವ ಪಡಿತರದಾರರು ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಆಹಾರ ಪಡಿತರ ಕಾರ್ಡುಗಳನ್ನು ಹೊಂದಲು ಇರುವ ಮಾನದಂಡಗಳೇನು ; ಮಾನದಂಡಕ್ಕೆ ಒಳಪಡದಿದ್ದರೂ ಪಡಿತರ ಕಾರ್ಡುಗಳನ್ನು ಹೊಂದಿರುವವರ ಸಂಖ್ಯೆ ಎಷ್ಟು ;

(ಇ) ಸರ್ಕಾರವು ಅನರ್ಹ ಪಡಿತರದಾರರನ್ನು ಪತ್ತೆ ಹಚ್ಚಲು ಅನುಸರಿಸಿದ ಕ್ರಮಗಳೇನು ;

(ಈ) ಗ್ಯಾರಂಟಿ ಯೋಜನೆಗಳಲ್ಲೊಂದಾದ ಅನ್ನಭಾಗ್ಯ ಯೋಜನೆಯಡಿ ಅನರ್ಹ ಪಡಿತರದಾರರಿಗೂ ಈ ಯೋಜನೆಯ ಲಾಭ ದೊರಕಿದೆಯೇ :

(ಉ) ಅನ್ನಭಾಗ್ಯ ಯೋಜನೆಯ ಒತ್ತಡವನ್ನು ನಿಯಂತ್ರಿಸುವುದಕ್ಕಾಗಿ ಸರ್ಕಾರ ಅರ್ಹ ಮತ್ತು ಅನರ್ಹ ಪಡಿತರದಾರರನ್ನು ಗುರುತಿಸಿರುವುದು ನಿಜವೇ ? (ವಿವರಿಸುವುದು)

## ರಾಜ್ಯದಲ್ಲಿ ನಕಲಿ ಔಷಧ ಮಾರಾಟ ಪ್ರಕರಣಗಳ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೫೦ (೧೩೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನಕಲಿ ಔಷಧ ಮಾರಾಟ ಪ್ರಕರಣಗಳು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ಔಷಧಿಗಳು ನಕಲಿ ರೂಪದಲ್ಲಿ ಮಾರಾಟವಾಗಿರುವುದು ವರದಿಯಾಗಿದೆ ; (ಔಷಧದ ಹೆಸರುಗಳನ್ನು ಒದಗಿಸುವುದು)

(ಇ) ನಕಲಿ ಔಷಧಗಳ ಮಾರಾಟ ನಿಯಂತ್ರಣಕ್ಕೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದ ಎಪಿಎಲ್ ಮತ್ತು ಬಿಪಿಎಲ್ ಕಾರ್ಡ್‌ಗಳ ರದ್ದು ಮಾಡುತ್ತಿರುವ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೫೧ (೪೦) ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಎಪಿಎಲ್ ಮತ್ತು ಬಿಪಿಎಲ್ ಕಾರ್ಡುದಾರರಿದ್ದಾರೆ ; ನಗರವಾರು ಹಾಗೂ ಗ್ರಾಮಾಂತರವಾರು ಪ್ರತ್ಯೇಕವಾಗಿ ವಿವರ ನೀಡುವುದು)

(ಆ) ಕಳೆದ ಒಂದು ವರ್ಷದಲ್ಲಿ ಎಷ್ಟು ಬಿಪಿಎಲ್ ಕಾರ್ಡುಗಳನ್ನು ರದ್ದು ಮಾಡಲಾಗಿದೆ ; (ನಗರವಾರು ಮತ್ತು ಗ್ರಾಮಾಂತರವಾರು ಹಾಗೂ ಜಾತಿವಾರು ವಿವರಣೆ ಒದಗಿಸುವುದು)

(ಇ) ಈ ಯಾವ ಮಾನದಂಡಗಳಡಿಯಲ್ಲಿ ಈ ಕಾರ್ಡುಗಳನ್ನು ರದ್ದುಮಾಡಲಾಗಿದೆ ?

## ರಾಜ್ಯ ಸರ್ಕಾರದ ವಿವೇಕ್ ಯೋಜನೆಯ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೫೨ (೪೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿವೇಕ್ ಯೋಜನೆ ಒಂದು ಉತ್ತಮವಾದ ಯೋಜನೆಯಾಗಿದ್ದು, ಸರ್ಕಾರ ಈ ಯೋಜನೆಯನ್ನು ಮುಂದುವರೆಸುತ್ತಿದೆಯೇ ;

(ಆ) ಸರ್ಕಾರವು ಈ ಯೋಜನೆಯನ್ನು ಸ್ಥಗಿತಗೊಳಿಸಿದ್ದರೆ ಕಾರಣಗಳನ್ನು ನೀಡುವುದು ;

(ಇ) ಈ ಯೋಜನೆಯನ್ನು ಸರ್ಕಾರ ಉನ್ನತೀಕರಿಸಿದ ಶಾಲೆಗಳಿಗೆ ವಿಸ್ತರಿಸಲು ಉದ್ದೇಶವನ್ನು ಹೊಂದಿದೆಯೇ ; (ವಿವರ ಒದಗಿಸುವುದು)

(ಈ) ಯಾವ ಯಾವ ಶಾಲೆಗಳನ್ನು ಈ ಯೋಜನೆ ಅಡಿಯಲ್ಲಿ ಉನ್ನತೀಕರಿಸಲು ರೂಪು-ರೇಷೆಗಳನ್ನು ಹಾಕಿಕೊಳ್ಳಲಾಗಿದೆ ? (ಜಿಲ್ಲಾವಾರು ಶಾಲೆಗಳ ವಿವರ ನೀಡುವುದು)

## ರಾಜ್ಯ ಸರ್ಕಾರ ಖರೀದಿಸುವ ಔಷಧಿಗಳ ವಿವರ ಕುರಿತು

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೫೩ (೪೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರ ವರ್ಷಕ್ಕೆ ಎಷ್ಟು ಮೊತ್ತದ ಔಷಧಿಗಳನ್ನು ಖರೀದಿಸುತ್ತಿದೆ ;

(ಆ) ಯಾವ ಯಾವ ತರದ ಔಷಧಿಗಳನ್ನು ಎಲ್ಲಿ ಖರೀದಿಸಲಾಗುತ್ತಿದೆ ;

(ಇ) ಖರೀದಿಸಿದ ಔಷಧಿಗಳ ಗುಣಮಟ್ಟವನ್ನು ಯಾವ ರೀತಿಯಲ್ಲಿ ಪರಿಶೀಲನೆ ಮಾಡಲಾಗುತ್ತಿದೆ ;

(ಈ) ರಾಜ್ಯದಲ್ಲಿ ಔಷಧಿಯ ಕೊರತೆ ಇರುವುದು ನಿಜವೇ ; ಹಾಗಿದ್ದಲ್ಲಿ, ಕೊರತೆ ನೀಗಿಸಲು ಯಾವ ರೀತಿ ಕ್ರಮ ಕೈಗೊಳ್ಳಲಾಗುತ್ತಿದೆ ;

(ಉ) ಔಷಧಿಗಳನ್ನು ಖರೀದಿಸಲು ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ ?

## ರಾಜ್ಯ ಸರ್ಕಾರದಿಂದ ರೈತರಿಗೆ ನೀಡುತ್ತಿರುವ ಸೋಲಾರ್ ಪಂಪ್ ಸೆಟ್‌ಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೫೪ (೪೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರದ ಸಹಯೋಗದೊಂದಿಗೆ ಕೇಂದ್ರ ಸರ್ಕಾರದವರು ರೂಪಿಸಿರುವ (KREDL) ಸೋಲಾರ್ ಪಂಪ್ ಸೆಟ್ ರೈತರಿಗೆ ನೀಡುವ ಉದ್ದೇಶ ಯಾವ ಹಂತದಲ್ಲಿದೆ ;

(ಆ) ಈವರೆಗೆ ರಾಜ್ಯದ ಎಷ್ಟು ರೈತರು ಸೋಲಾರ್ ಪಂಪ್ ಪಡೆಯಲು ಅರ್ಜಿ ಸಲ್ಲಿಸಿದ್ದಾರೆ ;

(ಇ) ಅರ್ಜಿ ಸಲ್ಲಿಸಿದ ಎಷ್ಟು ರೈತರಿಗೆ ಸೋಲಾರ್ ಪಂಪ್‌ಸೆಟ್ ನೀಡಲಾಗಿದೆ ;

(ಈ) ಯಾವ ಮಾನದಂಡದ ಮೇಲೆ ರೈತರಿಗೆ ಸೋಲಾರ್ ಪಂಪ್ ಸೆಟ್ ಸರಬರಾಜುದಾರರನ್ನು ಆಯ್ಕೆ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಉ) ಅರ್ಜಿ ಸಲ್ಲಿಸಿರುವ ರೈತರಿಗೆ ಸರಬರಾಜು (ವೆಂಡರ್) ದಾರರ ಆಯ್ಕೆ ಮಾಡಿಕೊಳ್ಳಲು ಸಾಫ್ಟ್‌ವೇರ್ ನಲ್ಲಿ ಸಮಸ್ಯೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪರಿಹಾರ ಏನು ? (ವಿವರ ನೀಡುವುದು)

## ಅನರ್ಹ ಬಿ.ಪಿ.ಎಲ್ ಕಾರ್ಡ್‌ಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫ (೮೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭಾರತ ಸರ್ಕಾರದ ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆರವರ ಪತ್ರ ದಿನಾಂಕ: ೨೨.೧೦.೨೦೨೪ರಲ್ಲಿ ಎಲ್ಲಾ ರಾಜ್ಯದ ಮುಖ್ಯ ಕಾರ್ಯದರ್ಶಿಗಳಿಗೆ ಬರೆದಿರುವ ಪತ್ರದಲ್ಲಿ "ಟಿಡಿಪಿಎಸ್ ನಿಯಂತ್ರಣ ಆದೇಶ ೨೦೧೫ರ ವಿಭಾಗ ೧೦(೨) ಮತ್ತು ಷರತ್ತು ೩ ರನ್ವಯ ಅನರ್ಹ ಪಡಿತರ ಚೀಟಿ ಹೊಂದಿದ ಕುಟುಂಬಗಳನ್ನು ಬಿ.ಪಿ.ಎಲ್ ಪಟ್ಟಿಯಿಂದ ತೆಗೆದುಹಾಕಲು ಮತ್ತು ಕಾಲಕಾಲಕ್ಕೆ ಈ ಪಟ್ಟಿಯನ್ನು ನವೀಕರಿಸುವ ಕುರಿತು ಕ್ರಮ ಕೈಗೊಳ್ಳುವುದು" ಎಂದು ನಿರ್ದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯ ಸರ್ಕಾರ ಈ ಕುರಿತು ಕೈಗೊಂಡಿರುವ ಕ್ರಮಗಳೇನು ; ಹಾಗೂ ಕೇಂದ್ರ ಸರ್ಕಾರದ ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆ ರವರ ಗಣಕೀಕರಣ ಮತ್ತು eKYC ದೇಶದಲ್ಲಿ ೫.೮ ಕೋಟಿ ಪಡಿತರ ಚೀಟಿಗಳನ್ನು ಹಿಂಪಡೆದಿದ್ದು, ಅದರಲ್ಲಿ ರಾಜ್ಯದ ಎಷ್ಟು ಪಡಿತರ ಚೀಟಿಗಳನ್ನು ಹಿಂಪಡೆಯಲಾಗಿದೆ ;

(ಇ) ಈ ಆದೇಶ ಬಂದ ನಂತರ ರಾಜ್ಯದಲ್ಲಿ ಬಿ.ಪಿ.ಎಲ್ ಕಾರ್ಡ್‌ಗಳನ್ನು ಪಡೆಯಲು ಅಥವಾ ಅರ್ಹರಾಗಲು ಮಾನದಂಡಗಳಲ್ಲಿ ತಿದ್ದುಪಡಿ ತರಲಾಗಿದೆಯೇ ; ಅಥವಾ ಹೊಸ ಮಾನದಂಡಗಳನ್ನು ರೂಪಿಸಲಾಗಿದೆಯೇ ;

(ಈ) ರಾಜ್ಯದಲ್ಲಿ ಜುಲೈ–೨೦೧೯ ರಿಂದ ಮೇ–೨೦೨೩ರ ಅವಧಿಯಲ್ಲಿ ಬಡತನ ರೇಖೆಗಿಂತ ಮೇಲಿರುವ ಕುಟುಂಬಗಳು ಬಿ.ಪಿ.ಎಲ್ ಕಾರ್ಡ್‌ಗಳನ್ನು ಪಡೆಯುವುದಲ್ಲದೇ ಬಿ.ಪಿ.ಎಲ್ ಕಾರ್ಡ್‌ದಾರರಿಗೆ ಇರುವ ಸೌಲಭ್ಯಗಳನ್ನು ಪಡೆದು ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿದವರ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಳ್ಳಲಾಗಿದೆ ?

## ರಾಜ್ಯದಲ್ಲಿ ಮಾನಸಿಕ ಆರೋಗ್ಯ ಸಮಸ್ಯೆಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೬ (೮೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭಾರತದ ಮಾನಸಿಕ ಸ್ಥಿತಿ ವರದಿಯ ಆಧಾರದಂತೆ ರಾಜ್ಯದ ಯುವಕರಲ್ಲಿ ಮಾನಸಿಕ ಆರೋಗ್ಯ ಸಮಸ್ಯೆಗಳ ಸಂಖ್ಯೆಯಲ್ಲಿ ಆತಂಕಕಾರಿ ಬೆಳವಣಿಗೆಗಳು ಏರಿಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರಗಳನ್ನು ಒದಗಿಸುವುದು)

(ಆ) ರಾಜ್ಯದಲ್ಲಿ ಯುವಕರು ಎದುರಿಸುತ್ತಿರುವ ಮಾನಸಿಕ ಆರೋಗ್ಯ ಕಾಯಿಲೆಗಳ ಪಥವನ್ನು ಪತ್ತೆಹಚ್ಚುವ ಡೇಟಾಬೇಸ್‌ನ್ನು ಸರ್ಕಾರವು ನಿರ್ವಹಿಸುತ್ತಿದೆಯೇ ; ಇಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು ; (ವಿವರಗಳನ್ನು ನೀಡುವುದು)

(ಇ) ಈ ಮಾನಸಿಕ ಆರೋಗ್ಯ ಕಾಯಿಲೆಗಳನ್ನು ನಿಭಾಯಿಸಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ ?

## ರಾಜ್ಯದಲ್ಲಿ ಇರುವ ವೈದ್ಯಕೀಯ ಕಾಲೇಜುಗಳ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭ (೮೬) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜಗಳ ಕೊರತೆ ಇದೆಯೇ ; ಹಾಗಿದ್ದಲ್ಲಿ, ಎಷ್ಟು ವೈದ್ಯಕೀಯ ಕಾಲೇಜುಗಳಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಸರ್ಕಾರಿ ಆಯುಷ್ ವೈದ್ಯಕೀಯ ಕಾಲೇಜುಗಳು ಮತ್ತು ಕಾರ್ಯನಿರ್ವಹಿಸುತ್ತಿರುವ ಆಯುಷ್ ಕ್ಷೇಮ ಕೇಂದ್ರಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಇಂತಹ ವೈದ್ಯಕೀಯ ಕಾಲೇಜುಗಳಿಗೆ ಮತ್ತು ಕ್ಷೇಮ ಕೇಂದ್ರಗಳಿಗೆ ಕೇಂದ್ರ ಸರ್ಕಾರವು ಅನುದಾನ ನೀಡುತ್ತಿದಿಯೇ ; ನೀಡುತ್ತಿದ್ದಲ್ಲಿ ಕೇಂದ್ರ ಸರ್ಕಾರದ ಅನುದಾನವನ್ನು ರಾಜ್ಯದ ಯಾವ ಯಾವ ಕಾಲೇಜುಗಳಿಗೆ ನೀಡಲಾಗಿದೆ ;

(ಈ) ಬೆಳಗಾವಿ ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಹೊಸ ಆಯುಷ್ ಕಾಲೇಜು ಮತ್ತು ಆಯುಷ್ ಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರವು ಯೋಜಿಸಿದೆಯೇ ; ಇದ್ದಲ್ಲಿ, ಅದರ ವಿವರಗಳನ್ನು ಒದಗಿಸುವುದು ?

## ರಾಜ್ಯದ ಗಡಿ ಭಾಗದ ಹಳ್ಳಿಗಳಲ್ಲಿನ ಶಿಕ್ಷಣದ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೮ (೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಹಾರಾಷ್ಟ್ರ ಸರ್ಕಾರವು ಕರ್ನಾಟಕ ಗಡಿ ಭಾಗದ ಸುಮಾರು ೮೬೫ ಕರ್ನಾಟಕದ ಹಳ್ಳಿಗಳನ್ನು ಮರಾಠ ಭಾಷಿಕರ ಗ್ರಾಮಗಳೆಂದು ಘೋಷಿಸಿ, ಶೈಕ್ಷಣಿಕ ಮತ್ತು ಉದ್ಯೋಗದಲ್ಲಿ ಶೇ.೩ರಷ್ಟು ಮೀಸಲಾತಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರವು ಕರ್ನಾಟಕ–ಮಹಾರಾಷ್ಟ್ರ ಗಡಿ ಭಾಗದಲ್ಲಿ ಕನ್ನಡಿಗರು ವಾಸಿಸುತ್ತಿರುವ ಹಳ್ಳಿಗಳನ್ನು ಕನ್ನಡ ಭಾಷಿಕರ ಗ್ರಾಮಗಳೆಂದು ಘೋಷಿಸಿ ; ಶೈಕ್ಷಣಿಕ ಮತ್ತು ಉದ್ಯೋಗಗಳಲ್ಲಿ ಮೀಸಲಾತಿ ನೀಡುವ ಕುರಿತು ಗಮನ ಹರಿಸಿದೆಯೇ ;

(ಇ) ಈ ಪ್ರದೇಶಗಳಲ್ಲಿನ ಕನ್ನಡಿಗರು ಅನಿವಾರ್ಯವಾಗಿ ಮರಾಠಿ ಶಾಲೆಗಳಿಗೆ ಸೇರಬೇಕಾದ ಪರಿಸ್ಥಿತಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಜಾಗೃತ ಕ್ರಮಗಳೇನು ?

## ಕರ್ನಾಟಕ ರಾಜ್ಯದ ತಾಂತ್ರಿಕ ಶಿಕ್ಷಣ ಕಾಲೇಜುಗಳಲ್ಲಿ ಕೃತಕ ಬುದ್ಧಿಮತ್ತೆ ರೊಬೊಟಿಕ್ಸ್ ಮತ್ತು ಡೇಟಾ ವಿಶ್ಲೇಷಣೆ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೫೯ (೮೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಜಗತ್ತಿನಲ್ಲಿ ಅತೀ ವೇಗವಾಗಿ ಬೆಳೆಯುತ್ತಿರುವ ವಿಜ್ಞಾನ ಮತ್ತು ತಂತ್ರಜ್ಞಾನ ಯುಗದಲ್ಲಿ ರಾಜ್ಯ ವಿದ್ಯಾರ್ಥಿಗಳು ಕರ್ನಾಟಕ ಕೃತಕ ಬುದ್ಧಿಮತ್ತೆ (Artificial Intelligence) ರೊಬೊಟಿಕ್ಸ್ ಮತ್ತು

ಡೇಟಾ ವಿಶ್ಲೇಷಣೆ (Data Analytics) ಗಳಂತಹ ಅಸಾಧಾರಣ ವಿಷಯಗಳಲ್ಲಿ ಭವಿಷ್ಯ ರೂಪಿಸಿಕೊಳ್ಳಲು ಉನ್ನತ ಶಿಕ್ಷಣ ಇಲಾಖೆ ಅಧೀನದಲ್ಲಿ ಬರುವಂತಹ ಎಷ್ಟು ಸರ್ಕಾರಿ ಕಾಲೇಜುಗಳಲ್ಲಿ ಕೃತಕ ಬುದ್ಧಿಮತ್ತೆ (Artificial Intelligence) ಮತ್ತು ರೊಬೊಟಿಕ್ಸ್ ವಿಷಯವನ್ನು ಆಯ್ಕೆ ಮಾಡಿಕೊಂಡು ವಿದ್ಯಾಭ್ಯಾಸವನ್ನು ಮಾಡಲು ಕಳೆದ ೩ ವರ್ಷಗಳಲ್ಲಿ ಎಷ್ಟು ಬ್ರ್ಯಾಂಚ್‌ಗಳನ್ನು ತೆರೆಯಲಾಗಿದೆ ;

(ಆ) (Artificial Intelligence) ರೊಬೊಟಿಕ್ಸ್ ಮತ್ತು ಡೇಟಾ ವಿಶ್ಲೇಷಣೆ (Data Analytics) ಗಳಂತಹ ಕೋರ್ಸ್‌ಗಳನ್ನು ನಡೆಸುವ ಕಾಲೇಜುಗಳಿಗೆ ಪ್ರೋತ್ಸಾಹ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ;

(ಇ) ಕಳೆದ ಮೂರು ವರ್ಷಗಳಲ್ಲಿ ಈ ವಿಷಯಗಳನ್ನು ಆಯ್ಕೆ ಮಾಡಿಕೊಂಡಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ಮತ್ತು ಈ ವಿಷಯಗಳಲ್ಲಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು/ಕಾಲೇಜುವಾರು ಮಾಹಿತಿ ನೀಡುವುದು)

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೬೦ (೧೨೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೦೨ ವರ್ಷಗಳಲ್ಲಿ ಬೆಳಗಾವಿ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಎಷ್ಟು ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಶೌಚಾಲಯ ನಿರ್ಮಿಸಲಾಗಿದೆ ಮತ್ತು ಬಿಡುಗಡೆ ಮಾಡಿದ ಮೊತ್ತವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಜಿಲ್ಲೆಗಳಲ್ಲಿ ಎಷ್ಟು ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿನ ಶೌಚಾಲಯಗಳು ಮಕ್ಕಳಿಗೆ ಉಪಯೋಗಕ್ಕೆ ಲಭ್ಯವಾಗಿವೆ ; ಇದರಲ್ಲಿ ಹೆಣ್ಣು ಮಕ್ಕಳಿಗಾಗಿ ಮತ್ತು ವಿಶೇಷ ಚೇತನರಿಗಾಗಿ ಶೌಚಾಲಯಗಳನ್ನು ನಿರ್ಮಿಸಲಾಗಿದೆಯೇ ; ನಿರ್ಮಿಸಿದ್ದಲ್ಲಿ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ನಿರ್ಮಿಸಲಾದ ಎಷ್ಟೋ ಶೌಚಾಲಯಗಳು ದುರಸ್ಥಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಶಾಲೆಗಳ ಶೌಚಾಲಯಗಳು ದುರಸ್ಥಿಯಲ್ಲಿವೆ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಮೇಲ್ಕಂಡ ಜಿಲ್ಲೆಗಳಲ್ಲಿನ ಎಷ್ಟು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಶೌಚಾಲಯ ವ್ಯವಸ್ಥೆ ಇರುವುದಿಲ್ಲ ? (ಜಿಲ್ಲಾವಾರು ಮಾಹಿತಿ ನೀಡುವುದು)

## ವಿಜಯಪುರ, ಬಾಗಲಕೋಟೆ ಜಿಲ್ಲೆಗಳಲ್ಲಿನ ಬಿ.ಪಿ.ಎಲ್ ಕಾರ್ಡ್‌ಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೬೧ (೧೨೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಪ್ರಸ್ತುತ ಬಿಪಿಎಲ್ ಕಾರ್ಡ್‌ಗಳನ್ನು ಹೊಂದಿದ ಕುಟುಂಬಗಳ ಸಂಖ್ಯೆ ಎಷ್ಟು ;

(ಆ) ಇತ್ತೀಚೆಗೆ ರಾಜ್ಯದಲ್ಲಿ ಸುಮಾರು ೧೪ ಲಕ್ಷ ಬಿಪಿಎಲ್ ಕಾರ್ಡ್‌ಗಳು ರದ್ದಾಗಿರುವುದು ನಿಜವೇ ; ಇದ್ದಲ್ಲಿ, ಯಾವ ಮಾನದಂಡಗಳ ಆಧಾರದ ಮೇಲೆ ರದ್ದು ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಅರ್ಹರ ಬಿಪಿಎಲ್ ಕಾರ್ಡ್‌ಗಳನ್ನು ಏಕಾಏಕಿ ರದ್ದು ಮಾಡಿರುವುದು ನಿಜವೇ ; ನಿಜವಿದ್ದಲ್ಲಿ, ಯಾವ ಕಾರಣಕ್ಕಾಗಿ ಮತ್ತು ಯಾವ ಆದೇಶದ ಮೇಲೆ ರದ್ದುಗೊಳಿಸಲಾಗಿದೆ ; ಬಡ ಕುಟುಂಬಗಳ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡಲು ಕಾರಣಗಳೇನು ? (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

## ವಿಜಯಪುರ, ಬಾಗಲಕೋಟೆ ಜಿಲ್ಲೆಗಳಲ್ಲಿನ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕೊಠಡಿ ನಿರ್ಮಾಣ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೬೨ (೧೨೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿನ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕೊಠಡಿ ನಿರ್ಮಾಣ ಮತ್ತು ದುರಸ್ಥಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ೨೦೨೩-೨೪ನೇ ಸಾಲಿನಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕೊಠಡಿ ನಿರ್ಮಾಣ ಮತ್ತು ದುರಸ್ಥಿಗೆ ಮೀಸಲಿಟ್ಟ ಅನುದಾನ ಎಷ್ಟು ; ಸದರಿ ಅನುದಾನದಲ್ಲಿ ಖರ್ಚಾದ ಅನುದಾನವೆಷ್ಟು ; ಉಳಿದ ಅನುದಾನ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಜಿಲ್ಲೆಗಳಲ್ಲಿ ದುರಸ್ಥಿಯಲ್ಲಿರುವ ಕೊಠಡಿಗಳನ್ನು ಗುರುತಿಸಲಾಗಿದೆಯೇ ; ಗುರುತಿಸದೇ ಇದ್ದಲ್ಲಿ, ಇಲ್ಲಿಯವರೆಗೆ ಯಾವ ಕಾರಣಕ್ಕಾಗಿ ಗುರುತಿಸಿರುವುದಿಲ್ಲ ? (ಸಂಪೂರ್ಣ ಮಾಹಿತಿ ನೀಡುವುದು)

## ಬೆಳಗಾವಿ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿನ ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಪಡಿತರ ಚೀಟಿ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೬೩ (೧೩೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿನ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಲ್ಲಿ ಎ.ಪಿ.ಎಲ್ ಮತ್ತು ಬಿ.ಪಿ.ಎಲ್.ನ ಹೊಸ ಪಡಿತರ ಚೀಟಿಗಳಾಗಲಿ, ತಿದ್ದುಪಡಿಗಳಾಗಲಿ ಅಥವಾ ವಿಳಾಸ ಬದಲಾವಣೆಯಾಗಲಿ ಮಾಡದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ಕ್ರಮಗಳೇನು ;

(ಆ) ರೋಗಿಗಳು ಆಸ್ಪತ್ರೆಗಳಿಗೆ ನೀಡಲು ಹಾಗೂ ಸಾರ್ವಜನಿಕರು ತಮ್ಮ ಸರ್ಕಾರಿ ಕೆಲಸ ಕಾರ್ಯಗಳಿಗಾಗಿ ಸಂಬಂಧಪಟ್ಟ ಆಹಾರ ಪಡಿತರ ಅಧಿಕಾರಿಗಳನ್ನು ಸಂಪರ್ಕಿಸಿದಾಗ ಸದರಿ ಅಧಿಕಾರಿಗಳು ಇಲಾಖೆಯ ವೆಬ್‌ಸೈಟ್ ಲಾಕ್ ಆಗಿದೆ ಎಂದು ಉತ್ತರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ಒದಗಿಸುವುದು)

(ಇ) ಲಾಕ್ ಆಗಿರುವ ವೆಬ್‌ಸೈಟ್‌ನ ಲಾಕ್‌ನ್ನು ತೆರವುಗೊಳಿಸಿ ಸಾರ್ವಜನಿಕರಿಗೆ ಪಡಿತರ ಚೀಟಿ ವಿತರಿಸಲು ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು ?

## ರಾಜ್ಯದಲ್ಲಿ ಪಡಿತರ ಕಾರ್ಡ್‌ಗಳ ಬಗ್ಗೆ ಮಾಹಿತಿ ನೀಡುವ ಕುರಿತು

**ಶ್ರೀ ಪಿ. ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೪ (೧೨೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಾದ್ಯಂತ ಅರ್ಹ ಬಡವರಿಂದ ಹೊಸ ರೇಶನ್ ಕಾರ್ಡ್‌ಗಾಗಿ ಸಲ್ಲಿಸಲಾದ ಹಾಗೂ ಕಳೆದ ಹಲವಾರು ವರ್ಷಗಳಿಂದ ಇಲಾಖೆಯಲ್ಲಿ ಬಾಕಿ ಉಳಿದ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿ ಉಳಿಯಲು ಕಾರಣಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸರ್ಕಾರದ ಅರ್ಹ ಕುಟುಂಬಕ್ಕೆ ೧೦ ಕೆ.ಜಿ. ಅಕ್ಕಿ ನೀಡುವ ಗ್ಯಾರಂಟಿಯೊಂದರ ಭರವಸೆಯಂತೆ ಕೇಂದ್ರ ಸರ್ಕಾರ ೫ ಕೆ.ಜಿ ಅಕ್ಕಿ ನೀಡುತ್ತಿರುವುದು ಸರಿಯಷ್ಟೆ ; ಇನ್ನುಳಿದ ೫ ಕೆ.ಜಿ ಅಕ್ಕಿಯ ಬದಲಾಗಿ ಬಡ ಕುಟುಂಬಗಳಿಗೆ ಕಳೆದ ೩ ತಿಂಗಳಿಂದ ಹಣ ಬಂದಿಲ್ಲದಿರುವುದು ನಿಜವೇ ; ಹಾಗಾದರೆ, ಆ ಹಣ ನೀಡುವುದು ಯಾವಾಗ ;

(ಇ) ಸರ್ಕಾರದ ಇತ್ತೀಚಿನ ನಿರ್ದೇಶನದಂತೆ ಆದಾಯ ತೆರಿಗೆ ಇಲಾಖೆಗೆ ಅರ್ಜಿ ಸಲ್ಲಿಸಿದ ಕಾರಣಕ್ಕಾಗಿ ಅನೇಕ ಅರ್ಹ ಫಲಾನುಭವಿಗಳನ್ನು ಬಿಪಿಎಲ್ ದಿಂದ ಎಪಿಎಲ್‌ಗೆ ಪರಿವರ್ತಿಸಲಾಗಿದೆಯೇ ; ಈ ಕುರಿತಂತೆ ಅನೇಕ ರೀತಿಯ ಲೋಪಗಳಾಗಿ ಅರ್ಹರಾದ ಬಿಪಿಎಲ್ ಫಲಾನುಭವಿಗಳಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸರ್ಕಾರ ಕೈಗೊಳ್ಳಬೇಕೆಂದಿರುವ ಪರಿಹಾರಗಳೇನು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಟ್ರಾಮ (Trauma) ಸೆಂಟರ್ ಸ್ಥಾಪನೆಯ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೫ (೧೨೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ಜಿಲ್ಲಾ ಆಸ್ಪತ್ರೆಯಲ್ಲಿ ಬಡರೋಗಿಗಳ ರೋಗ ಪತ್ತೆಗಾಗಿ ಕೇವಲ ಸಿಟಿಸ್ಕ್ಯಾನ್ ಯಂತ್ರ ಮಾತ್ರವೇ ಲಭ್ಯವಿದ್ದು, ರೋಗದ ಸ್ಪಷ್ಟ ಮತ್ತು ಖಚಿತ ಮಾಹಿತಿ ತಿಳಿಯಲು M.R.I ಯಂತ್ರದ ಲಭ್ಯತೆ ಇಲ್ಲದ ಕಾರಣಕ್ಕಾಗಿ ಬಡರೋಗಿಗಳನ್ನು ದೂರದ ವಿಜಯಪುರ, ಹುಬ್ಬಳ್ಳಿ, ಬೆಳಗಾವಿ ನಗರಗಳಿಗೆ ಸೂಚಿಸುವ ಅನಿವಾರ್ಯತೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, M.R.I ಯಂತ್ರಗಳನ್ನು ಯಾವಾಗ ಒದಗಿಸಲಾಗುವುದು ;

(ಆ) ಬಾಗಲಕೋಟೆ ಜಿಲ್ಲಾ ಕೇಂದ್ರವಿದ್ದು, ಕೇಂದ್ರ ಸರ್ಕಾರದ ಅನುದಾನದಿಂದ ಕ್ರಿಟಿಕಲ್ ಕೇರ್ ಸೆಂಟರ್ ಮಾತ್ರ ಆಸ್ಪತ್ರೆಯಲ್ಲಿ ಇದ್ದು, ಸುತ್ತಲು ರಾಷ್ಟ್ರೀಯ ಹೆದ್ದಾರಿ ಹಾದು ಹೋಗುವುದರಿಂದ ಅಪಘಾತಗಳು ಹೆಚ್ಚಾಗಿ ಗಾಯಾಳುಗಳಿಗಾಗಿ ಟ್ರಾಮ ಸೆಂಟರ್‌ನ ಅವಶ್ಯಕತೆಯಿರುವುದು ಸರ್ಕಾರ ಗಮನಿಸಿದೆಯೇ ; ಹಾಗಿದ್ದಲ್ಲಿ, ಯಾವಾಗ ಟ್ರಾಮ (Trauma) ಸೆಂಟರ್ ಸ್ಥಾಪನೆ ಮಾಡಲಾಗುವುದು ?

## ಜಿಪಿಟಿ ಆಂಗ್ಲ ಭಾಷಾ ಶಿಕ್ಷಕರ ವರ್ಗಾವಣೆ ಸಮಸ್ಯೆಗಳ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೬ (೬೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಿಟಿಆರ್ ೨೦೨೨ರ ನಿಯಮಾವಳಿಗಳಂತೆ ರಾಜ್ಯಾದ್ಯಂತ ಜಿಲ್ಲಾವಾರು ಸೃಜನೆಯಾಗಿರುವ ಆಂಗ್ಲ ಭಾಷಾ ಪದವೀಧರ ಪ್ರಾಥಮಿಕ ಶಿಕ್ಷಕರ (೬-೮) ರ ಸಂಖ್ಯೆ ಎಷ್ಟು ;

(ಆ) ೨೦೧೬ ರಿಂದ ೨೦೨೩ರವರೆಗೆ ನಾಲ್ಕು ಭಾರಿ ಜಿಲ್ಲಾವಾರು ನೇಮಕಾರಿ ಹೊಂದಿ, ಕರ್ತವ್ಯ ನಿರ್ವಹಿಸುತ್ತಿರುವ ಆಂಗ್ಲ ಭಾಷಾ ಪದವೀಧರ ಪ್ರಾಥಮಿಕ ಶಿಕ್ಷಕರ (೬-೮) ರ ಒಟ್ಟು ಸಂಖ್ಯೆ ಎಷ್ಟು ;

(ಇ) ೨೦೨೩-೨೪ನೇ ಸಾಲಿನಲ್ಲಿ ಶಿಕ್ಷಕರ ಸಾರ್ವತ್ರಿಕ ವರ್ಗಾವಣೆಯಲ್ಲಿ ವರ್ಗಾವಣೆ ಬಯಸಿ ಅರ್ಜಿ ಸಲ್ಲಿಸಿದ ಆಂಗ್ಲ ಭಾಷಾ ಪದವೀಧರ ಪ್ರಾಥಮಿಕ ಶಿಕ್ಷಕರ (೬-೮) ರ ಒಟ್ಟು ಸಂಖ್ಯೆ ಎಷ್ಟು ; ಅವರುಗಳಲ್ಲಿ ಸ್ಥಳ ನಿಯುಕ್ತಿಗೊಂಡ ಜಿಲ್ಲಾವಾರು ಶಿಕ್ಷಕರ ಸಂಖ್ಯೆ ಎಷ್ಟು ; ವರ್ಗಾವಣೆ ಬಯಸಿದ್ದರೂ ವರ್ಗಾವಣೆ ಸಿಗದಿರಲು ಕಾರಣಗಳೇನು ;

(ಈ) ಆಂಗ್ಲ ಭಾಷಾ ಪದವೀಧರರ ಪ್ರಾಥಮಿಕ ಶಿಕ್ಷಕರ (೬-೮) ರ ವರ್ಗಾವಣೆ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ವರ್ಗಾವಣೆ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಇದುವರೆಗೆ ತೆಗೆದುಕೊಂಡಿರುವ ಕ್ರಮಗಳೇನು ?

## ಬೆಳ್ತಂಗಡಿ ತಾಲ್ಲೂಕು ಶಿಕ್ಷಣ ಇಲಾಖೆ ಕಛೇರಿಗೆ ಸುಸಜ್ಜಿತ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೭ (೬೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು ಶಿಕ್ಷಣ ಇಲಾಖೆ ಕಛೇರಿಯು ಕಟ್ಟಡ ಶಿಥಿಲವಾಗಿದ್ದು, ಮಳೆಗಾಲದಲ್ಲಿ ಸೋರುತ್ತಿರುವುದರಿಂದ ಕಛೇರಿಯ ನಿರ್ವಹಣೆ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಕಛೇರಿಯ ಕಟ್ಟಡದ ದುರಸ್ಥಿ ಮಾಡುವುದು ಹಾಗ ಸುಸಜ್ಜಿತ ಹೊಸ ಕಟ್ಟಡ ನಿರ್ಮಾಣಕ್ಕೆ ಈಗಾಗಲೇ ಕ್ರಮ ವಹಿಸಲಾಗಿದೆಯೇ ; (ವಿವರ ನೀಡುವುದು)

(ಇ) ಬೆಳ್ತಂಗಡಿ ತಾಲ್ಲೂಕಿನಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಹಾಗೂ ವ್ಯವಸ್ಥಿತವಾಗಿ ನಡೆಸಲು ಅನುವಾಗುವಂತೆ ಯಾವ ಕಾಲಮಿತಿಯೊಳಗೆ ಸುಸಜ್ಜಿತ ಕಟ್ಟಡ ನಿರ್ಮಾಣವು ಸೇರಿದಂತೆ ಸದರಿ ಕಛೇರಿಗೆ ಬೇಕಾಗಿರುವ ಇತರೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುವುದು ?

## ಅನುದಾನರಹಿತ ಕನ್ನಡ ಮಾಧ್ಯಮ ಶಾಲೆಗಳಿಗೆ ನೆರವು ನೀಡುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೮ (೭೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಅನುದಾನರಹಿತ ಕನ್ನಡ ಮಾಧ್ಯಮ ಶಾಲೆಗಳ ಸಂಖ್ಯೆ ಎಷ್ಟು ; ಸದರಿ ಶಾಲೆಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳ ಒಟ್ಟು ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಅನುದಾನರಹಿತ ಕನ್ನಡ ಮಾಧ್ಯಮ ಶಾಲೆಗಳು ಸರ್ಕಾರದ ಬೆಂಬಲದ ಕೊರತೆಯಿಂದಾಗಿ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ ಶಾಲೆಗಳ ವರ್ಗೀಕರಣ, ಉಚಿತ ಪಠ್ಯಪುಸ್ತಕ ಸರಬರಾಜು, ಮಧ್ಯಾಹ್ನದ ಪೌಷ್ಟಿಕಾಂಶಯುಕ್ತ ಬಿಸಿಯೂಟ ಪೂರೈಕೆ, ಶಿಕ್ಷಕರಿಗೆ ತರಬೇತಿ, ಕಟ್ಟಡ ತೆರಿಗೆ–ವಿದ್ಯುತ್ ದರದಲ್ಲಿ ವಿನಾಯಿತಿ ಮಾನ್ಯತೆ ನವೀಕರಣ–ನಿಯಮಗಳ ಸರಳೀಕರಣ, ಶಿಕ್ಷಕರ ಮತ್ತು ವಿದ್ಯಾರ್ಥಿಗಳ ಕಲ್ಯಾಣ ನಿಧಿ ಸ್ಥಾಪನೆ, ಉಚಿತ ಸಮವಸ್ತ್ರ ನೀಡುವುದು ಸೇರಿದಂತೆ ಸದರಿ ಶಾಲೆಗಳ ಬೇಡಿಕೆ ಮತ್ತು ಸಮಸ್ಯೆಗಳ ಕುರಿತು ಸರ್ಕಾರ ಇದುವರೆಗೆ ಏನು ಕ್ರಮ ವಹಿಸಿದೆ ;

(ಈ) ಗ್ರಾಮೀಣ ಭಾಗದಲ್ಲಿಯೇ ಬಹುತೇಕವಾಗಿ ಕೇಂದ್ರೀಕೃತಗೊಂಡು ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಹಿಂದುಳಿದಿರುವ ಬಡ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುತ್ತಿರುವ ಈ ಶಾಲೆಗಳ ಸಬಲೀಕರಣಕ್ಕೆ ಸೂಕ್ತ ಯೋಜನೆ ಹಾಗೂ ಪೂರಕ ಕಾರ್ಯಕ್ರಮಗಳನ್ನು ರೂಪಿಸಿ ಯಾವ ಕಾಲಮಿತಿಯೊಳಗೆ ಅನುಷ್ಠಾನಕ್ಕೆ ತರಲಾಗುವುದು ?

## ಬೆಳ್ತಂಗಡಿ ತಾಲ್ಲೂಕು ಶಿಕ್ಷಣ ಇಲಾಖೆ ಕಛೇರಿಯಲ್ಲಿ ಬಹುತೇಕ ಹುದ್ದೆಗಳು ಖಾಲಿ ಇರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೯ (೭೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು ಶಿಕ್ಷಣ ಇಲಾಖೆ ಕಛೇರಿಗೆ ಮಂಜೂರಾಗಿರುವ ಅಧಿಕಾರಿಗಳು/ ಸಿಬ್ಬಂದಿಗಳ

ಬಹುತೇಕ ಹುದ್ದೆಗಳು ಖಾಲಿ ಇದ್ದು ಅಧೀನ ಶಾಲೆಗಳ ಸಿಬ್ಬಂದಿಗಳನ್ನು ತಾತ್ಕಾಲಿಕವಾಗಿ ನಿಯೋಜನೆ ಮಾಡಿಕೊಂಡು ಕೆಲಸ ನಿರ್ವಹಣೆ ಮಾಡಬೇಕಾದ ಅನಿವಾರ್ಯತೆ ಸೃಷ್ಟಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಕಛೇರಿಗೆ ಮಂಜೂರಾಗಿರುವ ಹಾಲಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಬೆಳ್ತಂಗಡಿ ಭೌಗೋಳಿಕವಾಗಿ ಜಿಲ್ಲೆಯ ಅತಿ ದೊಡ್ಡ ತಾಲ್ಲೂಕು ಆಗಿದ್ದು ಶೈಕ್ಷಣಿಕ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ನಡೆಸಲು ಅತ್ಯಗತ್ಯವಾಗಿ ಬೇಕಾಗಿರುವ ಸಿಬ್ಬಂದಿಯ ಕೊರತೆ ಬಹಳ ಇರುವುದರಿಂದ ಹಾಲಿ ಖಾಲಿ ಇರುವ ಹುದ್ದೆಗಳಿಗೆ ಕೂಡಲೇ ಪೂರ್ಣಕಾಲಿಕ ಅಧಿಕಾರಿಗಳು/ ಸಿಬ್ಬಂದಿಗಳನ್ನು ನಿಯುಕ್ತಿಗೊಳಿಸಲು ಸರ್ಕಾರ ಕೂಡಲೇ ಕ್ರಮ ವಹಿಸುವುದೇ ?

## ಕೆ.ಎಸ್.ಒ.ಯು ಪಠ್ಯ ಪುಸ್ತಕ ಒದಗಿಸದಿರುವ ಬಗ್ಗೆ

**ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ (ಶಿಕ್ಷಕರ ಕ್ಷೇತ್ರ) :-**

೨೦ (೮೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ವತಿಯಿಂದ ದೂರ ಶಿಕ್ಷಣ ವ್ಯವಸ್ಥೆಯಲ್ಲಿ ಸ್ನಾತಕ/ಸ್ನಾತಕೋತ್ತರ ವಿದ್ಯಾರ್ಥಿಗಳಿಂದ ಪ್ರವೇಶಾತಿ ಸಮಯದಲ್ಲಿ ಪಠ್ಯ ಪುಸ್ತಕಗಳಿಗಾಗಿ ಸಾವಿರಾರೂ ರೂಪಾಯಿಗಳು ಶುಲ್ಕ ಪಡೆದರೂ, ಇಲ್ಲಿಯವರೆಗೆ ಪಠ್ಯ ಪುಸ್ತಕಗಳನ್ನು ಒದಗಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕಾರಣರಾದವರ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಆ) ಸಕಾಲದಲ್ಲಿ ಪಠ್ಯ ಪುಸ್ತಕಗಳನ್ನು ಒದಗಿಸದಿರುವುದರಿಂದ ಲಭ್ಯ ಸಾಫ್ಟ್ ಕಾಪಿಯನ್ನು ಜೆರಾಕ್ಸ್ ಮಾಡಿಸಿಕೊಳ್ಳವುದು ಬಡ ವಿದ್ಯಾರ್ಥಿಗಳಿಗೆ ಆರ್ಥಿಕವಾಗಿ ಹೊರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ ಜೆರಾಕ್ಸ್ ತಗಲುವ ವೆಚ್ಚವನ್ನು ಸರ್ಕಾರವು ಭರಿಸಲಿದೆಯೇ ; ಸದರಿ ವಿಶ್ವವಿದ್ಯಾಲಯದ ಈ ಬೇಜವಾಬ್ದಾರಿ ನಡೆಗೆ ಕಾರಣರಾದವರ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣವಾಗಿ ವಿವರಿಸುವುದು)

## ಬೆಂಗಳೂರು ವಿ.ವಿ. ಪದವಿ ಪ್ರಮಾಣ ಪತ್ರ ನೀಡದಿರುವ ಕುರಿತು

**ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ (ಶಿಕ್ಷಕರ ಕ್ಷೇತ್ರ) :-**

೭೧ (೬೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ವಿಶ್ವವಿದ್ಯಾಲಯದ ದೂರ ಶಿಕ್ಷಣ ನಿರ್ದೇಶನಾಯಲದ ವತಿಯಿಂದ ಪದವಿ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳನ್ನು ನಡೆಸಲಾಗುತ್ತಿದ್ದಲ್ಲಿ ಪದವಿ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳ ಶೈಕ್ಷಣಿ ಕಾಲಾವಧಿಯೆಷ್ಟು ;

(ಆ) ಮೂರು ವರ್ಷದ ಪದವಿ ಕೋರ್ಸ್‌ಗೆ ಐದು ವರ್ಷಗಳ ಕಾಲಾವಧಿ ತೆಗೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಬಂದಿದ್ದಲ್ಲಿ, ಇದಕ್ಕೆ ಕಾರಣಾರಾದವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಡಿಸೆಂಬರ್–೨೦೨೩ರಲ್ಲಿ ಜರುಗಿದ ಪದವಿ ಕೋರ್ಸ್ ಉತ್ತೀರ್ಣರಾದವರಿಗೆ ಇದುವರೆಗೂ ಪದವಿ ಪ್ರಮಾಣ ಪತ್ರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಮಿನಿ ಘಟಿಕೋತ್ಸವವನ್ನು ಯಾವಾಗ ನಡೆಸಲಾಗುವುದು ;

(ಈ) ದೂರ ಶಿಕ್ಷಣ ಪದವೀಧರರಿಗೆ ಘಟಿಕೋತ್ಸವ/ಮಿನಿ ಘಟಿಕೋತ್ಸವ ನೆಪವೊಡ್ಡಿ ಫಲಿತಾಂಶ ಬಂದು ೧೦ ತಿಂಗಳಾದರೂ ಪದವಿ ಪ್ರಮಾಣ ಪತ್ರ ನೀಡದೇ ರೆಗ್ಯುಲರ್/ದೂರ ಶಿಕ್ಷಣಾರ್ಥಿಗಳೆಂದು ತಾರತಮ್ಯ ಮಾಡುತ್ತಿರುವವರ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; ದೂರ ಶಿಕ್ಷಣ ನಿರ್ದೇಶನಾಲಯವನ್ನು ಮುಚ್ಚುವ ಪ್ರಸ್ತಾವನೆ ಏನಾದರೂ ಸರ್ಕಾರದ ಮುಂದಿದೆಯೆ ? (ಸಂಪೂರ್ಣವಾಗಿ ವಿವರ ನೀಡುವುದು)

## ಹೆಚ್.ಎಂ.ಟಿ. ಕಾರ್ಖಾನೆಗೆ ನೀಡಿರುವ ಭೂಮಿಯ ಬಗ್ಗೆ

**ಶ್ರೀ ಸಿ. ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೨ (೨೯) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರುನಲ್ಲಿರುವ ಹೆಚ್‌ಎಂಟಿ ಕಾರ್ಖಾನೆಗೆ ರಾಜ್ಯ ಸರ್ಕಾರ ಹಂಚಿಕೆ ಮಾಡಿರುವ ಭೂಮಿ ಎಷ್ಟು ; ಈ ಭೂಮಿ ಹಂಚಿಕೆ ಮಾಡಿದ್ದು ಯಾವಾಗ ; ಭೂಮಿ ಹಂಚಿಕೆ ಸಂದರ್ಭದಲ್ಲಿ ಆಗಿರುವ ಒಡಂಬಡಿಕೆಗಳೇನು ; (ಒಡಂಬಡಿಕೆಯ ಪ್ರತಿ ಒದಗಿಸುವುದು)

(ಆ) ಹೆಚ್‌ಎಂಟಿ ಕಾರ್ಖಾನೆಗೆ ನೀಡಿರುವ ಭೂಮಿಯನ್ನು ವಾಪಸ್ ನೀಡುವಂತೆ ಸೂಚನೆ ನೀಡಲು ಕಾರಣಗಳೇನು ; ಈ ಜಾಗಕ್ಕೆ ಸಂಬಂಧಪಟ್ಟಂತೆ ನ್ಯಾಯಾಲಯಗಳಲ್ಲಿ ರಾಜ್ಯ ಸರ್ಕಾರ ಹಾಕಿರುವ ಅಫಿಡವಿಟ್/ಮಧ್ಯಂತರ ಅರ್ಜಿಗಳಲ್ಲಿನ ಅಂಶಗಳೇನು ; ಸುಪ್ರೀಂಕೋರ್ಟ್‌ಗೆ ಸರ್ಕಾರ ಹೊಸದಾಗಿ ಪ್ರಮಾಣಪತ್ರ ಸಲ್ಲಿಸಿದೆಯೇ ;

(ಇ) ಹೆಚ್‌ಎಂಟಿ ಅಧೀನದಲ್ಲಿರುವ ಭೂಮಿಯನ್ನು ಮಾರಾಟ ಮಾಡಲು ಈ ಹಿಂದೆ ರಾಜ್ಯ ಸರ್ಕಾರವೇ ಅನುಮತಿ ನೀಡಿರುವುದು ಸರ್ಕಾರದ ಗಮನದಲ್ಲಿದೆಯೇ ; ಹಾಗಿದ್ದಲ್ಲಿ, ಅನುಮತಿ ನೀಡುವಾಗ ವಿಧಿಸಿದ್ದ ಷರತ್ತುಗಳೇನು ;

(ಈ) ಹೆಚ್‌ಎಂಟಿ ಹೊರತುಪಡಿಸಿ ಸದರಿ ಅರಣ್ಯ ಪ್ರದೇಶದಲ್ಲಿ ಎಷ್ಟು ಪ್ರದೇಶವನ್ನು ಯಾವ ಉದ್ದೇಶಕ್ಕೆ ಯಾರಿಗೆ ಹಂಚಿಕೆ ಮಾಡಲಾಗಿದೆ ? (ಸಮಗ್ರ ವಿವರ ಒದಗಿಸುವುದು)

## ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಹಾಗೂ ಸಿಬ್ಬಂದಿಗಳ ಕೊರತೆ ಬಗ್ಗೆ

**ಶ್ರೀ ಸಿ. ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩ (೩೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಆಸ್ಪತ್ರೆಗಳೆಷ್ಟು ; ಈ ಆಸ್ಪತ್ರೆಗಳಿಗೆ ತಜ್ಞ ವೈದ್ಯರು, ಆರೋಗ್ಯ ನಿರೀಕ್ಷಣಾಧಿಕಾರಿಗಳು ಸೇರಿದಂತೆ ಮಂಜೂರಾಗಿರುವ ಒಟ್ಟು ಹುದ್ದೆಗಳೆಷ್ಟು ; (ಹುದ್ದೆವಾರು ವಿವರಗಳನ್ನು ಜಿಲ್ಲಾವಾರು ಒದಗಿಸುವುದು)

(ಆ) ಕಳೆದ ೦೨ ವರ್ಷಗಳಿಂದ ಯಾವ ಹಂತದ ಎಷ್ಟು ಹುದ್ದೆಗಳನು ಭರ್ತಿ ಮಾಡಲಾಗಿದೆ ; (ಹುದ್ದೆವಾರು ವಿವರ ನೀಡುವುದು)

(ಇ) ಖಾಲಿ ಹುದ್ದೆಗಳ ಪರಿಣಾಮ ರೋಗಿಗಳಿಗೆ ತೊಂದರೆಯಾಗುತ್ತಿರುವುದನ್ನು ಸರ್ಕಾರ ಮನಗಂಡಿದೆಯೇ ; ರೋಗಿಗಳಿಗೆ ತೊಂದರೆಯಾಗಿರುವ ಕುರಿತು ಎಷ್ಟು ಪ್ರಕರಣಗಳು ವರದಿಯಾಗಿದೆ ; (ವಿವರ ನೀಡುವುದು)

(ಈ) ತಜ್ಞ ವೈದ್ಯರು, ಆರೋಗ್ಯ ನಿರೀಕ್ಷಣಾಧಿರಗಳು ಸೇರಿದಂತೆ ಮಂಜೂರಾಗಿರುವ ಎಲ್ಲಾ ಹಂತದ ಹುದ್ದೆಗಳ ಭರ್ತಿಗೆ ಸರ್ಕಾರ ಯಾವ ಕ್ರಮಕೈಗೊಂಡಿದೆ ; ಈ ನೇಮಕ ಪ್ರಕ್ರಿಯೆ ಆರಂಭಗೊಂಡಿದೆಯೇ ? (ವಿವರ ನೀಡುವುದು)

## ಆಯುಷ್ಮಾನ್ ಭಾರತ್ ಯೋಜನೆಯಡಿ ಚಿಕಿತ್ಸೆ ಪಡೆದ ರೋಗಿಗಳ ಬಗ್ಗೆ

**ಶ್ರೀ ಸಿ. ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೪ (೩೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿ ಇಲ್ಲಿಯವರೆಗೆ ಎಷ್ಟು ಜನ ಚಿಕಿತ್ಸೆ ಪಡೆದಿದ್ದಾರೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿ ಚಿಕಿತ್ಸೆ ಪಡೆದ ರೋಗಿಗಳು ತಮ್ಮ ಚಿಕಿತ್ಸೆಗಾಗಿ ಎಷ್ಟು ವೆಚ್ಚ ಭರಿಸಲಾಗಿದೆ ಎನ್ನುವ ಮಾಹಿತಿ ಚಿಕಿತ್ಸೆ ಪಡೆದುಕೊಂಡ ರೋಗಿಗಳಿಗೆ ದೊರಕದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಯೋಜನೆಯಡಿ ಚಿಕಿತ್ಸೆ ಪಡೆದ ರೋಗಿಗಳಿಗೆ ಎಷ್ಟು ಆರ್ಥಿಕ ಸೌಲಭ್ಯ ಒದಗಿಸಲಾಗಿದೆ ಎಂಬ ಮಾಹಿತಿಯನ್ನು ನೀಡಲು ಸರ್ಕಾರ ಏನು ಕ್ರಮಕೈಗೊಂಡಿದೆ ?

## ವಿದ್ಯುತ್ ಸರಬರಾಜು ಕಂಪನಿಗಳಿಗೆ ಪಾವತಿಸಲು ಬಾಕಿ ಇರುವ ಮೊತ್ತದ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೫ (೩೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಗ್ರಾಮ ಪಂಚಾಯಿತಿಗಳಿಂದ ವಿದ್ಯುತ್ ಸರಬರಾಜು ಕಂಪನಿಗಳಿಗೆ ಪಾವತಿಸಲು ಬಾಕಿ ಇರುವ ಕುಡಿಯುವ ನೀರು ಹಾಗೂ ಬೀದಿ ದೀಪಗಳ ವಿದ್ಯುತ್ ಬಿಲ್ಲಿನ ಮೊತ್ತವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೦೩ ವರ್ಷಗಳಲ್ಲಿ ಈ ರೀತಿ ಗ್ರಾಮ ಪಂಚಾಯಿತಿಗಳಿಂದ ಬಾಕಿ ಇರುವ ವಿದ್ಯುತ್ ಬಿಲ್ಲನ್ನು ಸರ್ಕಾರದಿಂದ ನೇರವಾಗಿ ವಿದ್ಯುತ್ ಸರಬರಾಜು ಕಂಪನಿಗಳಿಗೆ ಪಾವತಿ ಮಾಡಲಾಗಿದೆಯೇ ; ಪಾವತಿ ಮಾಡಿದ್ದಲ್ಲಿ ವಿವರ ಒದಗಿಸುವುದು ;

(ಇ) ಶಾಸನ ಬದ್ಧ ಅನುದಾನವನ್ನು ಹೊರತುಪಡಿಸಿ ಎಷ್ಟು ಅನುದಾನ ಪಾವತಿ ಮಾಡಲಾಗಿದೆ ; (ವಿವರ ಒದಗಿಸುವುದು)

(ಈ) ಶಾಸನ ಬದ್ಧ ಅನುದಾನದಲ್ಲಿ ಪಾವತಿಸಿರುವುದನ್ನು ಹೊರತುಪಡಿಸಿ ಚಿಕ್ಕಮಗಳೂರು ಜಿಲ್ಲೆಯ ಯಾವ ಯಾವ ಗ್ರಾಮ ಪಂಚಾಯಿತಿಗಳ ಎಷ್ಟು ಬಾಕಿ ಬಿಲ್ಲನ್ನು ಮೆಸ್ಕಾಂಗೆ ಪಾವತಿಸಲಾಗಿದೆ ? (ಗ್ರಾಮ ಪಂಚಾಯಿತಿವಾರು ವಿವರ ಒದಗಿಸುವುದು)

## ಕೈಗಾರಿಕಾ ತ್ಯಾಜ್ಯಗಳು ನೇರವಾಗಿ ನದಿಗಳಿಗೆ ಸೇರುತ್ತಿರುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೬ (೨೧) ಮಾನ್ಯ ಅರಣ್ಯ, ಜೀವಿ ಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಗರ ಮತ್ತು ಪಟ್ಟಣ ಪ್ರದೇಶಗಳ ಒಳಚರಂಡಿ ನೀರು ಮತ್ತು ಕೈಗಾರಿಕೆಗಳ ತ್ಯಾಜ್ಯಗಳು ನೇರವಾಗಿ ನದಿಗಳಿಗೆ ಸೇರುತ್ತಿರುವುದರಿಂದ ರಾಜ್ಯದ ಹಲವಾರು ನದಿಗಳು ಮಲೀನಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದ ಎಷ್ಟು ನದಿಗಳು ಮಲೀನಗೊಂಡಿವೆ; ಅವು ಯಾವುವು ; ನಗರ ಮತ್ತು ಪಟ್ಟಣ ಪ್ರದೇಶಗಳ ಒಳಚರಂಡಿ ನೀರು ಮತ್ತು ಕೈಗಾರಿಕೆಗಳ ತ್ಯಾಜ್ಯಗಳು ನೇರವಾಗಿ ನದಿಗಳಿಗೆ ಸೇರುತ್ತಿರುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## "ಜನ ಪೋಷಣ ಕೇಂದ್ರ" ಗಳ ಅನುಷ್ಠಾನದ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೭ (೨೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ಕೇಂದ್ರ ಸರ್ಕಾರ ಪ್ರಯೋಜಿತ "ಜನ ಪೋಷಣ ಕೇಂದ್ರ" ಗಳನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗಿದೆಯೇ ; ಅನುಷ್ಠಾನಗೊಳಿಸಿದ್ದಲ್ಲಿ, ರಾಜ್ಯದ ಎಷ್ಟು ಪಡಿತರ ಅಂಗಡಿಗಳನ್ನು ಈ ಯೋಜನೆಯ ವ್ಯಾಪ್ತಿಗೆ ತರಲಾಗಿದೆ ; ಈ ಯೋಜನೆಯಡಿ ವಿತರಿಸುತ್ತಿರುವ ಪೌಷ್ಠಿಕ ಆಹಾರ ಪದಾರ್ಥಗಳು ಯಾವುವು ? (ಸಂಪೂರ್ಣ ವಿವರ ನೀಡುವುದು)

## ಆಹಾರ ತಯಾರಕರು ಹಾನಿಕಾರಕ ಬಣ್ಣಗಳು ಮತ್ತು ರಾಸಾಯನಿಕಗಳನ್ನು ಬಳಸುತ್ತಿರುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೮ (೩೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಹಾರ ಪದಾರ್ಥಗಳು ಆಕರ್ಷಕವಾಗಿ ಕಾಣಲು ಮತ್ತು ರುಚಿಕರವಾಗಿರಲು ಆಹಾರ ತಯಾರಕರು ಹಾನಿಕಾರಕ ಬಣ್ಣಗಳು ಮತ್ತು ರಾಸಾಯನಿಕಗಳನ್ನು ಅತಿ ಹೆಚ್ಚು ಬಳಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ರೀತಿಯ ಹಾನಿಕಾರಕ ಬಣ್ಣಗಳು ಮತ್ತು ರಾಸಾಯನಿಕಗಳನ್ನು ಆಹಾರ ತಯಾರಕರು ಬಳಸದಂತೆ ನಿಷೇದವಿದ್ದರೂ ಇವುಗಳನ್ನು ಬಳಸಿ ಆಹಾರ ತಯಾರಿಸಿ ಸಾವರ್ಜನಿಕರಿಗೆ ಮಾರಾಟ ಮಾಡುತ್ತಿರುವವರ ವಿರುದ್ಧ ಕ್ರಮಕೈಗೊಳ್ಳಲು ಸರ್ಕಾರ ಕೈಗೊಂಡಿರುವ ಪರಿಣಾಮಕಾರಿ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ರೀತಿಯ ಹಾನಿಕಾರಕ ಬಣ್ಣಗಳು ಮತ್ತು ರಾಸಾಯನಿಕಗಳನ್ನು ಆಹಾರ ತಯಾರಕರು ಬಳಸದಂತೆ ನಿಗಾವಹಿಸಬೇಕಾದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಮಧುಗಿರಿ ಸಾರ್ವಜನಿಕ ಆಸ್ಪತ್ರೆಯ ವೈದ್ಯರ ಕೊರತೆಯ ಬಗ್ಗೆ

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯ (೬೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಧುಗಿರಿ ನಗರದ ಸಾರ್ವಜನಿಕ ಆಸ್ಪತ್ರೆ ಹಾಗೂ ತಾಲ್ಲೂಕು ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರುಗಳ ಸಂಖ್ಯೆ ಎಷ್ಟು ; ಸರ್ಕಾರದಿಂದ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಮಧುಗಿರಿ ನಗರದ ಸಾರ್ವಜನಿಕ ಆಸ್ಪತ್ರೆ ಹಾಗೂ ತಾಲ್ಲೂಕು ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆಯಿಂದ ಸಾರ್ವಜನಿಕರಿಗೆ ಬಹಳ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಖಾಲಿ ಇರುವ ವೈದ್ಯರನ್ನು ನೇಮಕ ಮಾಡಲು ಸರ್ಕಾರ ಯಾವ ಕ್ರಮಕೈಗೊಂಡಿದೆ ?

## ತುಮಕೂರಿನಲ್ಲಿ ಸರ್ಕಾರಿ ಪ್ಯಾರಾ ಮೆಡಿಕಲ್‌ಗೆ ಪ್ರತ್ಯೇಕ ಕಟ್ಟಡ ಹಾಗೂ ಕೋರ್ಸ್‌ಗಳ ಮಂಜೂರಾತಿ ಬಗ್ಗೆ

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦ (೬೧) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರಿನ ಸರ್ಕಾರಿ ಪ್ಯಾರಾ ಮೆಡಿಕಲ್ ಕಾಲೇಜಿನಲ್ಲಿ ಎಷ್ಟು ಕೋರ್ಸ್‌ಗಳಿಗೆ ಮಂಜೂರಾಗಿವೆ ; ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ಸದರಿ ಪ್ಯಾರಾ ಮೆಡಿಕಲ್ ಕಾಲೇಜಿಗೆ ಪ್ರತ್ಯೇಕವಾದ ಕಟ್ಟಡ/ ಕೊಠಡಿ ವ್ಯವಸ್ಥೆ ಮಂಜೂರಾಗಿದೆಯೇ ;

(ಇ) ಈ ಕಾಲೇಜಿಗೆ ಪ್ರತ್ಯೇಕವಾದ ಕಟ್ಟಡದ ಅಥವಾ ಕೊಠಡಿ ವ್ಯವಸ್ಥೆ ಇಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಹೊಸದಾಗಿ ಕಟ್ಟಡ/ ಕೊಠಡಿ ನಿರ್ಮಾಣ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ತುಮಕೂರು ಜಿಲ್ಲೆಯಲ್ಲಿ ಕ್ಯಾನ್ಸರ್ ಪ್ರಕರಣಗಳು ಹಾಗೂ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣದ ಕುರಿತು

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೧ (೬೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆಯಲ್ಲಿ ವಿವಿಧ ಬಗೆಯ ಕ್ಯಾನ್ಸರ್ ಪ್ರಕರಣಗಳಿಗೆ ಆಸ್ಪತ್ರೆಗಳಿಗೆ ದಾಖಲಾಗುತ್ತಿರುವ ಸಂಖ್ಯೆ ಎಷ್ಟು ; (ಕಳೆದ ೦೫ ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಜಿಲ್ಲಾ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣ ಮಾಡುವ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ ;

(ಇ) ಈ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣ ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

# ಕರಾವಳಿ ಜಿಲ್ಲೆಗಳಲ್ಲಿ ಉಂಟಾಗಿದ್ದ ಎಂಡೋಸಲ್ಫನ್ ವಿಷಕಾರಿ ಘಟನೆಯ ಬಗ್ಗೆ

**ಶ್ರೀ ವೈ. ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೨ (೦೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಉಂಟಾಗಿದ್ದ ಎಂಡೋಸಲ್ಫನ್ ವಿಷಕಾರಿ ಘಟನೆಯ ಪರಿಶೀಲನಾ ವರದಿಯ ಅನ್ವಯ ಘಟನೆಯ ಕಾರಣ/ ಪರಿಣಾಮಗಳು ಯಾವುವು ; ಕರಾವಳಿ ಜಿಲ್ಲೆಗಳಲ್ಲಿ ಇದರ ತೀವ್ರತೆಯಿಂದ ಪ್ರಸ್ತುತ ಬಳಲುತ್ತಿರುವವರ ಪ್ರಮಾಣ ಎಷ್ಟು : (ಜಿಲ್ಲಾವಾರು, ಲಿಂಗವಾರು ವಿವರ ಒದಗಿಸುವುದು)

(ಆ) ಎಂಡೋಸಲ್ಫನ್ ಪೀಡಿತ ಪ್ರದೇಶ/ಜಿಲ್ಲೆಗಳಲ್ಲಿ ಜನಿಸುತ್ತಿರುವ ಮಕ್ಕಳು ಇಂದಿಗೂ ಇದರ ಪರಿಣಾಮ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಗರ್ಭಿಣಿಯರಿಗೆ ಯಾವುದಾದರೂ ಔಷಧಗಳನ್ನು ನೀಡಲಾಗುತ್ತಿದೆಯೇ ; (ವಿವರ ನೀಡುವುದು)

(ಇ) ಯಾವುದೇ ಔಷಧಿ ಇಲ್ಲವಾದಲ್ಲಿ ಕೇಂದ್ರ ಸರ್ಕಾರಕ್ಕೆ ಔಷಧಿ ತಯಾರಿಸಲು ಸೂಕ್ತ ಶಿಫಾರಸ್ಸು ಮಾಡಲು ಕೈಗೊಂಡಿರುವ ಕ್ರಮಗಳಾವುವು ;

(ಈ) ಈ ಖಾಯಿಲೆಯಿಂದ ಪೀಡಿತ ಮಕ್ಕಳಿಗೆ ನೆರವಾಗಲು ಹಾಗೂ ಪಾಲಕರಿಲ್ಲದ ಮಕ್ಕಳನ್ನು ಪೋಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಕಿರುಜಲ ವಿದ್ಯುತ್ ಘಟಕಗಳನ್ನು ಖಾಸಗಿಯವರಿಗೆ ನೀಡಿರುವುದರಿಂದ ಸರ್ಕಾರಕ್ಕೆ ನಷ್ಟವಾಗಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೩ (೦೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ವಿದ್ಯುತ್ ಕಂಪನಿ ನಿಯಮಿತ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಿರುಜಲ ವಿದ್ಯುತ್ ಘಟಕಗಳಾವುವು ; (ಅವುಗಳ ಸಾಮರ್ಥ್ಯ, ನಡೆಸುತ್ತಿರುವವರ ವಿವರಗಳ ಮಾಹಿತಿಯನ್ನು ಒದಗಿಸುವುದು)

(ಆ) ಈ ಕಿರುಜಲ ವಿದ್ಯುತ್ ಘಟಕಗಳಿಗೆ ಪ್ರತಿ ಯೂನಿಟ್‌ಗೆ ನೀಡಲಾಗುತ್ತಿರುವ ದರ ಹಾಗೂ ಯಾವ ಆಧಾರದ ಮೇಲೆ ದರ ನಿಗಧಿ ಪಡಿಸಲಾಗಿದೆ ;

(ಇ) ಇಲಾಖೆಯ ನಿಗಮಗಳಿಂದ ನಿರ್ಮಾಣ ಮಾಡಿ ಖಾಸಗಿಯವರು ನಿರ್ವಹಣೆ ಮಾಡುತ್ತಿರುವ ಘಟಕಗಳಿಂದ ಸರ್ಕಾರಕ್ಕೆ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಈ ಖಾಸಗಿ ನಿರ್ವಹಣೆಗೆ ನೀಡಲಾಗಿರುವ ಕಿರುಜಲ ವಿದ್ಯುತ್ ಘಟಕಗಳ ನಿರ್ವಹಣೆ ದರವನ್ನು ಸರ್ಕಾರ ಮತ್ತೊಮ್ಮೆ ಪರಿಶೀಲಿಸಿ ಸರಿಯಾದ ದರವನ್ನು ನೀಡಲು ಅಥವಾ ಖಾಸಗಿಯುವರಿಂದ ವಾಪಸ್ ಪಡೆಯುಲು ಸರ್ಕಾರದ ನಿರ್ಧಾರಗಳೇನು ?

## ಕೊಪ್ಪಳ ಜಿಲ್ಲೆಯಲ್ಲಿ ಕಾಲುವೆ ಆಧಾರಿತ ಮಲ್ಲಾಪುರ ಜಲ ವಿದ್ಯುತ್ ಯೋಜನೆ ಕುರಿತು

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೪ (೧೩೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಕಾಲುವೆ ಆಧಾರಿತ ಮಲ್ಲಾಪುರ ಜಲ ವಿದ್ಯುತ್ ಯೋಜನೆಯ ಪ್ರದೇಶವು ಕೆಪಿಸಿಎಲ್ ಸ್ವಾಧೀನದಲ್ಲಿದೆಯೇ ; ಪ್ರಸ್ತುತ ಈ ಯೋಜನೆಯು ಕಾರ್ಯಾಚರಣೆಯಲ್ಲಿದೆಯೇ ; ಹಾಗಿದ್ದಲ್ಲಿ, ಯಾವ ಸಂಸ್ಥೆ / ಕಂಪನಿ ವತಿಯಿಂದ ಕಾರ್ಯಾಚರಣೆ ಮಾಡಲಾಗುತ್ತಿದೆ ;

(ಆ) ಕಾರ್ಯಾಚರಣೆ ಮಾಡಿಸುತ್ತಿರುವ ಸಂಸ್ಥೆ / ಕಂಪನಿಯ ಹೆಸರು, ವಿಳಾಸ (ವಿವರಗಳೊಂದಿಗೆ) ಹಾಗೂ ಯಾವ ಆಧಾರದ ಮೇಲೆ ಕೆಪಿಸಿಎಲ್ ಸ್ವಾಧೀನಲ್ಲಿರುವ ಪ್ರದೇಶದಲ್ಲಿ ಆ ಸಂಸ್ಥೆ / ಕಂಪನಿ ಕಾರ್ಯಾಚರಣೆ ಮಾಡುತ್ತಿದೆ ; (ವಿವರ ನೀಡುವುದು)

(ಇ) ಕೆಪಿಸಿಎಲ್ ನಿಗಮವು ಮಲ್ಲಾಪುರ ಪ್ರದೇಶ ಜಲ ವಿದ್ಯುತ್ ಯೋಜನೆಯನ್ನು ಕಾರ್ಯಾಚರಣೆಗೊಳಿಸಲು ಖಾಸಗಿ ಸಂಸ್ಥೆಗಳು/ ಕಂಪನಿಗಳಿಂದ ಟೆಂಡರ್ ಆಹ್ವಾನಿಸಿದೆಯೇ ; ಟೆಂಡರ್‌ನ ಷರತ್ತುಗಳನ್ನು ಒಳಗೊಂಡಂತೆ ಟೆಂಡರ್ ದಸ್ತಾವೇಜುಗಳ ವಿವರಗಳು ಮತ್ತು ಸದರಿ ಟೆಂಡರ್‌ನಲ್ಲಿ ಭಾಗವಹಿಸಿದ ಎಲ್ಲಾ ಸಂಸ್ಥೆಗಳು / ಕಂಪನಿಗಳ ವಿವರಗಳನ್ನು ನೀಡುವುದು ;

(ಈ) ಈ ಯೋಜನೆಯನ್ನು ಯಾವಾಗ ಪ್ರಾರಂಭ ಮಾಡಲಾಗಿದೆ ; ಜೆಸ್ಕಾಂ ಮತ್ತು ಪ್ರಸ್ತುತ ಕಾರ್ಯಾಚರಣೆಯಲ್ಲಿರುವ ಸಂಸ್ಥೆ / ಕಂಪನಿ

ನಡುವೆ ಆಗಿರುವ ವಿದ್ಯುತ್ ಖರೀದಿ ಒಪ್ಪಂದದ ವಿವರಗಳನ್ನು ನೀಡುವುದು ಹಾಗೂ ಎಷ್ಟು ವರ್ಷಗಳವರೆಗೆ ಸದರಿ ಸಂಸ್ಥೆ / ಕಂಪನಿ ಕಾರ್ಯಾಚರಣೆ ಮಾಡಲು ಗಡುವು ನೀಡಲಾಗಿದೆ ?

## ಗೃಹ ಜ್ಯೋತಿ ಯೋಜನೆಯ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೫ (೨೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗೃಹ ಜ್ಯೋತಿ ಯೋಜನೆಯಲ್ಲಿ ಎಷ್ಟು ಯೂನಿಟ್ ಉಚಿತ ಕರೆಂಟ್ ನೀಡಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಗೆ ಪ್ರತಿ ತಿಂಗಳು ಬಳಕೆಯಾಗುತ್ತಿರುವ ವಿದ್ಯುತ್ ಎಷ್ಟು ; ಅದಕ್ಕೆ ತಗಲುತ್ತಿರುವ ವೆಚ್ಚವೆಷ್ಟು ;

(ಇ) ಗೃಹ ಜ್ಯೋತಿ ಯೋಜನೆಯಲ್ಲಿ ಯಾವ ಯಾವ ನಿಗಮಗಳಿಗೆ ಎಷ್ಟು ಅನುದಾನ ನೀಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಗೃಹ ಜ್ಯೋತಿ ಯೋಜನೆಯಡಿಯಲ್ಲಿ ನೋಂದಣಿ ಮಾಡಿಕೊಂಡಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸಮುದಾಯಗಳಿಗೆ ಒಳಪಡುವ ಬಳಕೆದಾರರು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ರೈತರು ತಮ್ಮ ಜಮೀನಿಗೆ ಟ್ರಾನ್ಸ್‌ಫಾರಂ ಅಳವಡಿಸಲು ಸರ್ಕಾರಕ್ಕೆ ಕಟ್ಟಬೇಕಾದ ಹಣ ಎಷ್ಟು; ಅದರ ಮಾನದಂಡಗಳೇನು ?

## ಸರ್ಕಾರಿ ಆಸ್ಪತ್ರೆ ವಿಷಯದ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೬ (೨೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ ಆಸ್ಪತ್ರೆಗಳಿವೆ ಮತ್ತು ಎಷ್ಟು ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಕೇಂದ್ರಗಳು ಇವೆ ; (ತಾಲ್ಲೂಕು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಜಿಲ್ಲಾ ಆಸ್ಪತ್ರೆಗಳಲ್ಲಿ ಇರುವ ಐಸಿಯು ಬೆಡ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಜಿಲ್ಲಾ ಆಸ್ಪತ್ರೆಗಳಲ್ಲಿ ಐಸಿಯು ಬೆಡ್‌ಗಳನ್ನು ಹೆಚ್ಚಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಆಸ್ಪತ್ರೆಗಳು ಸರಬರಾಜು ಮಾಡುವ ಔಷಧಿಗಳ ಗುಣಮಟ್ಟವನ್ನು ಪರಿಶೀಲಿಸಲಾಗಿದೆಯೇ ; ಉತ್ತಮ ಗುಣಮಟ್ಟದಲ್ಲದ ಔಷಧಿಗಳ ಕಂಪನಿ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಆಸ್ಪತ್ರೆಗಳಿಗೆ ಸರಬರಾಜು ಆಗಿರುವ ಔಷಧಿಗಳ ವಿತರಣೆಯಾಗದೆ ಹಾಳಾಗಿರುವ ಔಷಧಿಗಳ ಪ್ರಮಾಣವೆಷ್ಟು ? (ಮೂರು ವರ್ಷಗಳ ಜಿಲ್ಲಾವಾರು ಮಾಹಿತಿ ನೀಡುವುದು)

## ಬಿಪಿಎಲ್ ಪಡಿತರ ಚೀಟಿಯ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೭ (೨೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ಹೊಸ ಬಿಪಿಎಲ್ ಪಡಿತರ ಚೀಟಿ ಪಡೆಯಲು ಹಾಗೂ ತಿದ್ದುಪಡಿ ಮಾಡಲು ಸರ್ವರ್ ಸಮಸ್ಯೆಯನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ರದ್ದಾದ ಬಿಪಿಎಲ್ ಕಾರ್ಡ್‌ಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ನ್ಯಾಯ ಬೆಲೆ ಅಂಗಡಿಯ ಮೂಲಕ ಯಾವ ಯಾವ ವಸ್ತುಗಳನ್ನು ವಿತರಿಸಲಾಗುತ್ತಿದೆ ; (ವಸ್ತುವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಹೊರ ರಾಜ್ಯಗಳಿಗೆ ಸಾಗಿಸುವ ಪ್ರಕರಣಗಳು ದಾಖಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ ? (ಮಾಹಿತಿ ನೀಡುವುದು)

## ಸರ್ಕಾರಿ ವಿಶ್ವವಿದ್ಯಾಲಯ ಹಾಗೂ ಕಾಲೇಜು ವಿಷಯದ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮ (೨೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ವ್ಯಾಪ್ತಿಯಲ್ಲಿರುವ ಒಟ್ಟು ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಪದವಿ ಕಾಲೇಜುಗಳಲ್ಲಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಲ್ಯಾಣ ಕರ್ನಾಟಕದ ಭಾಗದಲ್ಲಿರುವ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಸಂಖ್ಯೆ ಎಷ್ಟು; ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ರಾಜ್ಯದ ಶಿಕ್ಷಣ ಸಂಸ್ಥೆಗಳಿಗೆ ಸರ್ಕಾರದಿಂದ ಮಂಜೂರು ಮಾಡಿದ ಮತ್ತು ಬಿಡುಗಡೆಯಾದ ಅನುದಾನ ಎಷ್ಟು ? (ಶಿಕ್ಷಣ ಸಂಸ್ಥೆವಾರು ಮಾಹಿತಿ ನೀಡುವುದು)

## ೨೦೨೩–೨೪ನೇ ಸಾಲಿನಲ್ಲಿ ಅಲ್ಪಾವಧಿ ಟೆಂಡರ್‌ನಲ್ಲಿ ವಿಳಂಭವಾಗಿರುವ ಬಗ್ಗೆ

**ಶ್ರೀ ಟಿ. ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯ (೭೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ಅಲ್ಪಾವಧಿಗೆ ಕಡಿಮೆ ದರದಲ್ಲಿ ವಿದ್ಯುತ್ ಖರೀದಿಸುವ ಸಲುವಾಗಿ ಟೆಂಡರನ್ನು ಎಷ್ಟು ತಿಂಗಳಿಗೊಮ್ಮೆ ಕರೆಯಲಾಗುತ್ತದೆ ;

(ಆ) ೨೦.೧೧.೨೦೨೩ ರಿಂದ ೩೧.೦೫.೨೦೨೪ರವರೆಗೆ ವಿದ್ಯುತ್ ಖರೀದಿಸಲು ಕರೆದ ಟೆಂಡರ್ ಪ್ರಕ್ರಿಯೆಯ ಸಂಪೂರ್ಣ ಮಾಹಿತಿಯನ್ನು ನೀಡುವುದು ಹಾಗೂ ಸದರಿ ಟೆಂಡರ್ ಪ್ರಕ್ರಿಯೆಯನ್ನು ಮುಂದೂಡಲು ಕಾರಣಗಳೇನು ;

(ಇ) ಸದರಿ ಟೆಂಡರ್ ಪ್ರಕ್ರಿಯೆಯನ್ನು ಮುಂದೂಡಿದ ಕಾರಣ ಸರ್ಕಾರಕ್ಕೆ ಆದ ಆರ್ಥಿಕ ಹೊರೆ ಎಷ್ಟು ;

(ಈ) ಈ ಅವಧಿಯಲ್ಲಾದ ಆರ್ಥಿಕ ಹೊರೆಯನ್ನು ಹೇಗೆ ಸರಿದೂಗಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಈ ಅಲ್ಪಾವಧಿಗೆ ವಿದ್ಯುತ್ ಖರೀದಿಸಲು ಸರ್ಕಾರವು ಅನುಸರಿಸಿದ ವಿಳಂಭಕ್ಕೆ ಮಹಾಲೇಖಪಾಲರ ಆಕ್ಷೇಪಣೆಯಲ್ಲಿ ತಿಳಿಸಿದ ಪ್ರಮುಖ ಅಂಶಗಳಾವುವು ? (ಪತ್ರದ ಪ್ರತಿಯನ್ನು ನೀಡುವುದು)

## ರಾಜ್ಯದಲ್ಲಿ ಜೀವರಕ್ಷಕ ಔಷಧಗಳ ಕೊರತೆಯ ಬಗ್ಗೆ

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೯೦ (೭೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮದಲ್ಲಿ (KSMSCL) ಸುಮಾರು ೨೫೦ ರೀತಿಯ ಔಷಧಿಗಳು ಕೊರತೆಯಲ್ಲಿರುವುದು ನಿಜವೇ ; ಹಾಗಿದ್ದಲ್ಲಿ ಔಷಧಿಗಳ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಪ್ರತೀ ಬಾರಿ ಔಷಧಿ ಖರೀದಿಸಲು ತೀವ್ರ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಖರೀದಿ ವಿಳಂಬಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಕೈಗೊಳ್ಳುವ ಕ್ರಮಗಳೇನು ;

(ಇ) ಕಳೆದ ೨ ವರ್ಷಗಳಲ್ಲಿ ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮದ ಮೂಲಕ ಯಾವ ಯಾವ ಔಷಧಿಗಳನ್ನು ಎಷ್ಟು ಮೊತ್ತಕ್ಕೆ ಖರೀದಿಸಲಾಗಿದೆ ; (ಟೆಂಡರ್ ಪಡೆದ ಕಂಪನಿಗಳ ಪೂರ್ಣ ವಿವರ ನೀಡುವುದು)

(ಈ) ಸದರಿ ನಿಗಮದಲ್ಲಿ ವಿವಿಧ ಔಷಧಿಗಳ ಖರೀದಿಯಲ್ಲಿ ಪಾರದರ್ಶಕತೆಯನ್ನು ತರಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸರ್ಕಾರಿ/ ಅನುದಾನಿತ ಪ್ರಾಥಮಿಕ/ ಪ್ರೌಢ/ ಪದವಿ ಪೂರ್ವ ಶಾಲಾ ಕಾಲೇಜುಗಳ ಶಿಕ್ಷಕ ಉಪನ್ಯಾಸಕರ ಮಾಹಿತಿ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೯೧ (೭೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪ್ರಾಥಮಿಕ ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಮಂಜೂರಾಗಿರುವ ಒಟ್ಟು ಶಿಕ್ಷಕ ಹಾಗೂ ಉಪನ್ಯಾಸಕ ಹುದ್ದೆಗಳ ಸಂಖ್ಯೆ ಎಷ್ಟು ; ಮಂಜೂರಾಗಿರುವ ಒಟ್ಟು ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ;

(ಆ) ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ಮತ್ತು ಉಪನ್ಯಾಸಕರ ಆಯಾ ಸ್ಥಳದಲ್ಲಿ ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ ; (ಪ್ರಸ್ತುತ ಕೆಲಸ ಮಾಡುತ್ತಿರುವ ಶಿಕ್ಷಕರ ಕಾಲೇಜುವಾರು ವಿವರ ಹೆಸರು, ವಿಷಯ ಮತ್ತು ಮೊಬೈಲ್ ಸಂಖ್ಯೆಗಳನ್ನು ತಾಲ್ಲೂಕುವಾರು ನೀಡುವುದು)

(ಇ) ಕಲ್ಯಾಣ ಕರ್ನಾಟಕ ಭಾಗದ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಮಂಜೂರಾಗಿರುವ ಒಟ್ಟು ಶಿಕ್ಷಕ, ಉಪನ್ಯಾಸಕ, ಪ್ರಾಂಶುಪಾಲರ ಹುದ್ದೆಗಳೆಷ್ಟು; ಮಂಜೂರಾಗಿರುವ ಒಟ್ಟು ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ;

(ಈ) ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರು ಆಯಾ ಸ್ಥಳದಲ್ಲಿ ಎಷ್ಟು ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿದ್ದಾರೆ ; (ಪ್ರಸ್ತುತ ಅನುದಾನಿತ ಶಾಲಾ, ಕಾಲೇಜುಗಳಲ್ಲಿ ಶಿಕ್ಷಕರಾಗಿ ಕೆಲಸ ಮಾಡುತ್ತಿರುವ ಶಿಕ್ಷಕರ ಕಾಲೇಜುವಾರು ವಿವರ ಹೆಸರು, ವಿಷಯ ಮತ್ತು ಮೊಬೈಲ್ ಸಂಖ್ಯೆಗಳನ್ನು ತಾಲ್ಲೂಕುವಾರು ನೀಡುವುದು)

(ಉ) ಕಲ್ಯಾಣ ಕರ್ನಾಟಕ ಭಾಗದ ಪದವಿ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಮಂಜೂರಾಗಿರುವ ಒಟ್ಟು ಉಪನ್ಯಾಸಕ, ಪ್ರಾಂಶುಪಾಲರ ಹುದ್ದೆಗಳೆಷ್ಟು ; ಮಂಜೂರಾಗಿರುವ ಒಟ್ಟು ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ;

(ಊ) ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರು ಆಯಾ ಸ್ಥಳದಲ್ಲಿ ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ ; ಪ್ರಸ್ತುತ ಅನುದಾನಿತ ಕಾಲೇಜುಗಳಲ್ಲಿ ಶಿಕ್ಷಕರಾಗಿ ಕೆಲಸ ಮಾಡುತ್ತಿರುವ ಉಪನ್ಯಾಸಕ ಕಾಲೇಜುವಾರು ವಿವರ ಹೆಸರು ವಿಷಯ ಮತ್ತು ಮೊಬೈಲ್ ಸಂಖ್ಯೆಗಳನ್ನು ತಾಲ್ಲೂಕುವಾರು ನೀಡುವುದು ?

## ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನಡೆಸುವ ಪರೀಕ್ಷೆಗಳ ಕುರಿತು

ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-

೯೨ (೭೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ವಿವಿಧ ಹುದ್ದೆಗಳ ನೇಮಕಾತಿಗಳನ್ನು ಶೀಘ್ರಗತಿಯಲ್ಲಿ ಪೂರ್ಣಗೊಳಿಸಲು ಕೈಗೊಂಡ ಕ್ರಮಗಳೇನು ;

(ಆ) ಪ್ರಾಧಿಕಾರವು ಪರೀಕ್ಷಾ ಕೇಂದ್ರಗಳನ್ನು ಯಾವ ಮಾನದಂಡ ದಡಿಯಲ್ಲಿ ನಿಗದಿಪಡಿಸುತ್ತದೆ ;

(ಇ) ಇತ್ತೀಚೆಗೆ ನಡೆದ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗೆ ಪ್ರತಿ ಅಭ್ಯರ್ಥಿಗೆ ೭೫೦/- ರೂ ಶುಲ್ಕ ನಿಗದಿಪಡಿಸಿದ್ದು ನಿಜವೇ; ಇದ್ದಲ್ಲಿ, ಇಷ್ಟು ದೊಡ್ಡ ಪ್ರಮಾಣದ ಪರೀಕ್ಷಾ ಶುಲ್ಕವು ಅಭ್ಯರ್ಥಿಗಳ ಮೇಲೆ ಆರ್ಥಿಕ ಹೊರೆ ಬೀಳುವುದಿಲ್ಲವೇ ; (ಪ್ರತಿ ಅರ್ಜಿಗೆ ಯಾವ ನಿಯಮ ಹಾಗೂ ಮಾನದಂಡದಡಿಯಲ್ಲಿ ಶುಲ್ಕವನ್ನು ನಿಗದಿಪಡಿಸಲಾಗುತ್ತದೆ ವಿವರ ನೀಡುವುದು)

(ಈ) ಗ್ರಾಮ ಆಡಳಿತ ಅಧಿಕಾರಿ ಹುದ್ದೆಗೆ ಒಟ್ಟು ಎಷ್ಟು ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದಾರೆ ಮತ್ತು ಈ ಅರ್ಜಿಗಳಿಂದ ಸಂಗ್ರಹವಾದ ಒಟ್ಟು ಮೊತ್ತ ಎಷ್ಟು ? (ಮಾಹಿತಿಯನ್ನು ಒದಗಿಸುವುದು)

# ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಮಂಜೂರಾಗಿರುವ ಉಪನ್ಯಾಸಕ ಪ್ರಾಂಶುಪಾರ ಹುದ್ದೆಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೯೩ (೭೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಮಂಜೂರಾಗಿರುವ ಒಟ್ಟು ಉಪನ್ಯಾಸಕ, ಪ್ರಾಂಶುಪಾಲರ ಹುದ್ದೆಗಳೆಷ್ಟು ; ಮಂಜೂರಾಗಿರುವ ಒಟ್ಟು ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ;

(ಆ) ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರು ಆಯಾ ಸ್ಥಳದಲ್ಲಿ ಎಷ್ಟು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ ;

(ಇ) ಪ್ರಸ್ತುತ ಸರ್ಕಾರಿ ಕಾಲೇಜುಗಳಲ್ಲಿ ಶಿಕ್ಷಕರಾಗಿ ಕೆಲಸ ಮಾಡುತ್ತಿರುವ ಉಪನ್ಯಾಸಕರ ಕಾಲೇಜುವಾರು ವಿವರ ಹೆಸರು, ವಿಷಯ ಮತ್ತು ಮೊಬೈಲ್ ಸಂಖ್ಯೆಗಳನ್ನು ತಾಲ್ಲೂಕುವಾರು ನೀಡುವುದು ;

(ಈ) ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಂಗ್, ಪಾಲಿಟೆಕ್ನಿಕ್ ಕಾಲೇಜುಗಳಿಗೆ ಮಂಜೂರಾಗಿರುವ ಒಟ್ಟು ಉಪನ್ಯಾಸಕ, ಪ್ರಾಂಶುಪಾಲರ ಹುದ್ದೆಗಳೆಷ್ಟು; ಮಂಜೂರಾಗಿರುವ ಒಟ್ಟು ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರು ಆಯಾ ಸ್ಥಳದಲ್ಲಿ ಎಷ್ಟು ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿದ್ದಾರೆ ;

(ಉ) ಪ್ರಸ್ತುತ ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳಲ್ಲಿ ಉಪನ್ಯಾಸಕರಾಗಿ ಕೆಲಸ ಮಾಡುತ್ತಿರುವ ಉಪನ್ಯಾಸಕರ ಕಾಲೇಜುವಾರು ವಿವರ ಹೆಸರು, ವಿಷಯ ಮತ್ತು ಮೊಬೈಲ್ ಸಂಖ್ಯೆಗಳನ್ನು ತಾಲ್ಲೂಕುವಾರು ನೀಡುವುದು ?

## ಸರ್ಕಾರಿ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೯೪ (೦೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೧೨೪೩ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಮತ್ತು ಪ್ರಸ್ತುತ ಕೆಲಸ ಮಾಡುತ್ತಿರುವ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಪ್ರಾಧ್ಯಾಪಕರ ವರ್ಗಾವಣೆಯ ಕಾರಣಕ್ಕಾಗಿ ಸಾವಿರಾರು ಅತಿಥಿ ಉಪನ್ಯಾಸಕರನ್ನು ಮುಂದುವರಿಸಲು ಮತ್ತು ಸೇವಾ ಭದ್ರತೆ ಒದಗಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ;

(ಆ) ಯು.ಜಿ.ಸಿ.. ಆದೇಶದಂತೆ ಪಿ.ಎಚ್.ಡಿ., ಇಲ್ಲದ ಅಥವಾ ನೆಟ್/ ಸೆಟ್ ಉತ್ತೀರ್ಣರಾಗದ ಅತಿಥಿ ಉಪನ್ಯಾಸಕರು ಹತ್ತಾರು ವರ್ಷಗಳಿಂದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿದ್ದು. ಈ ರೀತಿಯ ಸುಮಾರು ೫ ಸಾವಿರ ಅತಿಥಿ ಉಪನ್ಯಾಸಕರನ್ನು ಮುಂದುವರೆಸಲು ಮತ್ತು ಅವರ ಸೇವಾ ಭದ್ರತೆ ಕುರಿತು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಅತಿಥಿ ಉಪನ್ಯಾಸಕರು ಪ್ರತಿ ವರ್ಷ ಎದುರಿಸುತ್ತಿರುವ ಅತಂತ್ರ ಸ್ಥಿತಿಗಳು, ಸೇವಾ ಹಿರಿತನದಲ್ಲಿ ಆಗುತ್ತಿರುವ ಅನ್ಯಾಯ

ಕಾಲೇಜುಗಳ ಪ್ರಾಂಶುಪಾಲರು ನಿರ್ಧರಿಸುವ ಕಾರ್ಯಭಾರ/ ಶೋಷಣೆ ಮುಂತಾದ ಸಮಸ್ಯೆಗಳಿಗೆ ಸರ್ಕಾರವು ಯಾವ ಕ್ರಮಗಳನ್ನು / ಪರಿಹಾರಗಳನ್ನು ಕೈಗೊಂಡಿದೆ ?

## ಶಾಲಾ ಶೌಚಾಲಯ ನಿರ್ವಹಣೆ ಮತ್ತು ಶಾಲೆಗಳ ಶುಚಿಗೆ ಕೊಡುತ್ತಿರುವ ಅನುದಾನದ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೯೫ (೦೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಶೌಚಾಲಯ ಸ್ವಚ್ಛತೆಗೆ ಮತ್ತು ಶಾಲೆಗಳ ಶುಚಿಗೆ ಪ್ರತಿ ವರ್ಷ ಕೊಡುತ್ತಿರುವ ಅನುದಾನವೆಷ್ಟು; (ಐದು ವರ್ಷಗಳ ವಿವರ ನೀಡುವುದು)

(ಆ) ಸರ್ಕಾರವು ಕೊಡುವ ಅನುದಾನ ಸಾಕಾಗದ ಕಾರಣ ಓದುತ್ತಿರುವ ಮಕ್ಕಳಿಂದ/ವಿದ್ಯಾರ್ಥಿಗಳಿಂದ ಶೌಚಾಲಯ ಸ್ವಚ್ಛತೆ ಮತ್ತು ಶಾಲೆಗಳ ಶುಚಿ ಕಾರ್ಯಕ್ಕೆ ಬಳಸುತ್ತಿರುವುದು ನಿಜವೇ ;

(ಇ) ಸರ್ಕಾರಿ ಶಾಲೆಗಳನ್ನು ಸ್ಥಳೀಯ ಸಂಸ್ಥೆಗಳಾದ ಪಾಲಿಕೆಗಳು/ ಪಟ್ಟಣ ಪಂಚಾಯತಿಗಳು/ಗ್ರಾಮ ಪಂಚಾಯತಿಗಳಿಗೆ ನಿರ್ವಹಣಾ ಜವಾಬ್ದಾರಿ ವಹಿಸಿ, ಶಾಲೆಗಳನ್ನು ಸ್ವಚ್ಛವಾಗಿಟ್ಟುಕೊಳ್ಳಲು ಸರ್ಕಾರವು ನಿರ್ಧಾರ ಕೈಗೊಳ್ಳುವುದೇ ;

(ಈ) ಒಂದು ಕಡೆ ಸ್ವಚ್ಛತೆ ಇಲ್ಲದಿದ್ದರೆ ಮಕ್ಕಳ ಆರೋಗ್ಯ ಸಮಸ್ಯೆ, ಇನ್ನೊಂದು ಕಡೆ ಸ್ವಚ್ಛತೆ ಅನುದಾನದ ಕೊರತೆಯಿಂದ ಸರ್ಕಾರಿ ಶಾಲೆಗಳಿಗೆ ತೊಂದರೆಯಾಗುತ್ತಿದ್ದು, ಇದಕ್ಕೆ ಕೈಗೊಂಡಿರುವ ಕ್ರಮಗಳಾವುವು ;

(ಉ) ಸ್ವಚ್ಛತಾ ಅನುದಾನವನ್ನು ಹೆಚ್ಚಿಸಿ ಈಗಾಗುತ್ತಿರುವ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ತಕ್ಷಣವೇ ಕ್ರಮಗಳನ್ನು ಕೈಗೊಳ್ಳುವುದೇ ?

## ಬೆಳಗಾವಿ ನಗರದಲ್ಲಿರುವ ಮಲ್ಟಿ ಸ್ಪೆಷಾಲಿಟಿ ಜಿಲ್ಲಾ ಆಸ್ಪತ್ರೆಯ ದುಸ್ಥಿತಿಯ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೯೬ (೦೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ನಗರದಲ್ಲಿರುವ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಉದ್ಘಾಟನೆಯಾಗಿ ಎರಡು ವರ್ಷಗಳು ಕಳೆದರೂ ಮೂಲಭೂತ ಸೌಕರ್ಯಗಳಾದ ಉಪಕರಣಗಳು, ವೈದ್ಯರು, ನರ್ಸ್‌ಗಳು ಇಲ್ಲದಿರುವುದಕ್ಕೆ ಕಾರಣಗಳೇನು ;

(ಆ) ಸರ್ಕಾರವು ನೂರಾರು ಕೋಟಿ ವೆಚ್ಚ ಮಾಡಿ ಕಟ್ಟಿರುವ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಇಂದು ಬಡ ರೋಗಿಗಳಿಗೆ ವೈದ್ಯಕೀಯ ಸೌಲಭ್ಯ ನೀಡದಿರುವುದರ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಎರಡು ಕಟ್ಟಡಗಳಲ್ಲಿ ನಡೆಸುತ್ತಿರುವ ಜಿಲ್ಲಾ ಆಸ್ಪತ್ರೆ ತುಂಬಾ ಹಳೆಯದಾಗಿದ್ದು, ಯಾವುದೇ ಶುಚಿತ್ವ ಹಾಗೂ ಆರೋಗ್ಯಕರ ವಾತಾವರಣವಿಲ್ಲದೆ ರೋಗಿಗಳು ನರಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸುಮಾರು ೬೦ ಲಕ್ಷ ಜನಸಂಖ್ಯೆ ಹೊಂದಿರುವ ಬೆಳಗಾವಿ ಜಿಲ್ಲೆಗೆ ಹೊಸದೊಂದು ವೈದ್ಯಕೀಯ ಬೋಧನಾ ಆಸ್ಪತ್ರೆ ಮತ್ತು ಸುಸಜ್ಜಿತ ಜಿಲ್ಲಾ ಆಸ್ಪತ್ರೆಯು ಕಟ್ಟಡಗಳು ಯಾವಾಗ ನಿರ್ಮಾಣ ಮಾಡಲಾಗುವುದು ?

# ರಾಜ್ಯದಲ್ಲಿ ಹೆಪಟೈಟಿಸ್ ರೋಗದ ವೈರಾಣು ಹರಡುವಿಕೆ ತಡೆಗಟ್ಟುವ ಬಗ್ಗೆ

**ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೯೭ (೧೨೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹೆಪಟೈಟಿಸ್- ಬಿ ಮತ್ತು ಸಿ ವೈರಸ್ ಸೋಂಕಿನ ರೋಗ ವ್ಯಾಪಕವಾಗಿ ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ರೋಗ ಹರಡುವಿಕೆ ಮತ್ತು ಪರಿಣಾಮಗಳಾವುವು ; (ಪೂರ್ಣ ಮಾಹಿತಿ ನೀಡುವುದು)

(ಆ) ಈ ವೈರಾಣು ಹರಡುವಿಕೆ ತಡೆಗಟ್ಟಲು ಗುರುತಿಸಿರುವ ನೋಡಲ್ ಏಜೆನ್ಸಿ ಯಾವುವು ಮತ್ತು ಈ ಬಗ್ಗೆ ಕೇಂದ್ರ-ರಾಜ್ಯ ಸರ್ಕಾರಗಳು ಹೊರಡಿಸಿರುವ ಮಾರ್ಗಸೂಚಿಗಳು ಯಾವುವು ;

(ಇ) ರಾಜ್ಯದಲ್ಲಿ ವೈರಾಣುಗಳಿಂದ ಬಾಧಿತರಾದವರಿಗೆ ನೀಡುತ್ತಿರುವ ಔಷಧ ಉಪಚಾರ, ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಈ ರೋಗಗಳ ನಿವಾರಣೆಗೆ ಮತ್ತು ತಡೆಗಟ್ಟುವಿಕೆಗೆ ಕೇಂದ್ರ ಸರ್ಕಾರದಿಂದ ದೊರೆಯುತ್ತಿರುವ ಆರ್ಥಿಕ ಅನುದಾನ ಮತ್ತು ನೆರವುಗಳು ಯಾವುವು ? (ಪೂರ್ಣ ಮಾಹಿತಿ ನೀಡುವುದು)

## ಋತು ಶುಚಿತ್ವದ ಕಾಳಜಿಯ ಕುರಿತು

**ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೯೮ (೧೨೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮುಟ್ಟು ಮತ್ತು ಮುಟ್ಟಿನ ಶುಚಿತ್ವದ ಮಾಹಿತಿಯ ಕೊರತೆ ತೀವ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಅರಿವು ಮೂಡಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಕೇಂದ್ರ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯದಿಂದ ಜಾರಿಗೊಳಿಸಲು ಋತು ಶುಚಿತ್ವ ಯೋಜನೆಯನ್ನು ಯಾವ ವರ್ಷದಿಂದ ಜಾರಿಗೊಳಿಸಲಾಗುತ್ತಿದೆ ಮತ್ತು ಈ ಯೋಜನೆಯ ಧ್ಯೇಯೋದ್ದೇಶಗಳೇನು ; ಈ ಯೋಜನೆ ಅನುಷ್ಠಾನದಲ್ಲಿ ಕೇಂದ್ರ, ರಾಜ್ಯ ಸರ್ಕಾರಗಳ ಜವಾಬ್ದಾರಿ ಮತ್ತು ಪಾತ್ರಗಳೇನು ಹಾಗೂ ಕಳೆದ ೫ ವರ್ಷಗಳಲ್ಲಿ ಕೇಂದ್ರದಿಂದ ಈ ಯೋಜನೆಯಡಿ ರಾಜ್ಯ ಸರ್ಕಾರಕ್ಕೆ ದೊರೆತಿರುವ ನೆರವು ಎಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಋತು ಶುಚಿತ್ವ ಯೋಜನೆಗೆ ಕಳೆದ ೩ ವರ್ಷಗಳಿಂದ ಸ್ಯಾನಿಟರಿ ನ್ಯಾಪ್‌ಕಿನ್ ವಿತರಣೆಯಾಗದೇ ಗ್ರಾಮೀಣ ಭಾಗದ ಹದಿಹರೆಯದ ಯುವತಿ ಮತ್ತು ಮಹಿಳೆಯರು ತಮ್ಮ ಶುಚಿತ್ವ ಕಾಪಾಡಿಕೊಳ್ಳಲು ಬಟ್ಟೆಯನ್ನು ಉಪಯೋಗಿಸುತ್ತಿದ್ದು, ಇದರಿಂದ ಚರ್ಮರೋಗ, ಮೂತ್ರರೋಗ ಮತ್ತಿತರ ಆರೋಗ್ಯ ಸಮಸ್ಯೆಗಳು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಮಸ್ಯೆ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಹದಿಹರೆಯದ ಹೆಣ್ಣು ಮಕ್ಕಳು ಹಾಗೂ ಮಹಿಳಾ ಶಿಕ್ಷಕರು ಮತ್ತು ಸರ್ಕಾರಿ ನೌಕರಿಯಲ್ಲಿರುವ ಮಹಿಳೆಯರು ಋತುಚಕ್ರ ಸಮಯದಲ್ಲಿ ಕ್ರಮವಾಗಿ ಶಾಲಾ-ಕಾಲೇಜು ಮತ್ತು ಸರ್ಕಾರಿ ಕಛೇರಿಗಳಿಗೆ ಗೈರು ಹಾಜರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಹಾಗೂ ಈ ಬಗ್ಗೆ ಸರ್ಕಾರ ಅಧ್ಯಯನ ಕೈಗೊಂಡಿದೆಯೇ ; (ಪೂರ್ಣ ವಿವರಗಳನ್ನು ನೀಡುವುದು)

(ಉ) ರಾಜ್ಯದಲ್ಲಿನ ಮಹಿಳಾ ಸರ್ಕಾರಿ ನೌಕರರು ಋತು ಚಕ್ರದ ಸಮಯದಲ್ಲಿ ಕಛೇರಿಗೆ ಗೈರು ಹಾಜರಾಗುವ ಸಮಯದಲ್ಲಿ ವಿಶೇಷ ರಜೆ ನೀಡಲು ಸರ್ಕಾರ ತೀರ್ಮಾನಿಸಿದೆಯೇ ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಅಗತ್ಯವಿರುವ ವಿದ್ಯುತ್‌ಚ್ಛಕ್ತಿ ಪ್ರಮಾಣ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೯೯ (೧೩೪೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಗತ್ಯವಿರುವ ಒಟ್ಟು ವಿದ್ಯುತ್‌ಚ್ಛಕ್ತಿ ಅವಶ್ಯಕತೆ ಎಷ್ಟು; ವಿವಿಧ ಮೂಲಗಳಿಂದ ಉತ್ಪಾದಿಸುವ ವಿದ್ಯುತ್‌ಚ್ಛಕ್ತಿಯ ಒಟ್ಟು ಸಾಮರ್ಥ್ಯವೆಷ್ಟು ; (ವಲಯವಾರು ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಪ್ರಸ್ತುತದಲ್ಲಿರುವ ವಿದ್ಯುತ್ ಕೊರತೆ ಎಷ್ಟು ಮತ್ತು ಈ ಕೊರತೆಯನ್ನು ಯಾವ-ಯಾವ ಮೂಲಗಳಿಂದ ಭರಿಸಲಾಗುತ್ತಿದೆ ; (ವಲಯವಾರು ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ವಿದ್ಯುತ್ ಖರೀದಿಗಾಗಿ ಪ್ರತಿ ವರ್ಷ ರಾಜ್ಯ ಸರ್ಕಾರ ವ್ಯಯಿಸುತ್ತಿರುವ ಹಣವೆಷ್ಟು ; (ವಲಯವಾರು ಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಋತುಮಾನವಾರು ದೊರೆಯಬಹುದಾದ ವಿದ್ಯುತ್‌ಚ್ಛಕ್ತಿಯನ್ನು ಬ್ಯಾಟರಿ ವಿದ್ಯುತ್‌ಚ್ಛಕ್ತಿ ಶೇಖರಣೆ ವ್ಯವಸ್ಥೆಯಲ್ಲಿ ಶೇಖರಿಸಲು ರಾಜ್ಯ ಸರ್ಕಾರ ಕಾರ್ಯಕ್ರಮ ರೂಪಿಸುತ್ತಿದೆಯೇ ; ಹಾಗಿದ್ದಲ್ಲಿ, ಈ ಯೋಜನೆಯ ರೂಪ-ರೇಷೆಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಉ) ಈ ಪ್ರಸ್ತಾವಿತ ಯೋಜನೆ ದೇಶದಲ್ಲಿಯೇ ಪ್ರಥಮವೇ ಮತ್ತು ಈ ಯೋಜನೆಗೆ ಕೇಂದ್ರ ಸರ್ಕಾರದ ನೆರವನ್ನು ಪಡೆಯಲು ಪ್ರಯತ್ನಿಸಲಾಗಿದೆಯೇ ? (ಪೂರ್ಣ ಮಾಹಿತಿ ನೀಡುವುದು)

## ಬೆಂಗಳೂರು ನಗರದ ವಾಯುಮಾಲಿನ್ಯ ನಿಯಂತ್ರಣದ ಬಗ್ಗೆ

**ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೧೦೦ (೧೩೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ವಾಯು ಮಾಲಿನ್ಯ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಾರಿಗೆ ವಲಯದಿಂದ ಅತಿ ಹೆಚ್ಚು ಶೇ೫೦.೫ ರಷ್ಟು ಮಾಲಿನ್ಯವಾಗುತ್ತಿದ್ದು, ರಸ್ತೆ ಧೂಳಿನಿಂದ ಶೇ ೧೬.೯, ಕಟ್ಟಡ ನಿರ್ಮಾಣ ಮತ್ತು ತೆರವು ಚಟುವಟಿಕೆಗಳಿಂದ ಶೇ ೧೧, ತ್ಯಾಜ್ಯ ಸುಡುವುದರಿಂದ ಶೇ ೫.೬, ಕೈಗಾರಿಕೆಗಳಿಂದ ಶೇ ೦.೧ ಮಾಲಿನ್ಯ ಉಂಟಾಗುತ್ತಿರುವುದರ ಬಗ್ಗೆ ಸರ್ಕಾರ ಸಮೀಕ್ಷೆ ನಡೆಸಿದೆಯೇ ;

(ಇ) ಕಳೆದ ೫ ವರ್ಷಗಳಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಕಾರಿಗಳು ಎಷ್ಟು ವಾಹನಗಳನ್ನು ಮತ್ತು ಕಾರ್ಖಾನೆಗಳನ್ನು ಪರಿಶೀಲಿಸಿ, ಎಷ್ಟು ದಂಡವನ್ನು ವಿಧಿಸಿದ್ದಾರೆ ;

(ಈ) ಪಿ.ಎಂ ೨.೫ ಮಾಲಿನ್ಯಕಾರಕವು ಮಾನವನ ದೇಹಕ್ಕೆ ತುಂಬಾ ಅಪಾಯಕಾರಿ, ಪಿ.ಎಂ ೨.೫ ಕಣ ಗಂಟಲನ್ನು ದಾಟಿ ಶ್ವಾಸಕೋಶ ಹಾಗೂ ರಕ್ತನಾಳಗಳನ್ನು ಪ್ರವೇಶಿಸುವ ಸಾಧ್ಯತೆ ಇರುವುದರಿಂದ ಹೃದಯಘಾತ, ಕ್ಯಾನ್ಸರ್ ನಂತಹ ಗಂಭೀರ ಕಾಯಿಲೆಗಳಿಗೂ ಕಾರಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಮಾಲಿನ್ಯ ನಿಯಂತ್ರಣ ಮಂಡಳಿಯ ಬೇಜವ್ದಾರಿಯಿಂದ ಹಾಗೂ ಸರಿಯಾಗಿ ಪರಿಶೀಲನಾ ಕಾರ್ಯನಿರ್ವಹಿಸುತ್ತಿಲ್ಲದಿರುವುದರಿಂದ ಈ ರೀತಿಯ ಮಾಲಿನ್ಯ ಹದಗೆಡುತ್ತಿದ್ದು, ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಯಾವ ರೀತಿ ಕ್ರಮ ತೆಗೆದುಕೊಳ್ಳಲಾಗಿದೆ ?

## ಯುವನಿಧಿ ಯೋಜನೆ ಕುರಿತು

**ಡಾ. ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೧ (೧೧೨) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ "ಯುವನಿಧಿ" ಯೋಜನೆಗೆ ಈವರೆಗೆ ಎಷ್ಟು ಅನುದಾನ ಒದಗಿಸಲಾಗಿದೆ ; (ಜಿಲ್ಲಾವಾರು ಯುವನಿಧಿ ಯೋಜನೆಯ ಫಲಾನುಭವಿಗಳ ಮಾಹಿತಿ ನೀಡುವುದು)

(ಆ) "ಯುವನಿಧಿ" ಯೋಜನೆಯಡಿ ಎಷ್ಟು ಫಲಾನುಭವಿಗಳಿಗೆ ಕೌಶಲ್ಯಾಭಿವೃದ್ಧಿ ನೀಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ಕಾಲೇಜುಗಳನ್ನು ಸ್ಥಾಪಿಸುವ ಕುರಿತು

**ಡಾ. ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೨ (೧೧೩) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ, ಅನುದಾನಿತ ಮತ್ತು ಖಾಸಗಿ ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ಕಾಲೇಜುಗಳಿವೆ; ಇವುಗಳಲ್ಲಿ ಒಟ್ಟು ಎಷ್ಟು ಸೀಟುಗಳು ಲಭ್ಯವಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸರ್ಕಾರವು ಮುಂದಿನ ಐದು ವರ್ಷಗಳಲ್ಲಿ ಎಷ್ಟು ಸರ್ಕಾರಿ ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ಕಾಲೇಜುಗಳನ್ನು ಸ್ಥಾಪಿಸುವ ಉದ್ದೇಶ ಹೊಂದಿದೆ ; ಇದರಿಂದ ಎಷ್ಟು ಸೀಟುಗಳು ಹೆಚ್ಚು ಲಭ್ಯವಾಗುವುವು ;

(ಇ) ೨೦೨೩-೨೪ ಮತ್ತು ೨೦೨೪-೨೫ನೇ ಸಾಲಿನಲ್ಲಿ ಸರ್ಕಾರಿ ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ಕಾಲೇಜುಗಳನ್ನು ಸ್ಥಾಪಿಸಲು ಎಷ್ಟು ಅನುದಾನ ಒದಗಿಸಲಾಗಿದೆ ? (ವರ್ಷವಾರು ಮಾಹಿತಿ ನೀಡುವುದು)

## ಪದವಿ ಪೂರ್ವ ಕಾಲೇಜುಗಳಲ್ಲಿ NEET/JEE ಪರೀಕ್ಷೆಗಳಿಗೆ ಪ್ರತ್ಯೇಕ ತರಬೇತಿ ಕುರಿತು

**ಡಾ. ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೦೩ (೧೧೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪದವಿ ಪೂರ್ವ ಕಾಲೇಜುಗಳಲ್ಲಿ NEET/IIT/JEE ಪರೀಕ್ಷೆಗಳಿಗೆ ಪ್ರತ್ಯೇಕ ತರಬೇತಿ ನೀಡಲಾಗುತ್ತಿದೆಯೇ ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಎಷ್ಟು ಮಕ್ಕಳು ತರಬೇತಿ ಪಡೆಯುತ್ತಿದ್ದಾರೆ ವಾರಕ್ಕೆ ಎಷ್ಟು ಗಂಟೆಗಳ ಶಾಲಾ ತರಬೇತಿ ನೀಡಲಾಗುತ್ತಿದೆ ; (ವಿವರ ನೀಡುವುದು)

(ಇ) ೨೦೨೪-೨೫ನೇ ಸಾಲಿನಲ್ಲಿ ಈ ತರಬೇತಿಗೆ ಪ್ರತ್ಯೇಕ ಅನುದಾನ ಒದಗಿಸಲಾಗಿದೆಯೇ ? (ವಿವರ ನೀಡುವುದು)

## ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕುರಿತು

**ಡಾ. ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೦೪ (೧೧೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ಸರ್ಕಾರಿ ಮತ್ತು ಇನ್ನಿತರ ನೌಕರಿ ಹಾಗೂ ಉನ್ನತ ಶಿಕ್ಷಣ ಪಡೆಯಲು ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಅತ್ಯವಶ್ಯವಾಗಿದ್ದು, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಪ್ರಥಮ ದರ್ಜೆ ಕಾಲೇಜುಗಳ ಪಠ್ಯಕ್ರಮದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ವಿಷಯಗಳನ್ನು ಅಳವಡಿಸಿಕೊಳ್ಳಲಾಗಿದೆಯೇ ; ಇಲ್ಲವಾದಲ್ಲಿ, ಈ ಕುರಿತು ಯಾವುದಾದರೂ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಮರದ ಮಿಲ್ಲುಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೫ (೩೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಕೃಷ್ಣಾಪುರ ಮತ್ತು ಕಾಟಿಪಳ್ಳ ಗ್ರಾಮದಲ್ಲಿರುವ ಮರದ ಮಿಲ್ಲುಗಳ ಸಂಖ್ಯೆ ಎಷ್ಟು ; ಸದರಿ ಮಿಲ್ಲುಗಳು ಪ್ರಾರಂಭಗೊಂಡಿದ್ದು ಯಾವಾಗ ; ಈ ಮರದ ಮಿಲ್ಲುಗಳು ಪ್ರಾರಂಭವಾದಾಗಿನಿಂದ ಇದುವರೆಗೆ ಎಷ್ಟು ಟನ್ ಮರಗಳನ್ನು ಕತ್ತರಿಸಿವೆ ; (ವರ್ಷವಾರು ವಿವರ ನೀಡುವುದು)

(ಆ) ಈ ಮರದ ಮಿಲ್ಲುಗಳು ಪ್ರಾರಂಭವಾದಾಗಿನಿಂದ ಇಂದಿನವರೆಗೆ ಅರಣ್ಯ ಇಲಾಖೆಯಿಂದ ಎಷ್ಟು ಮರದ ದಿಮ್ಮಿಗಳನ್ನು ಖರೀದಿಸಿವೆ ; ಯಾವ ಯಾವ ಮರದ ಮಿಲ್ಲುಗಳು ಯಾವ ಯಾವ ಮರದ ದಿಮ್ಮಿಗಳನ್ನು ಖರೀದಿಸಿದೆ ; (ಹೆಸರಿನೊಂದಿಗೆ ವರ್ಷವಾರು ವಿವರ ನೀಡುವುದು)

(ಇ) ಈ ಮರದ ಮಿಲ್ಲುಗಳು ಪ್ರಾರಂಭವಾದಾಗಿನಿಂದ ನೆಟ್ಟು ಬೆಳೆಸಿರುವ ಮರ ಗಿಡಗಳ ಸಂಖ್ಯೆ ಎಷ್ಟು ; ಯಾವ ಯಾವ ಮರಗಳನ್ನು ಯಾವ ಯಾವ ಪ್ರದೇಶದಲ್ಲಿ ನೆಟ್ಟು ಬೆಳಸಿವೆ ? (ವಿವರ ನೀಡುವುದು)

## ಅರಣ್ಯೀಕರಣ ಯೋಜನೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೬ (೩೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಅರಣ್ಯೀಕರಣ ಯೋಜನೆಗೆ ನಿಗಧಿಪಡಿಸಲಾದ ೩೪೭.೧೩ ಕೋಟಿ ರೂಗಳನ್ನು ರಾಷ್ಟ್ರೀಯ ಪರಿಹಾರಾರ್ಥ ಅರಣ್ಯೀಕರಣ ನಿಧಿಗೆ ವರ್ಗಾಯಿಸಿರುವುದರಿಂದ ರಾಜ್ಯ ಅರಣ್ಯ ಯೋಜನೆಗೆ ನಷ್ಟ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಮೊತ್ತವನ್ನು ವರ್ಗಾಯಿಸುವ ಮೂಲಕ ರಾಜ್ಯದ ಬೊಕ್ಕಸಕ್ಕೆ ನಷ್ಟ ಉಂಟುವಮಾಡಿದ ಅಧಿಕಾರಿಯ ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ರಾಜ್ಯ ಅರಣ್ಯೀಕರಣ ಯೋಜನೆಯ ಅನ್ವಯ ಕಳೆದ ೫ ವರ್ಷಗಳಲ್ಲಿ ಮಾಡಲಾದ ವೆಚ್ಚವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಭೂಮಿಯ ಯಾವುದೋ ಕಾಲಘಟ್ಟದಲ್ಲಿ ಯಾರೋ ನೆಟ್ಟ ಮರಗಳನ್ನು ಅಥವಾ ತಾನಾಗೀಯೇ ಬೆಳೆದ ೫೦ ರಿಂದ ೧೦೦ ವರ್ಷಗಳ ಹಳೆಯ ಮರಗಳನ್ನು ಕಡಿಯಲು ಅನುಮತಿ ನೀಡಲು ಕಾರಣವೇನು ; ಮರವನ್ನು ನೆಟ್ಟು ಬೆಳಸಿದವರಿಗೆ ಮಾತ್ರವೇ ಮರವನ್ನು ಕಡಿಯಲು ಹಕ್ಕು ಎಂಬುದಾಗಿ ಯಾವಾಗ ಕಾನೂನು ಜಾರಿಗೊಳಿಸಲಾಗುತ್ತದೆ ?

## ಎ.ಪಿ.ಎಲ್ ಕಾರ್ಡ್‌ಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೭ (೩೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನ್ನಭಾಗ್ಯ ಯೋಜನೆಯಲ್ಲಿ ಕಳೆದ ೬ ತಿಂಗಳಿನಲ್ಲಿ ಎಪಿಎಲ್, ಬಿಪಿಎಲ್ ಮತ್ತು ಅಂತ್ಯೋದಯ ಕಾರ್ಡುದಾರರಿಗೆ ವಿತರಿಸಿದ ಅಕ್ಕಿಯ ಪ್ರಮಾಣ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ಎಪಿಎಲ್/ಬಿಪಿಎಲ್ ಮತ್ತು ಅಂತ್ಯೋದಯ ಕಾರ್ಡುಗಳಿವೆ ; ಎಪಿಎಲ್/ಬಿಪಿಎಲ್ ಮತ್ತು ಅಂತ್ಯೋದಯ ಕಾರ್ಡ್ ಹೊಂದಿದವರಿಗೆ ವಿತರಿಸಲಾಗುವ ತಲಾ ಅಕ್ಕಿಯ ಪ್ರಮಾಣವೆಷ್ಟು; ರಾಜ್ಯದಲ್ಲಿರುವ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಪ್ರತಿ ತಿಂಗಳು ವಿತರಿಸದಿರುವ ಅಕ್ಕಿಯನ್ನು ಯಾವ ರೀತಿಯಾಗಿ ಬಳಸಿಕೊಳ್ಳಲಾಗುತ್ತದೆ; ಬಡವರಿಗೆ ಸರ್ಕಾರವು ನೀಡುವ ಅಕ್ಕಿಯನ್ನು ನ್ಯಾಯಬೆಲೆ ಅಂಗಡಿಯ ಮಾಲೀಕರು ವಿತರಿಸದೆ ಬಡವರಿಗೆ ವಿತರಿಸಿದೆಯೆಂದು ಸರ್ಕಾರಕ್ಕೆ ಸುಳ್ಳು ಲೆಕ್ಕ ತೋರಿಸುವ ಮೂಲಕ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಈ ರೀತಿಯಾಗಿ ವಂಚಿಸುತ್ತಿರುವ ನ್ಯಾಯಬೆಲೆ ಅಂಗಡಿಯ ಮಾಲೀಕರ ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ ; ಕಳೆದ ೬ ತಿಂಗಳಿನಲ್ಲಿ ಈ ರೀತಿಯ ಎಷ್ಟು ಪ್ರಕರಣಗಳು ದಾಖಲಾಗಿವೆ ;

(ಈ) ಬಡವರಿಗೆ ಕಡಿಮೆ ದರದಲ್ಲಿ ಅಥವಾ ಉಚಿತವಾಗಿ ಅಕ್ಕಿಯನ್ನು ವಿತರಿಸಲು ಸರ್ಕಾರವು ಕಳೆದ ೬ ತಿಂಗಳಿನಿಂದ ಎಷ್ಟು ವೆಚ್ಚ ಮಾಡಿದೆ ? (ತಿಂಗಳುವಾರು ವಿವರ ನೀಡುವುದು)

## ವಿದ್ಯುತ್ ವೆಚ್ಚದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೮ (೩೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಒಂದು ಯೂನಿಟ್ ವಿದ್ಯುತ್ ತಯಾರಿಸಲು ತಗುಲುವ ವೆಚ್ಚ ಎಷ್ಟು; ಅದರ ಸಾಗಾಟದಲ್ಲಿ ಆಗುವ ನಷ್ಟ ಎಷ್ಟು; ಒಂದು

ಯೂನಿಟ್‌ಗೆ ಎಷ್ಟು ದರವನ್ನು ಗ್ರಾಹಕರಿಂದ ಭರಿಸಲಾಗುತ್ತಿದೆ ; (ವಿವರ ನೀಡುವುದು)

(ಆ) ಕಳೆದ ಒಂದು ವರ್ಷದಲ್ಲಿ ಗೃಹ ಜ್ಯೋತಿ ಯೋಜನೆಯ ಅನ್ವಯ ಎಷ್ಟು ಮನೆಗಳು ಉಚಿತ ವಿದ್ಯುತ್ ಸೌಲಭ್ಯವನ್ನು ಪಡೆಯುತ್ತಿವೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ವಾಣಿಜ್ಯ ವ್ಯವಹಾರಗಳ ಗ್ರಾಹಕರಿಗೆ ಒಂದು ಯೂನಿಟ್‌ಗೆ ಎಷ್ಟು ಮೊತ್ತವನ್ನು ವಿಧಿಸಲಾಗುತ್ತದೆ ;

(ಈ) ದೇವಸ್ಥಾನಗಳಿಗೆ ಒಂದು ಯೂನಿಟ್ ಗೆ ಎಷ್ಟು ಮೊತ್ತ ವಿಧಿಸಲಾಗುತ್ತದೆ ;

(ಉ) ಚರ್ಚ್ ಹಾಗೂ ಗುರುದ್ವಾರಗಳಿಗೆ ಒಂದು ಯೂನಿಟ್‌ಗೆ ಎಷ್ಟು ಮೊತ್ತ ವಿಧಿಸಲಾಗುತ್ತದೆ ;

(ಊ) ಮಸೀದಿ ಹಾಗೂ ಮದರಸಗಳಿಗೆ ಒಂದು ಯೂನಿಟ್ ಗೆ ಎಷ್ಟು ಮೊತ್ತ ವಿಧಿಸಲಾಗುತ್ತದೆ ? (ವಿವರ ನೀಡುವುದು)

## ಅನುದಾನಿತ ಶಾಲಾ ಕಾಲೇಜುಗಳ ಮಾನ್ಯತೆ ನವೀಕರಿಸುವ ಬಗ್ಗೆ

**ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೭೯ (೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಶಾಲಾ ಕಾಲೇಜುಗಳಿಗೆ ಖಾಯಂ ಮಾನ್ಯತೆಯಿದ್ದರೂ ಪ್ರತಿ ವರ್ಷ ನವೀಕರಣ ಮಾಡುವ ಪದ್ಧತಿ ಜಾರಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪ್ರತಿ ವರ್ಷ ನವೀಕರಣ ಮಾಡಿಕೊಳ್ಳುವುದಕ್ಕೆ ಕಾರಣವೇನು ;

(ಆ) ಹಾಜರಾತಿ ಕೊರತೆಯಿರುವ ಅನುದಾನಿತ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳ ಕುರಿತು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಕನಿಷ್ಠ ಹಾಜರಾತಿಯಿರುವ ಅನುದಾನಿತ ಪ್ರೌಢಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರಿಗೆ ವೇತನ ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ವಿದ್ಯಾರ್ಥಿಗಳ ಕೊರತೆಯಿಂದ ಅನುದಾನಿತ ಶಾಲೆಗಳನ್ನು ಮುಚ್ಚುವ ಸ್ಥಿತಿ ಬಂದರೆ ಕಾರ್ಯ ನಿರ್ವಹಿಸುವ ಶಿಕ್ಷಕರನ್ನು ಸರ್ಕಾರಿ ಶಾಲೆಗಳಿಗೆ ನಿಯೋಜನೆ ಮಾಡುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ ?

## ವಿಶ್ವ ವಿದ್ಯಾಲಯಗಳಲ್ಲಿ ಪ್ರವರ್ಗ–೧ರ ಜಾತಿಯವರಿಗೆ ನಿಗಧಿಪಡಿಸಿರುವ ಮೀಸಲಾತಿ ಕುರಿತು

**ಶ್ರೀ ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೧೦ (೦೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವ ವಿದ್ಯಾಲಯಗಳ ಅಧೀನದಲ್ಲಿ ಬರುವ ಕಾಲೇಜುಗಳಲ್ಲಿ ಪ್ರವೇಶ ನೀಡುವಾಗ ಪ್ರವರ್ಗ–೧ರ ಜಾತಿಗಳಿಗೆ ಮೀಸಲಾತಿ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು)

(ಆ) ವಿಶ್ವ ವಿದ್ಯಾಲಯಗಳ ವ್ಯಾಪ್ತಿಯಲ್ಲಿ ಬರುವ ಸ್ನಾತಕೋತ್ತರ ಕೇಂದ್ರಗಳಲ್ಲಿ ಪ್ರವರ್ಗ–೧ರ ಜಾತಿಗಳಿಗೆ ಹಿಂದೆ ಇದ್ದ ವಿಶೇಷ ಕೋಶವನ್ನು ತೆಗೆದು ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದ ವಿವಿಧ ವಿಶ್ವ ವಿದ್ಯಾಲಯಗಳಲ್ಲಿ ಪ್ರವರ್ಗ–೧ರ ಜಾತಿಗಳ ವಿದ್ಯಾರ್ಥಿಗಳಿಗೆ ಬೇರೆ ಬೇರೆ ವಿಶ್ವವಿದ್ಯಾಲಯಗಳಲ್ಲಿ ನಿಗಧಿಪಡಿಸಿರುವ ಪ್ರವೇಶ ಶುಲ್ಕದಲ್ಲಿ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಖಾಸಗಿ ಶಾಲಾ ಕಾಲೇಜುಗಳ ಸಿಬ್ಬಂದಿ ಪಿಂಚಣಿ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೧೧೧ (೧೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ: ೦೧.೦೪.೨೦೦೬ ಕ್ಕಿಂತ ೦೫ ವರ್ಷಗಳ ಪೂರ್ವದಲ್ಲಿ ಅಧಿಸೂಚನೆ ಹೊರಡಿಸಿ ನೇಮಕಾತಿಯಾದ ಖಾಸಗಿ ಅನುದಾನಿತ ಶಾಲಾ ಕಾಲೇಜುಗಳ ಸಿಬ್ಬಂದಿ ವಿವರಗಳನ್ನು ವರ್ಷಾವಾರು ನೀಡುವುದು ;

(ಆ) ಈ ರೀತಿ ನೇಮಕವಾದ ಸಿಬ್ಬಂದಿ ವರ್ಗದವರಿಗೆ ಪಿಂಚಣಿ ವ್ಯವಸ್ಥೆ ನೀಡಲಾಗಿದೆಯೇ ; ನೀಡದೇ ಇದ್ದಲ್ಲಿ, ಕಾರಣಗಳೇನು ?

## ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಗೆ CET/NEET ಪರೀಕ್ಷೆಯ ಮಾನ್ಯತೆ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೧೧೨ (೧೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) CET ಮತ್ತು NEET ಪರೀಕ್ಷೆಗಳಲ್ಲಿ ಹಿಂದುಳಿದ ವರ್ಗಗಳ ಅಲೆಮಾರಿ ಮತ್ತು ಅರೆ ಅಲೆಮಾರಿ ವಿದ್ಯಾರ್ಥಿಗಳಿಗೆ ವಿಶೇಷ ಪ್ರಾತಿನಿಧ್ಯ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಆ) CET ಮತ್ತು NEET ಪರೀಕ್ಷೆಗಳಲ್ಲಿ ಹಿಂದುಳಿದ ವರ್ಗಗಳ ಅಲೆಮಾರಿ ಮತ್ತು ಅರೆ ಅಲೆಮಾರಿ ವಿದ್ಯಾರ್ಥಿಗಳಿಗೆ ನಿಗಧಿ ಪಡಿಸಿರುವ ಸೀಟುಗಳ ಸಂಖ್ಯೆ ಎಷ್ಟು ;

(ಇ) ೨೦೨೩-೨೪ನೇ ಸಾಲಿನಲ್ಲಿ CET ಮತ್ತು NEET ಪರೀಕ್ಷೆಗಳಲ್ಲಿ ಆಯ್ಕೆಯಾಗಿರುವ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

## ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ಸಿಬ್ಬಂದಿ ಭರ್ತಿ ಮಾಡುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :-**

೧೧೩ (೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಸರ್ಕಾರಿ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ ನಿಗಧಿತ ಸಮಯದಲ್ಲಿ ವೇತನ ಪಾವತಿ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಪ್ರತಿ ಸರ್ಕಾರಿ ಶಾಲೆಗಳಲ್ಲಿ ದೈಹಿಕ ಶಿಕ್ಷಕರನ್ನು ನೇಮಕ ಮಾಡಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ವೇತನ ಮುಂಬಡ್ತಿ ಸಿಗದೆ ಇರುವುದರ ಕುರಿತು

**ಡಾ. ಚಂದ್ರಶೇಖರ್ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೧೪ (೯೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜಿಗೆ ಬಡ್ತಿ ಹೊಂದಿದ ಶಿಕ್ಷಕರಿಗೆ ಮತ್ತು

ಉಪನ್ಯಾಸಕರಿಗೆ ೧೦,೧೫,೨೦ ವರ್ಷಗಳ ಕಾಲ್ಪನಿಕ ವೇತನ ಬಡ್ತಿ ಸಿಗದೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಯಾವ ಕಾಲಮಿತಿಯೊಳಗೆ ಕಾಲ್ಪನಿಕ ವೇತನ ಬಡ್ತಿ ನೀಡಲಾಗುವುದು ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. O119/400 ಪ್ರತಿಗಳು/26-11-2024